Volume : 9 | Issue : 191 | October : 17 : 2026 : Saturday
ಸಂಪುಟ : 9 | ಸಂಚಿಕೆ : 191 | ಅಕ್ಟೋಬರ್ : 17 : 2026 : ಶನಿವಾರ

www.VIKRAMAVAHINI.com

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

# ವಿಕ್ರಮ ವಾಹಿನಿ

ಪುಟ 4 ₹2 || ಕನ್ನಡ ದಿನಪತ್ರಿಕೆ ||

VIKRAMA VAHINI
PRGI NO: KARKAN/2018/78481





'ನಯಿ ನವೇಲಿ'ಯಲ್ಲಿ ಮೋಹಿನಿಯಾಗಿ ಯಾಮಿ ಗೌತಮ್; ಹಾರರ್ ಕಾಮಿಡಿ ಮೂಲಕ ಪ್ರೇಕ್ಷಕರ ಮನಗೆಲ್ಲುವ ನಿರೀಕ್ಷೆ. ನವರಾತ್ರಿ ಹಿನ್ನೆಲೆಯಲ್ಲಿ ಬಿಡುಗಡೆಯಾದ ಈ ಫ್ಯಾಂಟಸಿ ಚಿತ್ರಕ್ಕೆ ಯಾಮಿಯ ಅಭಿನಯವೇ ಪ್ರಮುಖ ಆಕರ್ಷಣೆಯಾಗಿದೆ.

"ಸುಪ್ರೀಂ ಕೋರ್ಟ್‌ಗೆ ತಪ್ಪು ಮಾಹಿತಿ" ಪುಟ 2

'ಕಾಂಗ್ರೆಸ್ ವಿರುದ್ಧ ಜನಾಕ್ರೋಶ; ನಾಲ್ಕೂ ವಿಧಾನ ಪರಿಷತ್ ಕ್ಷೇತ್ರಗಳಲ್ಲಿ ಎನ್‌ಡಿಎ ಗೆಲುವು ಖಚಿತ' ಪುಟ 3

# "ಕುಟುಂಬಕ್ಕೊಂದು ಸರ್ಕಾರಿ ಉದ್ಯೋಗ"

**ಪ್ರತಿ ಕುಟುಂಬಕ್ಕೂ ಕನಿಷ್ಠ ಒಂದು ಸರ್ಕಾರಿ ಉದ್ಯೋಗ ಕಲ್ಪಿಸುವ ಉದ್ದೇಶದಿಂದ ಸರ್ಕಾರಿ ನೌಕರರ ಸೇವಾವಧಿಯನ್ನು 35 ವರ್ಷಗಳಿಂದ 10ರಿಂದ 20 ವರ್ಷಗಳಿಗೆ ಇಳಿಸುವ ಹೊಸ ಪ್ರಸ್ತಾವವನ್ನು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಮುಂದಿಟ್ಟಿದ್ದಾರೆ. ಇದೇ ವೇಳೆ, ಕೆಪಿಎಸ್‌ಸಿ ನೇಮಕಾತಿ ಅಕ್ರಮಗಳ ಕುರಿತು ಸಮಗ್ರ ತನಿಖೆ ನಡೆಸಿ ಅರ್ಹ ಅಭ್ಯರ್ಥಿಗಳಿಗೆ ನ್ಯಾಯ ಒದಗಿಸಬೇಕು ಎಂದು ಆಗ್ರಹಿಸಿದ್ದಾರೆ.**




● ವಿಕ್ರಮ ವಾಹಿನಿ । ಬೆಂಗಳೂರು

ಪ್ರತಿ ಕುಟುಂಬಕ್ಕೂ ಕನಿಷ್ಠ ಒಂದು ಸರ್ಕಾರಿ ಉದ್ಯೋಗ ಕಲ್ಪಿಸುವ ಉದ್ದೇಶದಿಂದ ಸರ್ಕಾರಿ ನೌಕರರ ಸೇವಾವಧಿಯನ್ನು ಈಗಿನ 35 ವರ್ಷಗಳಿಂದ 10ರಿಂದ 15 ಅಥವಾ 20 ವರ್ಷಗಳಿಗೆ ಇಳಿಸುವ ಹೊಸ ಆಲೋಚನೆಯನ್ನು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಪ್ರಸ್ತಾಪಿಸಿದ್ದಾರೆ. ಈ ಕುರಿತು ಸಾರ್ವಜನಿಕ ಚರ್ಚೆ ನಡೆಯಲಿ. ಭವಿಷ್ಯದಲ್ಲಿ ಅವಕಾಶ ಸಿಕ್ಕರೆ ಯೋಜನೆಯನ್ನು ಅನುಷ್ಠಾನಗೊಳಿಸುವ ಉದ್ದೇಶವಿದೆ ಎಂದು ಅವರು ತಿಳಿಸಿದ್ದಾರೆ.

ಬೆಂಗಳೂರಿನ ವಿಜಯನಗರದ ಬಂಟರ ಸಂಘದಲ್ಲಿ ಕೆಪಿಎಸ್‌ಸಿ ಸುಧಾರಣೆ, ನೇಮಕಾತಿ ಅಕ್ರಮ ಹಾಗೂ ಉದ್ಯೋಗ ಸೃಷ್ಟಿ ಕುರಿತು ಅಭ್ಯರ್ಥಿಗಳು ಮತ್ತು ಉದ್ಯೋಗ ವಂಚಿತರೊಂದಿಗೆ ನಡೆದ ಮುಕ್ತ ಸಂವಾದದಲ್ಲಿ ಅವರು ಈ ಪ್ರಸ್ತಾವ ಮುಂದಿಟ್ಟರು.

ಸರ್ಕಾರಿ ನೌಕರರು ನಿಗದಿತ ಸೇವಾವಧಿಯ ಬಳಿಕ ನಿವೃತ್ತರಾದರೂ ಪಿಂಚಣಿ ಸೇರಿದಂತೆ ನಿವೃತ್ತಿ ಸೌಲಭ್ಯಗಳನ್ನು ಪಡೆಯುವ ವ್ಯವಸ್ಥೆ ಮುಂದುವರಿಯಬೇಕು. ಸೇವಾವಧಿ ಕಡಿತಗೊಳಿಸುವ ಮೂಲಕ ಹೊಸಬರಿಗೆ ಉದ್ಯೋಗಾವಕಾಶ ಕಲ್ಪಿಸಲು ಸಾಧ್ಯವೇ ಎಂಬುದನ್ನು ಪರಿಶೀಲಿಸಬೇಕು. ಪ್ರತಿ ಮನೆಗೂ ಕನಿಷ್ಠ ಒಂದು ಸರ್ಕಾರಿ ಉದ್ಯೋಗ ದೊರೆಯಬೇಕು ಎಂಬುದು ತಮ್ಮ ಆಶಯ ಎಂದು ಹೇಳಿದರು.

ನಿರುದ್ಯೋಗ ಸಮಸ್ಯೆ ಗಂಭೀರವಾಗಿದ್ದು, ಅರ್ಹರಿಗೆ ಸರ್ಕಾರಿ ಉದ್ಯೋಗ ಕಲ್ಪಿಸುವಲ್ಲಿ ವ್ಯವಸ್ಥೆ ವಿಫಲವಾಗುತ್ತಿದೆ ಎಂದು ಟೀಕಿಸಿದ ಅವರು, ಈ ಆಲೋಚನೆಯ ಕುರಿತು ಯುವಜನರು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಳ್ಳುವಂತೆ ಮನವಿ ಮಾಡಿದರು.

**ಕೆಪಿಎಸ್‌ಸಿ ಭ್ರಷ್ಟಾಚಾರದ ಕೂಪ: ಎಚ್‌ಡಿಕೆ**

ಕರ್ನಾಟಕ ಲೋಕಸೇವಾ ಆಯೋಗ (ಕೆಪಿಎಸ್‌ಸಿ) ಪಾರದರ್ಶಕವಾಗಿ ಮತ್ತು ನ್ಯಾಯಸಮ್ಮತವಾಗಿ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಬೇಕಿತ್ತು. ಆದರೆ, ನೇಮಕಾತಿ ಪ್ರಕ್ರಿಯೆಯಲ್ಲಿ ಭ್ರಷ್ಟಾಚಾರ ಹೆಚ್ಚಾಗಿದೆ ಎಂಬ ಆರೋಪಗಳಿವೆ. ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್‌ಗಳು, ಪಶುವೈದ್ಯಾಧಿಕಾರಿಗಳು ಹಾಗೂ ಕೆಎಎಸ್ ನೇಮಕಾತಿಗಳಲ್ಲಿ ಅಕ್ರಮ ಮತ್ತು ಸ್ವಜನಪಕ್ಷಪಾತ ನಡೆದಿರುವ ದೂರುಗಳು ಕೇಳಿಬಂದಿವೆ ಎಂದು ಕುಮಾರಸ್ವಾಮಿ ಆರೋಪಿಸಿದರು.

ನೇಮಕಾತಿ ಪ್ರಕ್ರಿಯೆಯಲ್ಲಿ ಹಣದ ವ್ಯವಹಾರ, ಜಾತಿ ಆಧಾರಿತ ಪಕ್ಷಪಾತ ಹಾಗೂ ಅರ್ಹ ಅಭ್ಯರ್ಥಿಗಳಿಗೆ ಅನ್ಯಾಯವಾಗುತ್ತಿರುವ ಬಗ್ಗೆ ಗಂಭೀರ ತನಿಖೆ ನಡೆಯಬೇಕು. ಸಂಸ್ಥೆಯ ಕಾರ್ಯವೈಖರಿಯಲ್ಲಿ ಸುಧಾರಣೆ ತಂದು, ಅರ್ಹರಿಗೆ ನ್ಯಾಯ ದೊರಕಿಸಿಕೊಡಬೇಕು ಎಂದು ಒತ್ತಾಯಿಸಿದರು.

**ಅಭ್ಯರ್ಥಿಗಳಿಂದ ಅಕ್ರಮಗಳ ಆರೋಪ:** ಸಂವಾದದಲ್ಲಿ ಭಾಗವಹಿಸಿದ್ದ ಉದ್ಯೋಗಾಕಾಂಕ್ಷಿಗಳು ಕೆಪಿಎಸ್‌ಸಿ ಪರೀಕ್ಷಾ ವಿಧಾನ, ಪ್ರಶ್ನೆಪತ್ರಿಕೆಗಳಲ್ಲಿನ ಮುದ್ರಣ ದೋಷಗಳು, ಒಎಂಆರ್ ಶೀಟ್‌ಗಳ ತಿದ್ದುಪಡಿ ಹಾಗೂ ನೇಮಕಾತಿ ವಿಳಂಬದ ಕುರಿತು ಅಸಮಾಧಾನ ವ್ಯಕ್ತಪಡಿಸಿದರು.

ಉತ್ತರ ಕರ್ನಾಟಕದಿಂದ ಬೆಂಗಳೂರಿಗೆ ಬಂದು ಬಾಡಿಗೆ ಕೊಠಡಿಗಳಲ್ಲಿ ಉಳಿದು ಪರೀಕ್ಷೆಗೆ ಸಿದ್ಧತೆ

## ಸ್ಟಿಂಗ್ ಆಪರೇಷನ್ ಮಾಡಲು ರೂ 10-15 ಕೋಟಿ ಖರ್ಚು

● ವಿಕ್ರಮ ವಾಹಿನಿ । ರಾಮನಗರ

ಮಾಜಿ ಮುಖ್ಯಮಂತ್ರಿ ವಿರುದ್ಧ ಸ್ಟಿಂಗ್ ಮಾಡುವುದಕ್ಕೆ ಅಪಾರ ಪ್ರಮಾಣದ ಹಣ ಕೈ ಬದಲಾಗಿದ್ದು, ಜಾರಿ ನಿರ್ದೇಶನಾಲಯ ಮತ್ತು ತೆರಿಗೆ ಇಲಾಖೆ ತನಿಖೆ ನಡೆಸಬೇಕು ಎಂದು ಕೇಂದ್ರ ಸಚಿವ ಎಚ್ ಡಿ ಕುಮಾರಸ್ವಾಮಿ ಅವರು ಹೇಳಿದರು. ರಾಮನಗರ ಜಿಲ್ಲೆಯ ಬಿಡದಿಯಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಸಚಿವರು; ರಾಜ್ಯದಲ್ಲಿ ಸ್ಟಿಂಗ್ ಅಪರೇಷನ್ ದೊಡ್ಡದಾಗಿ ಸದ್ದು ಮಾಡುತ್ತಿದೆ. ಸ್ಟಿಂಗ್ ಮಾಡಲು ರೂ 10ರಿಂದ ರೂ 15 ಕೋಟಿ ಖರ್ಚು ಮಾಡಿದ್ದಾರೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಹೇಳಿದ್ದಾರೆ. ಅದರ ಬಗ್ಗೆ ತನಿಖೆ ಅಗತ್ಯವಿದೆ ಎಂದರು.

ನೀವು ಕೇವಲ ಹಣದ ಬಗ್ಗೆ ಯಾಕೆ ಲೆಕ್ಕ ಹಾಕುತ್ತಿರಾ? ಅದೆಲ್ಲ ಹೊರಗೆ ಬಂದರೆ ನಮ್ಮ ರಾಜ್ಯದ ಮಾನ ಮಾರ್ಯಾದೆ ಮೂರು ಕಾಸಿಗೂ ಇರಲ್ಲ. ಇವತ್ತು ಆ ರೀತಿಯ ವಾತವರಣ ನಿರ್ಮಾಣ ಆಗಿದೆ. ರೂ 15 ಕೋಟಿಗಿಂತಲೂ ಹೆಚ್ಚಿನ ವ್ಯವಹಾರ ನಡೆದಿದೆ. ಇಡಿ ಏನಾದರೂ ಪ್ರವೇಶವಾದರೆ ಸತ್ಯ ಹೊರಗೆ ಬರುತ್ತದೆ. ಹಣಕಾಸು ಹೇಗೆಲ್ಲ ಹರಿದಾಡಿದೆ ಎಂಬ ಮಾಹಿತಿ ಸಿಗುತ್ತದೆ ಎಂದು ಅವರು ತಿಳಿಸಿದರು.

# 'ದೇಶವನ್ನು ಅಭದ್ರಗೊಳಿಸುವ ಶಕ್ತಿಗಳಿಗೆ ಕಾಂಗ್ರೆಸ್ ಸರ್ಕಾರದ ಹಣ'

● ವಿಕ್ರಮ ವಾಹಿನಿ । ಬೆಂಗಳೂರು

ದೇಶದಲ್ಲಿ ಅಶಾಂತಿ ಸೃಷ್ಟಿಸುವ ಶಕ್ತಿಗಳಿಗೆ ಕರ್ನಾಟಕದ ಕಾಂಗ್ರೆಸ್ ಸರ್ಕಾರ ಹಣಕಾಸಿನ ನೆರವು ನೀಡುತ್ತಿದೆ. ಕನ್ನಡಿಗರ ತೆರಿಗೆ ಹಣವನ್ನು ದೆಹಲಿಯ ಪ್ರತಿಭಟನೆಗಳಿಗೆ ಬಳಸಲಾಗುತ್ತಿದೆ ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಗಂಭೀರ ಆರೋಪ ಮಾಡಿದ್ದಾರೆ.

ಬೆಂಗಳೂರಿನ ವಿಜಯನಗರದ ಬಂಟರ ಸಂಘದಲ್ಲಿ ಕೆಪಿಎಸ್‌ಸಿ ನೇಮಕಾತಿ ಅಕ್ರಮಗಳ ಕುರಿತು ಅಭ್ಯರ್ಥಿಗಳು, ಉದ್ಯೋಗ ವಂಚಿತರು ಹಾಗೂ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸುವ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗೃಹ ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ವಾಗ್ದಾಳಿ ನಡೆಸಿದರು.

ನವದೆಹಲಿಯಲ್ಲಿ ನಡೆಯುತ್ತಿರುವ ಪ್ರತಿಭಟನೆಗಳಿಗೆ ಕಾಂಗ್ರೆಸ್ ಬೆಂಬಲ ನೀಡುತ್ತಿದೆ ಎಂಬುದಕ್ಕೆ ಪ್ರಿಯಾಂಕ್ ಖರ್ಗೆ ಅವರ ಹೇಳಿಕೆ ಸಾಕ್ಷಿಯಾಗಿದೆ



## ವಿಡಿಯೋ ಅಸ್ತ್ರ ಹಿಡಿದು ಪ್ರಿಯಾಂಕ್ ಖರ್ಗೆ ವಿರುದ್ಧ ಎಚ್‌ಡಿಕೆ ವಾಗ್ದಾಳಿ

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದಲ್ಲಿ ಸ್ಟಿಂಗ್ ಕಾರ್ಯಾಚರಣೆ ವಿವಾದ ತೀವ್ರಗೊಂಡಿರುವ ಬೆನ್ನಲ್ಲೇ, ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಗೃಹ ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ವೈರಲ್ ಆಗಿರುವ ವಿಡಿಯೋವೊಂದನ್ನು ಪ್ರದರ್ಶಿಸಿದ ಅವರು, ಕಾಂಗ್ರೆಸ್ ಮತ್ತು ಸಿಜೆಪಿ ನಡುವಿನ ಸಂಬಂಧದ ಕುರಿತು ಗಂಭೀರ ಆರೋಪಗಳನ್ನು ಮಾಡಿದ್ದಾರೆ.

ವಿಡಿಯೋದಲ್ಲಿನ ಹೇಳಿಕೆಯನ್ನು ಉಲ್ಲೇಖಿಸಿದ ಕುಮಾರಸ್ವಾಮಿ, "ನೀವೇನು ಬೇಕಾದರೂ ಗಲಾಟೆ ಮಾಡಿ, ನಿಮ್ಮ ವಿರುದ್ಧ ಪೊಲೀಸರು ಕ್ರಮ ಕೈಗೊಳ್ಳುವುದಿಲ್ಲ" ಎಂಬ ಸಂದೇಶವನ್ನು ಸಿಜೆಪಿ ಪರವಾಗಿ ಪ್ರಿಯಾಂಕ್ ಖರ್ಗೆ ನೀಡಿದ್ದಾರೆ ಎಂದು ಆರೋಪಿಸಿದರು. "ಅಪ್ಪಾ, ನಮ್ಮ ಗೃಹ ಸಚಿವರೇ, ಇದು ನಿಮ್ಮ ಹೇಳಿಕೆಯೇ?" ಎಂದು ಪ್ರಶ್ನಿಸಿ ಆಕ್ರೋಶ ವ್ಯಕ್ತಪಡಿಸಿದರು.

ಗೃಹ ಸಚಿವರ ಈ ಹೇಳಿಕೆ ಕಾನೂನು ಸುವ್ಯವಸ್ಥೆಯ ಮೇಲೆ ಪರಿಣಾಮ ಬೀರಲಿದೆ ಎಂದು ಕುಮಾರಸ್ವಾಮಿ ಟೀಕಿಸಿದರು. ಅಲ್ಲದೆ, "ಕಾಂಗ್ರೆಸ್ ಮತ್ತು ಸಿಜೆಪಿ ಎರಡೂ ಒಂದೇ" ಎಂದು ಆರೋಪಿಸಿದ ಅವರು, ಸಿಜೆಪಿಯ ಚಟುವಟಿಕೆಗಳಿಗೆ ರಾಜ್ಯದಿಂದಲೇ ಹಣಕಾಸು ನೆರವು ಹರಿದುಹೋಗುತ್ತಿದೆ ಎಂಬ ಗಂಭೀರ ಆರೋಪವನ್ನೂ ಮಾಡಿದರು. ರಾಜ್ಯದ ಹಣವನ್ನು ದುರುಪಯೋಗಪಡಿಸಿಕೊಂಡು ದೇಶದ ಭದ್ರತೆಗೆ ಧಕ್ಕೆ ತರುವ ಚಟುವಟಿಕೆಗಳಿಗೆ ಬಳಸಲಾಗುತ್ತಿದೆ ಎಂದು ಕುಮಾರಸ್ವಾಮಿ ದೂರಿದರು. ಈ ಆರೋಪಗಳ ಕುರಿತು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರ ಪ್ರತಿಕ್ರಿಯೆ ಲಭ್ಯವಿಲ್ಲ.

ಎಂದು ಕುಮಾರಸ್ವಾಮಿ ಆರೋಪಿಸಿದರು. ಕಾಂಗ್ರೆಸ್ ಮತ್ತು ಸಿಜೆಪಿ ಒಂದೇ ಎಂದು ಖರ್ಗೆ ಹೇಳಿರುವುದು, ಪ್ರತಿಭಟನಾಕಾರರ ವಿರುದ್ಧ ಕ್ರಮ ಕೈಗೊಳ್ಳುವುದಿಲ್ಲ ಎಂಬ ಸಂದೇಶ ನೀಡಿದಂತಿದೆ. ಜವಾಬ್ದಾರಿಯುತ ಸ್ಥಾನದಲ್ಲಿರುವ ಗೃಹ ಸಚಿವರು ಇಂತಹ ಹೇಳಿಕೆ ನೀಡಿರುವುದು ಆತಂಕಕಾರಿ ಎಂದು ಟೀಕಿಸಿದರು.

ರಾಜ್ಯದಲ್ಲಿ ಸಾಮಾಜಿಕ ಜಾಲತಾಣಗಳಲ್ಲಿ ಪೋಸ್ಟ್ ಹಾಕುವವರ ವಿರುದ್ಧ ಪ್ರಕರಣ ದಾಖಲಿಸುವ ಸರ್ಕಾರ, ಪ್ರತಿಭಟನೆಗಳ ಹೆಸರಿನಲ್ಲಿ ಅಶಾಂತಿ ಸೃಷ್ಟಿಸುವವರ ವಿರುದ್ಧ ಕ್ರಮ ಕೈಗೊಳ್ಳುತ್ತಿಲ್ಲ ಎಂದು ದೂರಿದರು. ಸಿಜೆಪಿಯ ಚಟುವಟಿಕೆಗಳಿಗೆ ಹಣ ಎಲ್ಲಿಂದ ಬರುತ್ತಿದೆ, ಪ್ರತಿಭಟನೆಗಳಿಗೆ ಯಾರು ಹಣಕಾಸು ಒದಗಿಸುತ್ತಿದ್ದಾರೆ ಎಂಬುದನ್ನು ಪ್ರಿಯಾಂಕ್ ಖರ್ಗೆ ಸ್ಪಷ್ಟಪಡಿಸಬೇಕು ಎಂದು ಒತ್ತಾಯಿಸಿದರು.

2ನೇ ಪುಟಕ್ಕೆ...

## ■ ಸುದ್ದಿ ಚುಟುಕು

### ಪಾಕಿಸ್ತಾನದಲ್ಲಿ ಶಾಲೆ ಕುಸಿತ: 29 ಮಕ್ಕಳ ದುರ್ಮರಣ

● ವಿಕ್ರಮ ವಾಹಿನಿ । ಪೇಶಾವರ

ಪಾಕಿಸ್ತಾನದ ಖೈಬರ್ ಪಖ್ತುಂಕ್ವಾ ಪ್ರಾಂತ್ಯದ ರಾಜಧಾನಿ ಪೇಶಾವರದಲ್ಲಿ ಖಾಸಗಿ ಶಾಲೆಯೊಂದರ ಮೇಲ್ಛಾವಣಿ ಕುಸಿದು ಓರ್ವ ಶಿಕ್ಷಕಿ ಸೇರಿದಂತೆ 29 ಮಂದಿ ಮೃತಪಟ್ಟಿದ್ದಾರೆ. 40ಕ್ಕೂ ಹೆಚ್ಚು ಮಕ್ಕಳು ಗಾಯಗೊಂಡಿದ್ದು, ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಪೇಶಾವರದ ದಿರ್ ಕಾಲೋನಿ ಪ್ರದೇಶದಲ್ಲಿ ಗುರುವಾರ ಈ ದುರಂತ ಸಂಭವಿಸಿದೆ. ಮೃತಪಟ್ಟವರಲ್ಲಿ ಆರು ಬಾಲಕಿಯರು, ಓರ್ವ ಶಿಕ್ಷಕಿ ಹಾಗೂ ಇತರ ಬಾಲಕರು ಸೇರಿದ್ದಾರೆ. ಮೃತ ಮಕ್ಕಳ ಪೈಕಿ ಬಹುತೇಕರು 13 ವರ್ಷ ಅಥವಾ ಅದಕ್ಕಿಂತ ಕಡಿಮೆ ವಯಸ್ಸಿನವರಾಗಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಘಟನೆಯ ಬೆನ್ನಲ್ಲೇ ಗಾಯಾಳುಗಳಿಗೆ ಚಿಕಿತ್ಸೆ ನೀಡಲು ಆಸ್ಪತ್ರೆಯಲ್ಲಿ ತುರ್ತು ಪರಿಸ್ಥಿತಿ ಘೋಷಿಸಲಾಗಿದೆ. ಕಟ್ಟಡ ಕುಸಿತಕ್ಕೆ ಕಾರಣವೇನು ಎಂಬುದರ ಕುರಿತು ತನಿಖೆಗೆ ಆದೇಶಿಸಲಾಗಿದ್ದು, ಶಾಲೆಯ ಮಾಲೀಕರನ್ನು ಪೊಲೀಸರು ಬಂಧಿಸಿದ್ದಾರೆ.

ದುರಂತಕ್ಕೆ ಪಾಕಿಸ್ತಾನದ ಪ್ರಧಾನಿ ಶೆಹಬಾಜ್ ಷರೀಫ್ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ. ಮೃತರ ಕುಟುಂಬಗಳಿಗೆ ಸಾಂತ್ವನ ಹೇಳಿರುವ ಅವರು, ಗಾಯಾಳುಗಳಿಗೆ ಅತ್ಯುತ್ತಮ ವೈದ್ಯಕೀಯ ಚಿಕಿತ್ಸೆ ಒದಗಿಸುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ರಾಜ್ಯಪಾಲ ಫೈಸಲ್ ಕರೀಮ್ ಕೂಡ ಘಟನೆಗೆ ದುಃಖ ವ್ಯಕ್ತಪಡಿಸಿದ್ದಾರೆ.

## ಸಿಹಿ ತಿಂಡಿ ಮಳಿಗೆಗಳ ಮೇಲೆ ತಪಾಸಣೆ: 145 ಆಹಾರ ಮಾದರಿ ಸಂಗ್ರಹ

**ರಾಜ್ಯಾದ್ಯಂತ ಸಿಹಿ ತಿಂಡಿ ತಯಾರಿಕಾ ಘಟಕಗಳು ಹಾಗೂ ಮಾರಾಟ ಮಳಿಗೆಗಳ ಮೇಲೆ ಆಹಾರ ಸುರಕ್ಷತಾ ಇಲಾಖೆ ವಿಶೇಷ ತಪಾಸಣೆ ನಡೆಸಿದ್ದು, ಎರಡನೇ ದಿನ 90 ಘಟಕಗಳನ್ನು ಪರಿಶೀಲಿಸಿ 145 ಆಹಾರ ಮಾದರಿಗಳನ್ನು ಸಂಗ್ರಹಿಸಿದೆ. ಅನೈರ್ಮಲ್ಯ ಹಾಗೂ ಇತರ ನಿಯಮ ಉಲ್ಲಂಘನೆ ಹಿನ್ನೆಲೆಯಲ್ಲಿ 15 ಘಟಕಗಳಿಗೆ ನೋಟಿಸ್ ನೀಡಲಾಗಿದ್ದು, ಇಬ್ಬರಿಗೆ ಒಟ್ಟು 7,000 ದಂಡ ವಿಧಿಸಲಾಗಿದೆ.**

● ವಿಕ್ರಮ ವಾಹಿನಿ । ಬೆಂಗಳೂರು

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ. ಖಾದರ್ ಅವರ ನಿರ್ದೇಶನದ ಮೇರೆಗೆ, ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಆಹಾರ ಸುರಕ್ಷತಾ ವಿಭಾಗವು ರಾಜ್ಯಾದ್ಯಂತ ಸಿಹಿ ತಿಂಡಿ ತಯಾರಿಕಾ ಘಟಕಗಳು ಹಾಗೂ ಮಾರಾಟ ಮಳಿಗೆಗಳಲ್ಲಿ ವಿಶೇಷ ತಪಾಸಣಾ ಕಾರ್ಯಾಚರಣೆ ಮುಂದುವರಿಸಿದೆ. ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ, 2006 ಹಾಗೂ ಆಹಾರ ಸುರಕ್ಷತೆ ಮತ್ತು ಗುಣಮಟ್ಟ (ಪರವಾನಗಿ ಮತ್ತು ನೋಂದಣಿ) ನಿಯಮಗಳು, 2011ರನ್ವಯ ಅ. 16ರಂದು ಕಾರ್ಯಾಚರಣೆಯ ಎರಡನೇ ದಿನ ಒಟ್ಟು 90 ಸಿಹಿ ತಿಂಡಿ ತಯಾರಿಕಾ ಘಟಕಗಳು ಹಾಗೂ ಮಾರಾಟ ಮಳಿಗೆಗಳಲ್ಲಿ ತಪಾಸಣೆ ನಡೆಸಲಾಗಿದೆ.

ಈ ಸಂದರ್ಭದಲ್ಲಿ ಒಟ್ಟು 145 ಆಹಾರ ಮಾದರಿಗಳನ್ನು ಸಂಗ್ರಹಿಸಿ, ಅವುಗಳ ಗುಣಮಟ್ಟ ಮತ್ತು ಆಹಾರ ಸುರಕ್ಷತಾ ಮಾನದಂಡಗಳ ಪಾಲನೆಯನ್ನು ಪರಿಶೀಲಿಸಲು ಸಂಬಂಧಿತ ಸರ್ಕಾರಿ ಆಹಾರ ಪ್ರಯೋಗಾಲಯಗಳಿಗೆ ವಿಶ್ಲೇಷಣೆಗಾಗಿ ಕಳುಹಿಸಲಾಗಿದೆ. ತಪಾಸಣೆ ವೇಳೆ ಆಹಾರ ತಯಾರಿಕೆ ಮತ್ತು ಸಂಗ್ರಹಣಾ ಪ್ರದೇಶಗಳಲ್ಲಿ ಅನೈರ್ಮಲ್ಯ, ಆಹಾರ ನಿರ್ವಹಣಾ ಸಿಬ್ಬಂದಿ ವೈದ್ಯಕೀಯ ಕ್ಷಮತಾ ಪ್ರಮಾಣಪತ್ರಗಳನ್ನು ಹೊಂದಿರದಿರುವುದು ಹಾಗೂ ಲೇಬಲಿಂಗ್‌ನಲ್ಲಿನ ದೋಷಗಳು ಕಂಡುಬಂದಿವೆ. ಈ ಹಿನ್ನೆಲೆಯಲ್ಲಿ 15 ಸಿಹಿ ತಿಂಡಿ ತಯಾರಿಕಾ ಘಟಕಗಳು ಹಾಗೂ ಆಹಾರ ಉದ್ದಿಮೆದಾರರಿಗೆ ನೋಟಿಸ್ ಜಾರಿಗೊಳಿಸಲಾಗಿದ್ದು, ಇಬ್ಬರು ಆಹಾರ ಉದ್ದಿಮೆದಾರರಿಗೆ ಒಟ್ಟು 7,000 ದಂಡ ವಿಧಿಸಲಾಗಿದೆ. ನಿಯಮ ಉಲ್ಲಂಘಿಸುವವರ ವಿರುದ್ಧ ಕಾನೂನಿನ ಅನ್ವಯ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಆಯುಕ್ತರು ತಿಳಿಸಿದ್ದಾರೆ.

## ಕೆಪಿಎಸ್‌ಸಿ ಹಗರಣ: ಪರೀಕ್ಷಾ ಅಕ್ರಮದ ಸ್ಫೋಟಕ ಸತ್ಯ ಬಯಲು

● ವಿಕ್ರಮ ವಾಹಿನಿ । ಬೆಂಗಳೂರು

ಕರ್ನಾಟಕ ಲೋಕಸೇವಾ ಆಯೋಗದ (ಕೆಪಿಎಸ್‌ಸಿ) ನೇಮಕಾತಿ ಅಕ್ರಮ ಪ್ರಕರಣದ ತನಿಖೆ ಚುರುಕುಗೊಂಡಿದ್ದು, ಅಭ್ಯರ್ಥಿಗಳಿಗೆ ಫೈವ್‌ಸ್ಟಾರ್ ಹೋಟೆಲ್‌ನಲ್ಲಿ ಪರೀಕ್ಷೆ ಬರೆಸಿದ ಆರೋಪ ಬೆಳಕಿಗೆ ಬಂದಿದೆ. ಜಾರಿ ನಿರ್ದೇಶನಾಲಯ (ಇಡಿ) ನಡೆಸುತ್ತಿರುವ ತನಿಖೆಯಲ್ಲಿ, ಕೆಪಿಎಸ್‌ಸಿಯ ಕೆಲ ಸದಸ್ಯರೇ ಅಕ್ರಮದಲ್ಲಿ ಭಾಗಿಯಾಗಿರುವ ಶಂಕೆ ವ್ಯಕ್ತವಾಗಿದೆ ಎಂದು ವರದಿಯಾಗಿದೆ.

ಪರೀಕ್ಷೆಗೂ ಮುನ್ನ ಅಭ್ಯರ್ಥಿಗಳಿಗೆ ಉತ್ತರಗಳನ್ನು ಚೀಟಿಯಲ್ಲಿ ಬರೆದು ನೀಡಲಾಗಿತ್ತು ಎನ್ನಲಾಗಿದೆ. ಅವುಗಳನ್ನು ಬರೆಯಲು ಸಾಧ್ಯವಾಗದ ಅಭ್ಯರ್ಥಿಗಳಿಗೆ ಪ್ರಶ್ನೆಪತ್ರಿಕೆ ಹಾಗೂ ಒಎಂಆರ್ ಹಾಳೆಗಳನ್ನು ನೀಡಿ, ಫೈವ್‌ಸ್ಟಾರ್ ಹೋಟೆಲ್‌ನಲ್ಲಿ ಪರೀಕ್ಷೆ ಬರೆಯಲು ವ್ಯವಸ್ಥೆ ಮಾಡಲಾಗಿತ್ತು ಎಂಬ ಆರೋಪ ಕೇಳಿಬಂದಿದೆ.

2ನೇ ಪುಟಕ್ಕೆ...

# ಟೆಕ್ಕಿ ಪೂಜಾ ದತ್ತಾ ನಿಗೂಢ ಸಾವು: 6 ತಿಂಗಳ ಬಳಿಕ ಕಾರಣ ಬಹಿರಂಗ

**ಆರು ತಿಂಗಳ ಹಿಂದೆ ಬೆಂಗಳೂರಿನ ಬಾಡಿಗೆ ಮನೆಯಲ್ಲಿ ಕೊಳೆತ ಸ್ಥಿತಿಯಲ್ಲಿ ಪತ್ತೆಯಾಗಿದ್ದ ಟೆಕ್ಕಿ ಪೂಜಾ ದತ್ತಾ ಸಾವಿನ ಪ್ರಕರಣಕ್ಕೆ ಎಫ್‌ಎಸ್‌ಎಲ್ ವರದಿ ಆಧಾರದಲ್ಲಿ ಹೊಸ ಸ್ಪಷ್ಟನೆ ಸಿಕ್ಕಿದೆ. ಶ್ವಾಸಕೋಶ ವೈಫಲ್ಯ ಹಾಗೂ ರಕ್ತ ಹೆಪ್ಪುಗಟ್ಟುವಿಕೆ ಸಾವಿಗೆ ಕಾರಣವೆಂದು ಪೊಲೀಸ್ ವರದಿಯಲ್ಲಿ ಉಲ್ಲೇಖಿಸಲಾಗಿದೆ.**

● ವಿಕ್ರಮ ವಾಹಿನಿ । ಬೆಂಗಳೂರು

ಆಡುಗೋಡಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಆರು ತಿಂಗಳ ಹಿಂದೆ ಕೊಳೆತ ಸ್ಥಿತಿಯಲ್ಲಿ ಪತ್ತೆಯಾಗಿದ್ದ ಜಾರ್ಖಂಡ್ ಮೂಲದ ಟೆಕ್ಕಿ ಪೂಜಾ ದತ್ತಾ (34) ಅವರ ಸಾವಿನ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ಅಂತಿಮ ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿದ್ದಾರೆ. ವಿಧಿವಿಜ್ಞಾನ ಪ್ರಯೋಗಾಲಯದ (ಎಫ್‌ಎಸ್‌ಎಲ್) ವರದಿಯ ಆಧಾರದಲ್ಲಿ ಸಾವಿಗೆ ಶ್ವಾಸಕೋಶದ ವೈಫಲ್ಯ ಹಾಗೂ ರಕ್ತ ಹೆಪ್ಪುಗಟ್ಟುವಿಕೆ ಕಾರಣವೆಂದು ತಿಳಿಸಲಾಗಿದೆ.

ಏಪ್ರಿಲ್ 27ರಂದು ಮುನಿಕೃಷ್ಣಪ್ಪ ಲೇಔಟ್‌ನ ಬಾಡಿಗೆ ಮನೆಯೊಂದರಲ್ಲಿ ಪೂಜಾ ಅವರ ಮೃತದೇಹ ಕೊಳೆತ



ಸ್ಥಿತಿಯಲ್ಲಿ ಪತ್ತೆಯಾಗಿತ್ತು. ಖಾಸಗಿ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದ ಅವರು ಕಳೆದ ಮೂರು ವರ್ಷಗಳಿಂದ ಮನೆಯಲ್ಲಿ ಒಬ್ಬರೇ ವಾಸಿಸುತ್ತಿದ್ದರು. ಮನೆಯಿಂದ ದುರ್ವಾಸನೆ ಬರುತ್ತಿದ್ದ ಹಿನ್ನೆಲೆಯಲ್ಲಿ ಮನೆ ಮಾಲಕಿ ಹಾಗೂ ಸ್ಥಳೀಯರು ಪೊಲೀಸರಿಗೆ ಮಾಹಿತಿ ನೀಡಿದ್ದರು.

ಪೊಲೀಸರು ಸ್ಥಳಕ್ಕೆ ತೆರಳಿ ಬಾಗಿಲು ತೆರೆದಾಗ ಮೃತದೇಹದ ಸ್ಥಿತಿ ಹಾಗೂ ಮನೆಯೊಳಗಿನ ಅಸ್ತವ್ಯಸ್ತ ವಾತಾವರಣ ಹಲವು ಅನುಮಾನಗಳಿಗೆ ಕಾರಣವಾಗಿತ್ತು. ಪೂಜಾ ಅವರ ಮನೆಗೆ ಯುವಕನೊಬ್ಬ ಆಗಾಗ ಬಂದು ಹೋಗುತ್ತಿದ್ದ ಹಾಗೂ ಅವರೊಂದಿಗೆ ಜಗಳವಾಡುತ್ತಿದ್ದ ಎಂಬ ಮಾಹಿತಿಯೂ ತನಿಖೆಯ ಸಂದರ್ಭದಲ್ಲಿ ಲಭ್ಯವಾಗಿತ್ತು. ಹೀಗಾಗಿ ಪ್ರಕರಣವು ಕೊಲೆಯೋ ಅಥವಾ ಆತ್ಮಹತ್ಯೆಯೋ ಎಂಬ ಅನುಮಾನ ಮೂಡಿಸಿತ್ತು.

ಆದರೆ, ಎಫ್‌ಎಸ್‌ಎಲ್ ವರದಿಯ ಆಧಾರದಲ್ಲಿ ಸಾವಿಗೆ ಬಾಹ್ಯ ಹಲ್ಲೆ ಕಾರಣವಾಗಿರುವುದು ದೃಢಪಟ್ಟಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ. ಪೂಜಾ ಅವರು ತೀವ್ರ ಮಾನಸಿಕ ಖಿನ್ನತೆಯಿಂದ ಬಳಲುತ್ತಿದ್ದರು ಎಂಬ ಅಂಶವೂ ತನಿಖಾ ವರದಿಯಲ್ಲಿ ಉಲ್ಲೇಖವಾಗಿದೆ ಎಂದು ತಿಳಿದುಬಂದಿದೆ.

ಪ್ರಕರಣದ ತನಿಖೆ ಪೂರ್ಣಗೊಳಿಸಿರುವ ಪೊಲೀಸರು ಅಂತಿಮ ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿದ್ದು, ಆರಂಭದಲ್ಲಿ ನಿಗೂಢತೆ ಸೃಷ್ಟಿಸಿದ್ದ ಸಾವಿನ ಪ್ರಕರಣದ ವೈದ್ಯಕೀಯ ಮತ್ತು ವಿಧಿವಿಜ್ಞಾನ ವರದಿಯ ವಿವರಗಳು ಇದೀಗ ಬಹಿರಂಗವಾಗಿವೆ.

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

### ಸವಿ ವಾಹಿನಿ

ನಮ್ಮ ಅತ್ಯಂತ ದೊಡ್ಡ ಜವಾಬ್ದಾರಿ ಏನು ಗೊತ್ತೇ?
ನಮ್ಮ ಮುಂದಿನ ಪೀಳಿಗೆಗೆ ಶ್ರೇಷ್ಠ ಪೂರ್ವಜರಾಗುವುದು.

### ದಿನ ಪಂಚಾಂಗ

ಅಕ್ಟೋಬರ್, 17–2026, ಶನಿವಾರ ಶರದ್ ಋತು,
ಆಶ್ವಯುಜ ಮಾಸ, ಶುದ್ಧ ಪಕ್ಷ
ಸಪ್ತಮಿ ತಿಥಿ ಮಾ.ಬೆ.5:22
ಮೂಲ ನಕ್ಷತ್ರ ಬೆ.8:32
ರಾಹುಕಾಲ ಬೆ 9:06–10:35
ಮುಜಂಗಾವು ತೀರ್ಥ, ಭಾಗಮಂಡಲ ಕಾವೇರೀಜಾತ್ರೆ, ಅಂತರರಾಷ್ಟ್ರೀಯ ಬಡತನ ನಿರ್ಮೂಲನಾ ದಿನ, ಕಶ್ಯಪ ಜಯಂತಿ, ಕಾಳರಾತ್ರಿ, ಮಹಿಷಾಸುರ ಸಂಹಾರ, ತ್ರಿರಾತ್ರಾರಂಭ, ಕಾನಂಗಿ ಶ್ರೀನಿವಾಸ ರಥ, ಧಾರವಾಡ ಮೃತ್ಯುಂಜಯ ಶ್ರೀಗಳ ಪುಣ್ಯತಿಥಿ, ಅಕ್ಕಲಗೇರಿ ರಥ, ಯಾಳಗಿ ರಾಮಪ್ಪಯ್ಯ ಆರಾಧನೆ

### ಆಧ್ಯಾತ್ಮ

## 'ಗಂಡನ ಪುಣ್ಯದಲ್ಲಿ ಹೆಂಡತಿಗಿದೆ ಪಾಲು, ಆದರೆ ಪಾಪದಲ್ಲಿಲ್ಲ'



● ವಿಕ್ರಮ ವಾಹಿನಿ । ಬೆಂಗಳೂರು

ಅನಿರೀಕ್ಷಿತವಾಗಿ ಬರುವ ಸಂಪತ್ತು ಸ್ಥಿರವಲ್ಲ. ಆಕಸ್ಮಿಕವಾಗಿ ಸಂಪತ್ತು ಬಂದಾಗ ವಿವೇಕವು ಕೆಲಸ ಮಾಡುವುದಿಲ್ಲ. ಅನ್ಯಾಯದ ಮಾರ್ಗದಿಂದ ಸಂಪಾದಿಸಿದ ಹಣ ಬಂದಾಗ ಮನಸ್ಸು ಭ್ರಮೆಗೊಳಗಾಗುತ್ತದೆ ಎಂದು ಶ್ರೀರಾಮಚಂದ್ರಾಪುರ ಮಠದ ಜಗದ್ಗುರು ಶಂಕರಾಚಾರ್ಯ ಶ್ರೀಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು ಹೇಳಿದರು.

ಬೆಂಗಳೂರಿನ ಗಿರಿನಗರದಲ್ಲಿರುವ ಶ್ರೀರಾಮಚಂದ್ರಾಪುರ ಮಠದ ಶಾಖೆಯಲ್ಲಿ ನಡೆಯುತ್ತಿರುವ 'ನವರಾತ್ರ ನಮಸ್ಯಾ' ಕಾರ್ಯಕ್ರಮದಲ್ಲಿ 16/10/2026 ರಂದು ಲಲಿತೋಪಾಖ್ಯಾನ ಪ್ರವಚನವನ್ನು ಅನುಗ್ರಹಿಸಿದ ಶ್ರೀಗಳು, ಸನಾತನ ಧರ್ಮ ಸ್ತ್ರೀಯರ ವಿರುದ್ಧವಾಗಿಲ್ಲ. ಕೆಲವರು ಅಪವ್ಯಾಖ್ಯಾನ ಮಾಡುವುದಿದೆ, ಆದರೆ ಧರ್ಮಶಾಸ್ತ್ರದಲ್ಲಿ ಸ್ತ್ರೀಯರಿಗೆ ಅವರದ್ದೇ ಆದ ಮಹತ್ವವಿದೆ. ಗಂಡನ ಪಾಪದಲ್ಲಿ ಹೆಂಡತಿಗೆ ಪಾಲಿಲ್ಲ. ಆದರೆ ಗಂಡನ ಪುಣ್ಯದಲ್ಲಿ ಹೆಂಡತಿಗೆ ಫಲವಿದೆ. ಅದೇ ಹೆಂಡತಿಯ ಪುಣ್ಯದಲ್ಲಿ ಗಂಡನಿಗೆ ಫಲವಿಲ್ಲ. ಆದರೆ ಹೆಂಡತಿಯ ಪಾಪದಲ್ಲಿ ಗಂಡನಿಗೆ ಪಾಲಿದೆ. ಇದು ಸನಾತನ ಧರ್ಮದಲ್ಲಿ ಸ್ತ್ರೀಯರ ಕುರಿತಾಗಿರುವ ಕಾಳಜಿಯಾಗಿದೆ ಎಂದು ಲಲಿತೋಪಾಖ್ಯಾನದ ಕಥೆಯೊಂದರ ಆಧಾರದಲ್ಲಿ ವಿವರಿಸಿದರು.

ಬೃಹಸ್ಪತಿಯು ಇಂದ್ರನಿಗೆ ಉಪದೇಶಿಸಿದ ಕಥೆಯನ್ನು ಉಲ್ಲೇಖಿಸಿದ ಶ್ರೀಗಳು, ವಜ್ರನೆಂಬ ಕಳ್ಳನು ಹಣವನ್ನು ಕದ್ದು ಕಾಡಿನಲ್ಲಿ ಬಚ್ಚಿಡುತ್ತಿದ್ದ. ಅದನ್ನು ನೋಡಿದ ವೀರದತ್ತನೆಂಬ ವ್ಯಾಧನು ಅಡಗಿಸಿಟ್ಟ ಆ ಹಣದಲ್ಲಿ ಹತ್ತನೇ ಒಂದು ಪಾಲನ್ನು ತೆಗೆದುಕೊಂಡು ಬಂದು, ಅವನ ಹೆಂಡತಿಯ ಸಲಹೆಯಂತೆ ಜನೋಪಯೋಗಿ ಹಾಗೂ ಧಾರ್ಮಿಕ ಕಾರ್ಯಗಳಿಗೆ ಆ ಹಣವನ್ನು ಬಳಸುತ್ತಾನೆ. ಕದ್ದ ಹಣದಲ್ಲಿ ಸಾಮಾಜಿಕ ಕಾರ್ಯ ಮಾಡಿರುವುದರಿಂದ ವೀರದತ್ತನ ದೇಹಾಂತವಾದಾಗ, ಆತನು ಕೆಲಕಾಲ ಸದ್ಗತಿಯನ್ನು ಪಡೆಯುವುದಿಲ್ಲ. ಆನಂತರ ಉತ್ತಮ ಗತಿಯನ್ನು ಪಡೆಯುತ್ತಾನೆ ಮಾತ್ರವಲ್ಲ ವೀರದತ್ತನ ಪುಣ್ಯ ಕಾರ್ಯಗಳಲ್ಲಿ ದುಡ್ಡನ್ನು ಕದ್ದ ವಜ್ರ ಹಾಗೂ ಹಣದ ನಿಜವಾದ ಮಾಲಿಕರಿಗೂ ಪಾಲುಸಿಗುತ್ತದೆ. ಇದು ಪಾಪ ಪುಣ್ಯಗಳು ಹೇಗೆ ನಿರ್ಧಾರಿತವಾಗುತ್ತದೆ ಹಾಗೂ ಅನ್ಯಾಯದ ದುಡ್ಡನ್ನು ಸಾಮಾಜಿಕ ಕಾರ್ಯಗಳಿಗೆ ಬಳಸಿದರೆ ಏನಾಗುತ್ತದೆ ಎಂಬುದನ್ನು ತಿಳಿಸುತ್ತದೆ ಎಂದು ಕಥೆಯನ್ನು ವಿವರಿಸಿದರು.

ವ್ರತ ಶಬ್ದದ ಜೊತೆಗೇ ಆಹಾರದ ನಿಯಮಗಳು ಇದೆ. ನವರಾತ್ರ ವ್ರತಕ್ಕೆ ಒಂಬತ್ತೂ ದಿನ ಉಪವಾಸವನ್ನು ಹೇಳಲಾಗಿದೆ. ಉಪವಾಸ ಸಾಧ್ಯವಾಗದಿದ್ದರೆ ಒಂದೇ ಹೊತ್ತಿನ ಊಟ ಅಥವಾ ಶುದ್ಧ ಸಾತ್ವಿಕ ಆಹಾರವನ್ನಷ್ಟೇ ಸ್ವೀಕರಿಸಿ ನವರಾತ್ರ ವ್ರತವನ್ನು ಆಚಾರಿಸಬೇಕು ಎಂದು ಕಿವಿಮಾತು ಹೇಳಿದರು.

ಖ್ಯಾತ ಆಯುರ್ವೇದ ವೈದ್ಯರಾದ ಡಾ.ಗಿರಿಧರ ಕಜೆ, ವಿದ್ವಾನ್ ಬಂದಗದ್ದೆ ನಾಗರಾಜ್, ಶ್ರೀಕಂಠಯ್ಯ ಹೆಬ್ಬಾಲೆ, ಉದ್ಯಮಿ ವಾದಿರಾಜ ಸಾಮಗ ಹಾಗೂ ದಿನಪ್ರಧಾನರಾಗಿ ಎನ್.ಜಿ. ಭಾಗ್ವತ್ ದಂಪತಿಗಳು ಉಪಸ್ಥಿತರಿದ್ದರು. ಶ್ರೀಸೂಕ್ತ ಹವನ, ದುರ್ಗಾ ಸಪ್ತಶತೀ ಪಾರಾಯಣ, ಮಾತೆಯರಿಂದ ಕುಂಕುಮಾರ್ಚನೆ, ಭಜನಾ ಮಂಡಳಿಗಳಿಂದ ಭಜನೆ, ದುರ್ಗಾ ದೀಪನಮಸ್ಕಾರ ಸೇರಿದಂತೆ ಅನೇಕ ಕಾರ್ಯಕ್ರಮಗಳು ನಡೆದವು.

# 'ದೇಶವನ್ನು ಅಭದ್ರಗೊಳಿಸುವ ಶಕ್ತಿಗಳಿಗೆ ಕಾಂಗ್ರೆಸ್ ಸರ್ಕಾರದ ಹಣ'

1ನೇ ಪುಟದಿಂದ

**ಖರ್ಗೆ ವಿರುದ್ಧ ವಾಗ್ದಾಳಿ:** ಅಗತ್ಯವಿದ್ದರೆ ಕುಮಾರಸ್ವಾಮಿ ಅವರನ್ನೇ ವಿಚಾರಣೆಗೆ ಕರೆಯುತ್ತೇವೆ ಎಂಬ ಪ್ರಿಯಾಂಕ್ ಖರ್ಗೆ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ತನಿಖೆಗೆ ತಾನು ಸಿದ್ಧನಿದ್ದು, ಮೊದಲು ತನ್ನಿಂದಲೇ ತನಿಖೆ ಆರಂಭಿಸಲಿ ಎಂದು ಸವಾಲು ಹಾಕಿದರು.

**ಪೊಲೀಸರಿಗೆ ಬೆದರಿಕೆ ಹಾಕಿಲ್ಲ;** ತನಿಖಾಧಿಕಾರಿಗಳು ಅನಗತ್ಯವಾಗಿ ಸಮಸ್ಯೆ ಸೃಷ್ಟಿಸಿಕೊಂಡರೆ ಪರಿಣಾಮ ಎದುರಿಸಬೇಕಾಗುತ್ತದೆ ಎಂದು ಎಚ್ಚರಿಸಿದ್ದಾಗಿ ಸ್ಪಷ್ಟಪಡಿಸಿದರು.

ಸಿದ್ಧಾರ್ಥ ಟ್ರಸ್ಟ್ ವಿಚಾರದಲ್ಲಿ ಪ್ರಿಯಾಂಕ್ ಖರ್ಗೆ ಅವರ ತಂದೆ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿಯಾಗಿದ್ದೇಕೆ ಎಂಬುದಕ್ಕೂ ಉತ್ತರ ನೀಡಲಿ ಎಂದು ಪ್ರಶ್ನಿಸಿದರು.

**ಕೇಂದ್ರದ ಸಾಧನೆಗಳೇ ಉತ್ತರ:** ಕೇಂದ್ರದಲ್ಲಿ ತಮಗೆ ಯಾವುದೇ ಕಿಮ್ಮತ್ತಿಲ್ಲ ಎಂಬ ಪ್ರಿಯಾಂಕ್ ಖರ್ಗೆ ಟೀಕೆಗೆ ತಿರುಗೇಟು ನೀಡಿದ ಕುಮಾರಸ್ವಾಮಿ, ತಮ್ಮ ಕೆಲಸದ ಬಗ್ಗೆ ದಾಖಲೆಗಳೇ ಮಾತನಾಡುತ್ತವೆ ಎಂದರು.

ಬಿಎಚ್‌ಇಎಲ್ ಸಂಸ್ಥೆಯ ಲಾಭವನ್ನು ರೂ 200 ಕೋಟಿಯಿಂದ ರೂ 1,500 ಕೋಟಿಗೂ ಅಧಿಕ ಮಟ್ಟಕ್ಕೆ ಹೆಚ್ಚಿಸಲಾಗಿದೆ. ಸ್ಟೀಲ್ ಅಥಾರಿಟಿ ಆಫ್ ಇಂಡಿಯಾ ರೂ 3,500 ಕೋಟಿ ಲಾಭ ಗಳಿಸಿದ್ದು, ಮುಂದಿನ ವರ್ಷ ರೂ 10,000 ಕೋಟಿ ಲಾಭದ ಗುರಿ ನೀಡಲಾಗಿದೆ ಎಂದು ತಮ್ಮ ಇಲಾಖೆಯ ಸಾಧನೆಗಳನ್ನು ವಿವರಿಸಿದರು.

ರಾಜ್ಯ ಸರ್ಕಾರದ ವಿರುದ್ಧವೂ ವಾಗ್ದಾಳಿ ನಡೆಸಿದ ಅವರು, ಬಿಡದಿ ರೈತರನ್ನು ಒಕ್ಕಲೆಬ್ಬಿಸುವುದು ಹಾಗೂ ನೈಸ್ ಕಂಪನಿಗೆ ಸಂಬಂಧಿಸಿದ ವಿವಾದಗಳೇ ಸರ್ಕಾರದ ಆದ್ಯತೆಯಾಗಿವೆಯೇ ಎಂದು ಪ್ರಶ್ನಿಸಿದರು. ತಮ್ಮ ಕಾರ್ಯಕ್ಷಮತೆಗೆ ವಿರೋಧ ಪಕ್ಷದ ನಾಯಕರಿಂದ ಪ್ರಮಾಣಪತ್ರ ಪಡೆಯುವ ಅಗತ್ಯವಿಲ್ಲ ಎಂದರು.

**ಕೆಪಿಎಸ್‌ಸಿ ನೇಮಕಾತಿ ಅಕ್ರಮದ ಆರೋಪ:** ಕೆಪಿಎಸ್‌ಸಿ ಮೂಲಕ ನಡೆದ 24 ಎಂಜಿನಿಯರ್‌ಗಳ ಆಯ್ಕೆ ಪ್ರಕ್ರಿಯೆಯಲ್ಲಿ ಅಕ್ರಮ ನಡೆದಿದೆ ಎಂಬ ಆರೋಪವನ್ನು ಪ್ರಸ್ತಾಪಿಸಿದ ಕುಮಾರಸ್ವಾಮಿ, ತನಿಖಾ ವರದಿಯಿದ್ದರೂ ನೇಮಕಾತಿ ಆದೇಶ ನೀಡಿದ್ದೇಕೆ ಎಂದು ಪ್ರಶ್ನಿಸಿದರು.

ಪಶುವೈದ್ಯಕೀಯ ಹುದ್ದೆಗಳ ನೇಮಕಾತಿಯಲ್ಲೂ ಅಕ್ರಮ ನಡೆದಿರುವ ಆರೋಪದ ಕುರಿತು ನ್ಯಾಯಯುತ ತನಿಖೆಗೆ ಅವಕಾಶ ನೀಡಬೇಕು ಎಂದು ಆಗ್ರಹಿಸಿದರು. ಈ ಎಲ್ಲ ಆರೋಪಗಳ ಬಗ್ಗೆ ಸಂಬಂಧಪಟ್ಟವರ ಸ್ಪಷ್ಟನೆ ಲಭ್ಯವಾಗಿಲ್ಲ.

# ಕೆಪಿಎಸ್‌ಸಿ ಹಗರಣ: ಪರೀಕ್ಷಾ ಅಕ್ರಮದ ಸ್ಫೋಟಕ ಸತ್ಯ ಬಯಲು

1ನೇ ಪುಟದಿಂದ

ಬಳಿಕ ಈ ಒಎಂಆರ್ ಹಾಳೆಗಳನ್ನು ಆಯ್ಕೆ ಪಟ್ಟಿಗೆ ಸೇರಿಸಿ, ಅನುಮಾನ ಬಾರದಂತೆ ಮೌಲ್ಯಮಾಪನ ಮಾಡಲಾಗಿತ್ತು ಎಂದು ತನಿಖಾ ಮೂಲಗಳನ್ನು ಉಲ್ಲೇಖಿಸಿ ವರದಿಯಾಗಿದೆ. ಈ ಅಕ್ರಮದಲ್ಲಿ ಭಾಗಿಯಾಗಿರುವ ಶಂಕಿತ ಅಭ್ಯರ್ಥಿಗಳ ವಿಚಾರಣೆ ನಡೆಸುತ್ತಿರುವ ಇಡಿ ಅಧಿಕಾರಿಗಳು, ಪರೀಕ್ಷೆ ಬರೆಸಲು ಬಳಸಿಕೊಂಡಿದ್ದ ಹೋಟೆಲ್‌ಗಳ ಬಗ್ಗೆಯೂ ಮಾಹಿತಿ ಸಂಗ್ರಹಿಸುತ್ತಿದ್ದಾರೆ. ಅಭ್ಯರ್ಥಿಗಳ ಶೈಕ್ಷಣಿಕ ಸಾಮರ್ಥ್ಯ ಮತ್ತು ಪರೀಕ್ಷೆ ಬರೆಯುವ ಕೌಶಲದ ಬಗ್ಗೆಯೂ ಪರಿಶೀಲನೆ ನಡೆಸಲಾಗುತ್ತಿದೆ ಎನ್ನಲಾಗಿದೆ.

ಇಂಗ್ಲಿಷ್‌ನಲ್ಲಿ ತಮ್ಮ ಹೆಸರು ಮತ್ತು ವಿಳಾಸವನ್ನೂ ಬರೆಯಲು ಸಾಧ್ಯವಾಗದ ಅಭ್ಯರ್ಥಿಗಳು ಸರ್ಕಾರಿ ಉದ್ಯೋಗ ಪಡೆದಿರುವ ಕುರಿತು ತನಿಖಾಧಿಕಾರಿಗಳಿಗೆ ಅನುಮಾನ ಮೂಡಿದೆ. ಇಂತಹ ಅಭ್ಯರ್ಥಿಗಳ ಆಯ್ಕೆಯ ಹಿಂದಿನ ಪ್ರಕ್ರಿಯೆ ಹಾಗೂ ಒಎಂಆರ್ ಹಾಳೆಗಳ ಮೌಲ್ಯಮಾಪನದಲ್ಲಿ ನಡೆದಿರಬಹುದಾದ ಅಕ್ರಮಗಳ ಕುರಿತು ಇಡಿ ತನಿಖೆ ಮುಂದುವರಿಸಿದೆ.

# ಸಿಜೆಪಿ ತಿರಂಗಾ ಮಾರ್ಚ್‌ಗೆ ಪೊಲೀಸರ ತಡೆ

● ವಿಕ್ರಮ ವಾಹಿನಿ । ಬೆಂಗಳೂರು

ಪ್ರತಿಭಟನೆಗಳನ್ನು ನಡೆಸಲು ಫ್ರೀಡಂ ಪಾರ್ಕ್ ಅನ್ನು ಮಾತ್ರ ನಿಗದಿಪಡಿಸಿರುವ ಹೈಕೋರ್ಟ್ ಆದೇಶವನ್ನು ಉಲ್ಲೇಖಿಸಿ, ಸಿಜೆಪಿ (ಕಾಕ್ರೋಚ್ ಜನತಾ ಪಾರ್ಟಿ) ಆಯೋಜಿಸಿದ್ದ ತಿರಂಗಾ ಮಾರ್ಚ್‌ಗೆ ಬೆಂಗಳೂರು ಪೊಲೀಸರು ಅನುಮತಿ ನಿರಾಕರಿಸಿದ್ದಾರೆ.

ಆಯೋಜಕರ ಪ್ರಕಾರ, ಶುಕ್ರವಾರ ಸಂಜೆ 4 ಗಂಟೆಗೆ ಟೌನ್ ಹಾಲ್‌ನಿಂದ ಆರಂಭವಾಗಿ ಕ್ವಿಟ್ ಇಂಡಿಯಾ ಸ್ಮಾರಕದ ಬಳಿ ಮೆರವಣಿಗೆ ಅಂತ್ಯಗೊಳ್ಳಬೇಕಿತ್ತು.

ಆದರೆ, ಪ್ರತಿಭಟನೆಗಳಿಗೆ ಫ್ರೀಡಂ ಪಾರ್ಕ್ ನಿಗದಿಯಾಗಿರುವ ಹಿನ್ನೆಲೆಯಲ್ಲಿ ಟೌನ್ ಹಾಲ್‌ನಲ್ಲಿ ಮೆರವಣಿಗೆ ನಡೆಸಲು ಅನುಮತಿ ನೀಡಲಾಗಿಲ್ಲ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಸಿಜೆಪಿ ಸಹ–ಸಂಯೋಜಕ ಅಶುತೋಷ್ ರಂಕಾ ಹಾಗೂ ವಕ್ತಾರ ಸೌರವ್ ದಾಸ್ ಅವರಿಗೆ ಬೆಂಬಲ ಸೂಚಿಸಲು ಜಾಗೃತ ಕರ್ನಾಟಕ, ಎಐಎಸ್‌ಎ ಕರ್ನಾಟಕ ಮತ್ತು ಮೈ ವೋಟ್, ಮೈ ರೈಟ್ ಸಂಘಟನೆಗಳ ಸಹಯೋಗದಲ್ಲಿ ಈ ಮೆರವಣಿಗೆ ಆಯೋಜಿಸಲಾಗಿತ್ತು.

ಇನ್ನೊಂದೆಡೆ, ಶಾಂತಿ ಕಾಪಾಡುವ ಮುಚ್ಚಳಿಕೆಯನ್ನು ಉಲ್ಲಂಘಿಸಿದ ಆರೋಪ ಹಾಗೂ ಅನುಮತಿ ಇಲ್ಲದೆ ದೆಹಲಿಯ ಜಂತರ್ ಮಂತರ್ ಪ್ರವೇಶಿಸಿದ ಆರೋಪದ ಹಿನ್ನೆಲೆಯಲ್ಲಿ ಸಿಜೆಪಿ ನಾಯಕರಾದ ಸೌರವ್ ದಾಸ್ ಮತ್ತು ಅಶುತೋಷ್ ರಂಕಾ ಅವರನ್ನು ಅಕ್ಟೋಬರ್ 14ರಂದು ಐದು ದಿನಗಳ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿ ತಿಹಾರ್ ಜೈಲಿಗೆ ಕಳುಹಿಸಲಾಗಿದೆ ಎಂದು ವರದಿಯಾಗಿದೆ. ಪೊಲೀಸರು ವಶಕ್ಕೆ ಪಡೆದ ಸಂದರ್ಭದಲ್ಲಿ ಇಬ್ಬರೂ ಒಂದು ವರ್ಷದವರೆಗೆ ಶಾಂತಿ ಕಾಪಾಡುವುದಾಗಿ ಮುಚ್ಚಳಿಕೆ ಪತ್ರಕ್ಕೆ ಸಹಿ ಹಾಕಿದ್ದರು.

ಇದರಿಂದಾಗಿ ಮೆರವಣಿಗೆ ಆಯೋಜಿಸಿದ್ದ ಸಂಘಟನೆಗಳ ಕಾರ್ಯಕರ್ತರು ನಿರಾಸೆಗೊಳಗಾಗಿದ್ದು, ಪ್ರತಿಭಟನೆ ನಡೆಸಲು ನಿಗದಿಪಡಿಸಿರುವ ಸ್ಥಳದ ಕುರಿತು ಮತ್ತೆ ಚರ್ಚೆ ಆರಂಭವಾಗಿದೆ. ಸಾರ್ವಜನಿಕ ಸ್ಥಳಗಳಲ್ಲಿ ಪ್ರತಿಭಟನೆ ಹಾಗೂ ಮೆರವಣಿಗೆಗಳಿಗೆ ಅನುಮತಿ ನೀಡುವ ವಿಚಾರದಲ್ಲಿ ನ್ಯಾಯಾಲಯದ ಮಾರ್ಗಸೂಚಿಗಳನ್ನು ಪಾಲಿಸುವುದು ಅನಿವಾರ್ಯವಾಗಿದ್ದು, ಕಾನೂನು ಸುವ್ಯವಸ್ಥೆಗೆ ಧಕ್ಕೆಯಾಗದಂತೆ ಕಾರ್ಯಕ್ರಮಗಳನ್ನು ಆಯೋಜಿಸಬೇಕೆಂದು ಪೊಲೀಸರು ಒತ್ತಿಹೇಳಿದ್ದಾರೆ.

# "ಸುಪ್ರೀಂ ಕೋರ್ಟ್‌ಗೆ ತಪ್ಪು ಮಾಹಿತಿ"

● ವಿಕ್ರಮ ವಾಹಿನಿ । ಬೆಂಗಳೂರು

ಕೆಪಿಎಸ್‌ಸಿ ಪಶುವೈದ್ಯಾಧಿಕಾರಿಗಳ ನೇಮಕಾತಿ ಅಕ್ರಮ ಪ್ರಕರಣದಲ್ಲಿ ಎಡಿಜಿಪಿ ಅಲೋಕ್ ಕುಮಾರ್ ನೇತೃತ್ವದಲ್ಲಿ ವಿಶೇಷ ತನಿಖಾ ತಂಡ (ಎಸ್‌ಐಟಿ) ರಚಿಸುವಂತೆ ಹೈಕೋರ್ಟ್ ನೀಡಿದ್ದ ಆದೇಶವನ್ನು ಪ್ರಶ್ನಿಸುವ ಮೂಲಕ ಕಾಂಗ್ರೆಸ್ ಸರ್ಕಾರ ಸುಪ್ರೀಂ ಕೋರ್ಟ್‌ಗೆ ವಾಸ್ತವಾಂಶಗಳಿಗೆ ವಿರುದ್ಧವಾದ ಮಾಹಿತಿ ನೀಡಿದೆ ಎಂದು ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ್ ಆರೋಪಿಸಿದ್ದಾರೆ.



ಈ ಕುರಿತು ಹೇಳಿಕೆ ನೀಡಿರುವ ಅವರು, ಅಲೋಕ್ ಕುಮಾರ್ ವಿರುದ್ಧದ ದ್ವೇಷ ಮತ್ತು ಅಪನಂಬಿಕೆಯಿಂದ ರಾಜ್ಯ ಸರ್ಕಾರ ಹಿರಿಯ ವಕೀಲ ಕಪಿಲ್ ಸಿಬಲ್ ಅವರ ಮೂಲಕ ಸುಪ್ರೀಂ ಕೋರ್ಟ್‌ಗೆ ತಪ್ಪು ಮಾಹಿತಿ ನೀಡಿದೆ ಎಂದು ದೂರಿದ್ದಾರೆ.

ಕೆಪಿಎಸ್‌ಸಿ ಪಶುವೈದ್ಯಾಧಿಕಾರಿಗಳ ನೇಮಕಾತಿ ಪ್ರಕರಣದಲ್ಲಿ ಸರ್ಕಾರ ಏನನ್ನೋ ಮುಚ್ಚಿಡಲು ಹಾಗೂ ಕೆಲವರನ್ನು ರಕ್ಷಿಸಲು ಪ್ರಯತ್ನಿಸುತ್ತಿದೆ. ಅಲೋಕ್ ಕುಮಾರ್ ಪ್ರಾಮಾಣಿಕತೆ ಮತ್ತು ವೃತ್ತಿಪರ ನೈತಿಕತೆಗೆ ಹೆಸರಾದ ಅಧಿಕಾರಿಯಾಗಿದ್ದು, ಅವರ ನೇತೃತ್ವದಲ್ಲಿ ಎಸ್‌ಐಟಿ ತನಿಖೆ ನಡೆಯುವುದನ್ನು ಸರ್ಕಾರ ವಿರೋಧಿಸುತ್ತಿರುವುದು ಹಲವು ಅನುಮಾನಗಳಿಗೆ ಕಾರಣವಾಗಿದೆ ಎಂದು ಹೇಳಿದ್ದಾರೆ.

ಹೈಕೋರ್ಟ್ ಆದೇಶವನ್ನು ಸುಪ್ರೀಂ ಕೋರ್ಟ್‌ನಲ್ಲಿ ಪ್ರಶ್ನಿಸಿರುವುದೇ ಸರ್ಕಾರದ ತಪ್ಪು ನಿರ್ಧಾರವಾಗಿದ್ದರೆ, ನ್ಯಾಯಾಲಯಕ್ಕೆ ವಾಸ್ತವಾಂಶಗಳಿಗೆ ವಿರುದ್ಧವಾದ ಮಾಹಿತಿ ನೀಡಿರುವುದು ಅದಕ್ಕಿಂತಲೂ ಗಂಭೀರ ಪ್ರಮಾದ ಎಂದು ಟೀಕಿಸಿದ್ದಾರೆ.

ಈ ಮಾಹಿತಿಯ ಮೂಲ ಗೃಹ ಇಲಾಖೆಯಾಗಿದ್ದು, ಅದರ ಜವಾಬ್ದಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರ ಮೇಲಿದೆ ಎಂದು ಆರೋಪಿಸಿದ ರವಿಕುಮಾರ್, ಆರ್‌ಎಸ್‌ಎಸ್ ಬಗ್ಗೆ ಟೀಕೆ ಮಾಡುವುದಕ್ಕಿಂತ ತಮ್ಮ ಇಲಾಖೆಯ ಕಾರ್ಯನಿರ್ವಹಣೆಯತ್ತ ಗಮನಹರಿಸಲಿ ಎಂದು ಸಲಹೆ ನೀಡಿದ್ದಾರೆ.

ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ನಡೆದಿರುವ ನೇಮಕಾತಿ ಅಕ್ರಮಗಳ ಕುರಿತು ಇನ್ನಷ್ಟು ಸಂಗತಿಗಳು ಬಹಿರಂಗವಾಗುವ ಭೀತಿಯಿಂದ ಎಸ್‌ಐಟಿ ತನಿಖೆಗೆ ಅಡ್ಡಿಪಡಿಸಲಾಗುತ್ತಿದೆಯೇ ಎಂಬ ಪ್ರಶ್ನೆಯನ್ನೂ ಅವರು ಎತ್ತಿದ್ದಾರೆ.

ಎಸ್‌ಐಟಿ ತನಿಖೆಗೆ ಸಂಬಂಧಿಸಿದಂತೆ ಸರ್ಕಾರದ ನಿಲುವು ಪಾರದರ್ಶಕವಾಗಿರಬೇಕು. ನೇಮಕಾತಿ ಪ್ರಕ್ರಿಯೆಯಲ್ಲಿ ಅಕ್ರಮ ನಡೆದಿದೆಯೇ ಎಂಬುದನ್ನು ನಿಷ್ಪಕ್ಷಪಾತವಾಗಿ ಪತ್ತೆಹಚ್ಚುವುದು ಮುಖ್ಯವಾಗಿದ್ದು, ತನಿಖಾಧಿಕಾರಿಗಳ ಆಯ್ಕೆ ವಿಚಾರದಲ್ಲಿ ಸರ್ಕಾರದ ವಿರೋಧಕ್ಕೆ ಸ್ಪಷ್ಟ ಕಾರಣ ನೀಡಬೇಕು ಎಂದು ರವಿಕುಮಾರ್ ಆಗ್ರಹಿಸಿದ್ದಾರೆ.

ಪ್ರಕರಣದ ಎಲ್ಲ ಆಯಾಮಗಳನ್ನೂ ಸಮಗ್ರವಾಗಿ ಪರಿಶೀಲಿಸಿ, ತಪ್ಪಿತಸ್ಥರು ಯಾರೇ ಆಗಿದ್ದರೂ ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು. ಈ ಮೂಲಕ ನೇಮಕಾತಿ ವ್ಯವಸ್ಥೆಯ ಮೇಲಿನ ಅಭ್ಯರ್ಥಿಗಳ ವಿಶ್ವಾಸವನ್ನು ಉಳಿಸಬೇಕು ಎಂದು ಅವರು ಒತ್ತಾಯಿಸಿದ್ದಾರೆ.

# ಗೃಹಜ್ಯೋತಿ ಫಲಾನುಭವಿಗಳಿಗೆ 31ರವರೆಗೆ ದಾಖಲೆ ಸಲ್ಲಿಕೆಗೆ ಅವಕಾಶ

● ವಿಕ್ರಮ ವಾಹಿನಿ । ಬೆಂಗಳೂರು

ಗೃಹಜ್ಯೋತಿ ಯೋಜನೆಯ ಫಲಾನುಭವಿಗಳ ದಾಖಲಾತಿ ಪರಿಶೀಲನೆಗೆ ಸಹಕರಿಸಲು ಸಾಧ್ಯವಾಗದ ಗ್ರಾಹಕರಿಗೆ ಬೆಸ್ಕಾಂ ಕೊನೆಯ ಅವಕಾಶ ನೀಡಿದೆ. ಮನೆಗೆ ಬೀಗ ಹಾಕಿರುವ, ಖಾಲಿ ಇರುವ ಹಾಗೂ ಸಮೀಕ್ಷೆ ವೇಳೆ ಲಭ್ಯವಿಲ್ಲದ ಗ್ರಾಹಕರು ಅಕ್ಟೋಬರ್ 31ರೊಳಗೆ ಸಮೀಪದ ಬೆಸ್ಕಾಂ ಕಚೇರಿಗೆ ಖುದ್ದಾಗಿ ತೆರಳಿ ಅಗತ್ಯ ದಾಖಲೆಗಳನ್ನು ಸಲ್ಲಿಸಬಹುದು. ಬೆಸ್ಕಾಂ ವ್ಯಾಪ್ತಿಯ ಎಂಟು ಜಿಲ್ಲೆಗಳಲ್ಲಿ ಭಾಗ್ಯಜ್ಯೋತಿ, ಕುಟೀರಜ್ಯೋತಿ ಹಾಗೂ ಅಮೃತಜ್ಯೋತಿ ಯೋಜನೆಗಳ ಗ್ರಾಹಕರು ಸೇರಿದಂತೆ ಒಟ್ಟು 74.29 ಲಕ್ಷ ಗೃಹಜ್ಯೋತಿ ಫಲಾನುಭವಿಗಳಿದ್ದಾರೆ. ಈ ಪೈಕಿ 72.40 ಲಕ್ಷ ಗ್ರಾಹಕರ ಸಮೀಕ್ಷೆ ಪೂರ್ಣಗೊಂಡಿದ್ದು, ಶೇ 97.45ರಷ್ಟು ಪ್ರಗತಿ ಸಾಧಿಸಲಾಗಿದೆ.

ಸಮೀಕ್ಷೆಯ ವೇಳೆ ಸುಮಾರು 16.09 ಲಕ್ಷ ಮನೆಗಳಿಗೆ ಬೀಗ ಹಾಕಿರುವುದು ಹಾಗೂ 28,519 ಮನೆಗಳು ಖಾಲಿ ಇರುವುದು ಕಂಡುಬಂದಿದೆ. ಸಮೀಕ್ಷೆಯಲ್ಲಿ ಪಾಲ್ಗೊಳ್ಳಲು ಸಾಧ್ಯವಾಗದ ಈ ಗ್ರಾಹಕರು ನಿಗದಿತ ಅವಧಿಯೊಳಗೆ ದಾಖಲೆಗಳನ್ನು ಸಲ್ಲಿಸಿ ಪರಿಶೀಲನೆ ಪ್ರಕ್ರಿಯೆ ಪೂರ್ಣಗೊಳಿಸಿಕೊಳ್ಳುವಂತೆ ಬೆಸ್ಕಾಂ ಪ್ರಕಟಣೆ ತಿಳಿಸಿದೆ.

# ಪಿಜಿಸಿಇಟಿ: ಫಲಿತಾಂಶ ಪ್ರಕಟ, ಶುಲ್ಕ ಕಟ್ಟಲು ಅ.19 ಕೊನೆ ದಿನ

● ವಿಕ್ರಮ ವಾಹಿನಿ । ಬೆಂಗಳೂರು

ಎಂಬಿಎ, ಎಂಸಿಎ, ಎಂಇ, ಎಂ.ಟೆಕ್/ಎಂ ಆರ್ಕ್ ಕೋರ್ಸ್ ಗಳ ಪ್ರವೇಶಕ್ಕೆ ಸಂಬಂಧಿಸಿದಂತೆ ಸೀಟು ಹಂಚಿಕೆಯ ಅಂತಿಮ ಫಲಿತಾಂಶವನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಪ್ರಕಟಿಸಿದೆ.

ಸೀಟು ಹಂಚಿಕೆಯಾಗಿರುವ ಅಭ್ಯರ್ಥಿಗಳು ಅ.19ರೊಳಗೆ ಶುಲ್ಕ ಪಾವತಿಸಿ, ಅ.23ರೊಳಗೆ ಕಾಲೇಜುಗಳಲ್ಲಿ ಪ್ರವೇಶ ಪಡೆಯಬೇಕು ಎಂದು ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಹೆಚ್.ಪ್ರಸನ್ನ ಅವರು ತಿಳಿಸಿದ್ದಾರೆ.

# ಪಿಬಿ ಬಿಎಸ್ಸಿ ಪ್ರವೇಶಕ್ಕೆ ಇಚ್ಛೆ ಆಯ್ಕೆಗೆ ಅವಕಾಶ

● ವಿಕ್ರಮ ವಾಹಿನಿ । ಬೆಂಗಳೂರು

ಪಿಬಿ ಬಿಎಸ್ಸಿ ನರ್ಸಿಂಗ್ ಮತ್ತು ಎಎಚ್‌ಎಸ್ ಲ್ಯಾಟರಲ್ ಕೋರ್ಸ್ ಗಳ ಪ್ರವೇಶಕ್ಕೆ ಇಚ್ಛೆ/ಆಯ್ಕೆಗಳನ್ನು ದಾಖಲಿಸಲು ಅ.19ರಂದು ಬೆಳಿಗ್ಗೆ 11ಗಂಟೆವರೆಗೆ ಅವಕಾಶ ನೀಡಲಾಗಿದೆ ಎಂದು ಪ್ರಸನ್ನ ಅವರು ತಿಳಿಸಿದ್ದಾರೆ.

ಅ.19ರಂದು ಸಂಜೆ 4 ಗಂಟೆಗೆ ಅಣಕು ಫಲಿತಾಂಶ ಪ್ರಕಟಿಸಲಾಗುತ್ತದೆ. ಅ.19ರಂದು ಸಂಜೆ 5ಗಂಟೆಯಿಂದ ಅ.22ರಂದು ಬೆಳಿಗ್ಗೆ 11ಗಂಟೆವರೆಗೆ ಆಯ್ಕೆಗಳನ್ನು ಬದಲಿಸಿಕೊಳ್ಳಲು/ಸೇರಿಸಲು ಹಾಗು ಅಳಿಸಲು ಅವಕಾಶ ನೀಡಲಾಗಿದೆ. ಅದರ ನಂತರ ಅಂತಿಮ ಫಲಿತಾಂಶ ಪ್ರಕಟಿಸಲಾಗುವುದು ಎಂದು ಅವರು ವಿವರಿಸಿದರು.

# ಕರ್ನಾಟಕದ ನೂತನ ರಾಜ್ಯಪಾಲೆಯಾಗಿ ಸುಧಾ ಯಾದವ್ ಪ್ರಮಾಣವಚನ




● ವಿಕ್ರಮ ವಾಹಿನಿ । ಬೆಂಗಳೂರು

ಕರ್ನಾಟಕದ ನೂತನ ರಾಜ್ಯಪಾಲೆಯಾಗಿ ಡಾ. ಸುಧಾ ಯಾದವ್ ಅವರು ಶುಕ್ರವಾರ ಪ್ರಮಾಣವಚನ ಸ್ವೀಕರಿಸಿದರು. ಲೋಕಭವನದ ಗಾಜಿನ ಮನೆಯಲ್ಲಿ ನಡೆದ ಸಮಾರಂಭದಲ್ಲಿ ಕರ್ನಾಟಕ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಅವರು ಅಧಿಕಾರ ಮತ್ತು ಗೌಪ್ಯತೆಯ ಪ್ರಮಾಣವಚನ ಬೋಧಿಸಿದರು.

ನಿರ್ಗಮಿತ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರ ಅಧಿಕಾರಾವಧಿ ಪೂರ್ಣಗೊಂಡ ಹಿನ್ನೆಲೆಯಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಸುಧಾ ಯಾದವ್ ಅವರನ್ನು ರಾಜ್ಯಪಾಲೆಯಾಗಿ ನೇಮಕ ಮಾಡಿದ್ದಾರೆ. ಈ ಮೂಲಕ ಅವರು ಕರ್ನಾಟಕದ ಎರಡನೇ ಮಹಿಳಾ ರಾಜ್ಯಪಾಲೆಯಾಗಿ ಅಧಿಕಾರ ವಹಿಸಿಕೊಂಡಿದ್ದಾರೆ. ಈ ಹಿಂದೆ 1999ರಲ್ಲಿ ವಿ.ಎಸ್. ರಮಾದೇವಿ ಅವರು ರಾಜ್ಯದ ಮೊದಲ ಮಹಿಳಾ ರಾಜ್ಯಪಾಲೆಯಾಗಿ ಸೇವೆ ಸಲ್ಲಿಸಿದ್ದರು.

ಸಮಾರಂಭದಲ್ಲಿ ನಿರ್ಗಮಿತ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ, ಸಚಿವರಾದ ಡಾ. ಶರಣ ಪ್ರಕಾಶ್ ಪಾಟೀಲ್, ಕೆ.ಜೆ. ಜಾರ್ಜ್, ಪ್ರಿಯಾಂಕ್ ಖರ್ಗೆ, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್, ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ಟಿ. ನಾರಾಯಣಸ್ವಾಮಿ, ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ಪೊಲೀಸ್ ಮಹಾನಿರ್ದೇಶಕ ಡಾ. ಎಂ.ಎ. ಸಲೀಂ ಸೇರಿದಂತೆ ಹಲವು ಗಣ್ಯರು, ನ್ಯಾಯಮೂರ್ತಿಗಳು ಹಾಗೂ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

**ಕಾರ್ಗಿಲ್ ಹುತಾತ್ಮ ಯೋಧನ ಪತ್ನಿ:** ಡಾ. ಸುಧಾ ಯಾದವ್ ಅವರು ಉನ್ನತ ಶಿಕ್ಷಣ, ರಾಜಕೀಯ ಹಾಗೂ ಸಾರ್ವಜನಿಕ ಸೇವೆಯಲ್ಲಿ ಅನುಭವ ಹೊಂದಿದ್ದಾರೆ. ಐಐಟಿ ರೂರ್ಕಿಯಲ್ಲಿ ರಸಾಯನಶಾಸ್ತ್ರದಲ್ಲಿ ಎಂ.ಎಸ್ಸಿ ಪದವಿ ಪಡೆದಿರುವ ಅವರು ಚಿನ್ನದ ಪದಕ ಗಳಿಸಿದ್ದು, ಪಿಎಚ್‌ಡಿ ಪದವಿಯನ್ನೂ ಪಡೆದಿದ್ದಾರೆ. ಇವರ ಪತಿ ಸುಖಬೀರ್ ಸಿಂಗ್ ಯಾದವ್ ಅವರು ಗಡಿ ಭದ್ರತಾ ಪಡೆಯ ಉಪ ಕಮಾಂಡೆಂಟ್ ಆಗಿದ್ದರು. 1999ರ ಕಾರ್ಗಿಲ್ ಯುದ್ಧದ ಸಂದರ್ಭದಲ್ಲಿ ಪಾಕಿಸ್ತಾನದ ಪಡೆಗಳ ಫಿರಂಗಿ ದಾಳಿಗೆ ಎದುರಾಗಿ ಹೋರಾಡಿ ಹುತಾತ್ಮರಾಗಿದ್ದರು. ಅವರ ಸೇವೆಯನ್ನು ಗುರುತಿಸಿ ಮರಣೋತ್ತರವಾಗಿ ಸೇನಾ ಪದಕ ನೀಡಿ ಗೌರವಿಸಲಾಗಿತ್ತು.

**ಸಂಸದೆಯಾಗಿ ಸೇವೆ:** ಸುಧಾ ಯಾದವ್ ಅವರು 1999ರಿಂದ 2004ರವರೆಗೆ ಹರಿಯಾಣದ ಮಹೇಂದ್ರಗಢ ಲೋಕಸಭಾ ಕ್ಷೇತ್ರದ ಸಂಸದೆಯಾಗಿ ಕಾರ್ಯನಿರ್ವಹಿಸಿದ್ದರು. ಬಿಜೆಪಿ ಸಂಸದೀಯ ಮಂಡಳಿಗೆ ಆಯ್ಕೆಯಾದ ಎರಡನೇ ಮಹಿಳೆ ಎಂಬ ಹೆಗ್ಗಳಿಕೆಗೂ ಪಾತ್ರರಾಗಿದ್ದರು. ಬಿಜೆಪಿ ಹಿಂದುಳಿದ ವರ್ಗಗಳ ಮೋರ್ಚಾದ ರಾಷ್ಟ್ರೀಯ ಉಸ್ತುವಾರಿ ಹಾಗೂ ರಾಷ್ಟ್ರೀಯ ಹಿಂದುಳಿದ ವರ್ಗಗಳ ಆಯೋಗದ ಸದಸ್ಯೆಯಾಗಿಯೂ ಸೇವೆ ಸಲ್ಲಿಸಿದ್ದಾರೆ.

## 'ಕರ್ನಾಟಕಕ್ಕೆ ಎರಡನೇ ಮಹಿಳಾ ರಾಜ್ಯಪಾಲೆ: ಇದು ಮಹತ್ವದ ದಿನ'

● ವಿಕ್ರಮ ವಾಹಿನಿ । ಬೆಂಗಳೂರು

ಕರ್ನಾಟಕ ಎರಡನೇ ಮಹಿಳಾ ರಾಜ್ಯಪಾಲರನ್ನು ಪಡೆದಿರುವುದು ರಾಜ್ಯದ ಪಾಲಿಗೆ ಮಹತ್ವದ ದಿನವಾಗಿದೆ. ನೂತನ ರಾಜ್ಯಪಾಲೆ ಡಾ. ಸುಧಾ ಯಾದವ್ ಅವರೊಂದಿಗೆ ಹೊಸ ಉತ್ಸಾಹದಿಂದ ಒಟ್ಟಾಗಿ ಕೆಲಸ ಮಾಡೋಣ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು.

ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಶುಕ್ರವಾರ ನಡೆದ ನೂತನ ರಾಜ್ಯಪಾಲೆ ಸುಧಾ ಯಾದವ್ ಅವರ ಸ್ವಾಗತ ಹಾಗೂ ನಿರ್ಗಮಿತ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರ ಬೀಳ್ಕೊಡುಗೆ ಸಮಾರಂಭದಲ್ಲಿ ಅವರು ಮಾತನಾಡಿದರು.

ಕರ್ನಾಟಕದ ಮೊದಲ ಮಹಿಳಾ ರಾಜ್ಯಪಾಲೆ ವಿ.ಎಸ್. ರಮಾದೇವಿ ಅವರೊಂದಿಗೆ ಕೆಲಸ ಮಾಡಿದ ಅನುಭವವಿದೆ. ಇದೀಗ ಸುಧಾ ಯಾದವ್ ಅವರೊಂದಿಗೆ ಕಾರ್ಯನಿರ್ವಹಿಸುವ ಅವಕಾಶ ದೊರೆತಿದೆ. ನೂತನ ರಾಜ್ಯಪಾಲರು ಜನ್ಮದಿನದಂದೇ ಪ್ರಮಾಣವಚನ ಸ್ವೀಕರಿಸಿರುವುದು ವಿಶೇಷ ಎಂದು ಶುಭ ಹಾರೈಸಿದರು.

ಪ್ರಧಾನಿ ನರೇಂದ್ರ ಮೋದಿ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ನೂತನ ರಾಜ್ಯಪಾಲರ ನೇಮಕದ ಕುರಿತು ದೂರವಾಣಿ ಮೂಲಕ ಮಾಹಿತಿ ನೀಡಿದ್ದರು. ರಾಜ್ಯಪಾಲರ ನಿರ್ಧಾರಗಳನ್ನು ರಾಜ್ಯ ಸರ್ಕಾರ ಬಹುತೇಕ ಸ್ವೀಕರಿಸಿದೆ ಎಂದು ಅವರಿಗೆ ತಿಳಿಸಿರುವುದಾಗಿ ಹೇಳಿದರು.

ನಿರ್ಗಮಿತ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರೊಂದಿಗೆ ಐದು ವರ್ಷಗಳ ಕಾಲ ಉತ್ತಮವಾಗಿ ಕಾರ್ಯನಿರ್ವಹಿಸಿದ್ದು, ಅವರು ಸರ್ಕಾರಕ್ಕೆ ಸಹಕಾರ ನೀಡಿದ್ದಾರೆ. ಹಲವು ವಿಚಾರಗಳಲ್ಲಿ ಸರ್ಕಾರದೊಂದಿಗೆ ಚರ್ಚೆ ನಡೆಸಿದ್ದರೂ ರಾಜ್ಯದ ಜನರ ಜೀವನಮಟ್ಟ ಸುಧಾರಣೆಗೆ ಅಗತ್ಯ ಮಾರ್ಗದರ್ಶನ ನೀಡಿದ್ದಾರೆ ಎಂದು ಸಿಎಂ ಸ್ಮರಿಸಿದರು.

ಕರ್ನಾಟಕವು ಶ್ರೀಮಂತ ಸಂಸ್ಕೃತಿ, ಪರಂಪರೆಯನ್ನು ಹೊಂದಿದ್ದು, ಆರ್ಥಿಕತೆ, ತಂತ್ರಜ್ಞಾನ ಹಾಗೂ ಉತ್ತಮ ಆಡಳಿತ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ದೇಶಕ್ಕೆ ಮಹತ್ವದ ಕೊಡುಗೆ ನೀಡುತ್ತಿದೆ. ರಾಜ್ಯದ ಅಧಿಕಾರಿಗಳೂ ರಾಷ್ಟ್ರ ಮತ್ತು ಅಂತರರಾಷ್ಟ್ರೀಯ ಮಟ್ಟದಲ್ಲಿ ಉತ್ತಮ ಆಡಳಿತ ವ್ಯವಸ್ಥೆ ರೂಪಿಸಲು ಶ್ರಮಿಸುತ್ತಿದ್ದಾರೆ ಎಂದರು.

ನಾಡಿನ ಸಂಸ್ಕೃತಿ ಮತ್ತು ಪರಂಪರೆಯ ಪ್ರತೀಕವಾದ ಮೈಸೂರು ದಸರಾ ಮಹೋತ್ಸವಕ್ಕೆ ಆಗಮಿಸುವಂತೆ ನೂತನ ರಾಜ್ಯಪಾಲೆ ಸುಧಾ ಯಾದವ್ ಅವರಿಗೆ ಆಹ್ವಾನ ನೀಡಿದ ಮುಖ್ಯಮಂತ್ರಿ, ರಾಜ್ಯದ ಅಭಿವೃದ್ಧಿಗೆ ಎಲ್ಲರೂ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸೋಣ ಎಂದು ಹೇಳಿದರು.

# *ಪತಿ ಕೊಲೆ ಪ್ರಕರಣ: ಪತ್ನಿ, ಪ್ರಿಯಕರನಿಗೆ ಗಲ್ಲು ಶಿಕ್ಷೆ*

● ವಿಕ್ರಮ ವಾಹಿನಿ । ಮೀರತ್

*ವಿವಾಹೇತರ ಸಂಬಂಧದ ಹಿನ್ನೆಲೆಯಲ್ಲಿ ಪತಿಯನ್ನು ಕೊಲೆ ಮಾಡಿ, ಹಾವು ಕಚ್ಚಿ ಮೃತಪಟ್ಟಿದ್ದಾನೆ ಎಂದು ಬಿಂಬಿಸಲು ಯತ್ನಿಸಿದ ಮಹಿಳೆ ಹಾಗೂ ಆಕೆಯ ಪ್ರಿಯಕರನಿಗೆ ಮೀರತ್‌ನ ಹೆಚ್ಚುವರಿ ಜಿಲ್ಲಾ ನ್ಯಾಯಾಲಯ ಮರಣದಂಡನೆ ವಿಧಿಸಿದೆ. ರವಿತಾ ಮತ್ತು ಅಮರ್‌ದೀಪ್ ಶಿಕ್ಷೆಗೆ ಗುರಿಯಾದವರು.*

*ಉತ್ತರ ಪ್ರದೇಶದ ಅಕ್ಬರ್‌ಪುರ ಸಾದತ್ ಗ್ರಾಮದಲ್ಲಿ 2025ರ ಏಪ್ರಿಲ್ 12ರಂದು ಅಮಿತ್ ಕಶ್ಯಪ್ ಶವವಾಗಿ ಪತ್ತೆಯಾಗಿದ್ದರು. ಮೃತದೇಹದ ಬಳಿ ಹಾವಿದ್ದ ಕಾರಣ ಆರಂಭದಲ್ಲಿ ಹಾವು ಕಚ್ಚಿ ಸಾವು ಸಂಭವಿಸಿರಬಹುದು ಎಂದು ಶಂಕಿಸಲಾಗಿತ್ತು. ಆದರೆ, ಮರಣೋತ್ತರ ಪರೀಕ್ಷೆಯಲ್ಲಿ ಕುತ್ತಿಗೆ ಹಿಸುಕಿ ಉಸಿರುಗಟ್ಟಿಸಿ ಕೊಲೆ ಮಾಡಿರುವುದು ದೃಢಪಟ್ಟಿತ್ತು.*

*ಪೊಲೀಸರ ತನಿಖೆಯಲ್ಲಿ ರವಿತಾ ಮತ್ತು ಅಮರ್‌ದೀಪ್ ಸೇರಿ ಅಮಿತ್ ಅವರನ್ನು ಹತ್ಯೆ ಮಾಡಿ, ಸಾವನ್ನು ಹಾವು ಕಚ್ಚಿದ್ದರಿಂದ ಸಂಭವಿಸಿದೆ ಎಂದು ಬಿಂಬಿಸಲು ಯತ್ನಿಸಿರುವುದು ಬೆಳಕಿಗೆ ಬಂದಿತ್ತು. ಹಾವಿನ ಹಲ್ಲುಗಳನ್ನು ಕಿತ್ತಿರುವುದು ಹಾಗೂ ವಿಷದ ಚೀಲಗಳನ್ನು ತೆಗೆದುಹಾಕಿರುವುದು ತನಿಖೆಯ ಪ್ರಮುಖ ಸುಳಿವಾಯಿತು.*

*ಪ್ರಕರಣದಲ್ಲಿ ಮರಣೋತ್ತರ ಪರೀಕ್ಷೆಯ ವರದಿ, ಮೊಬೈಲ್ ಕರೆಗಳ ದಾಖಲೆ ಸೇರಿದಂತೆ ಹಲವು ಸಾಕ್ಷ್ಯಗಳನ್ನು ಪೊಲೀಸರು ನ್ಯಾಯಾಲಯಕ್ಕೆ ಸಲ್ಲಿಸಿದ್ದರು. ಅಮಿತ್ ಮೃತಪಟ್ಟ ನಾಲ್ಕು ದಿನಗಳಲ್ಲಿ ಆರೋಪಿಗಳು 70ಕ್ಕೂ ಹೆಚ್ಚು ಬಾರಿ ದೂರವಾಣಿಯಲ್ಲಿ ಮಾತನಾಡಿರುವುದು ತನಿಖೆಯಲ್ಲಿ ಪತ್ತೆಯಾಗಿತ್ತು. ಸಾಕ್ಷ್ಯಗಳನ್ನು ಪರಿಶೀಲಿಸಿದ ನ್ಯಾಯಾಲಯ ಇಬ್ಬರಿಗೂ ಮರಣದಂಡನೆ ವಿಧಿಸಿದೆ. ಅಮಿತ್ ಮತ್ತು ರವಿತಾ ದಂಪತಿಗೆ ಮೂವರು ಮಕ್ಕಳಿದ್ದು, ಅವರ ಯೋಗಕ್ಷೇಮವನ್ನು ಜಿಲ್ಲಾಡಳಿತ ನೋಡಿಕೊಳ್ಳಲಿದೆ ಎಂದು ನ್ಯಾಯಾಧೀಶರು ತಿಳಿಸಿದ್ದಾರೆ.*

*ಪ್ರಕರಣದ ತನಿಖೆ ವೇಳೆ ಆರೋಪಿಗಳು ಕೊಲೆಯನ್ನು ಹಾವು ಕಚ್ಚಿದ ಸಾವೆಂದು ನಂಬಿಸುವ ಮೂಲಕ ಪೊಲೀಸರ ದಾರಿ ತಪ್ಪಿಸಲು ಪ್ರಯತ್ನಿಸಿರುವುದು ಬಹಿರಂಗವಾಗಿತ್ತು. ಆರಂಭದಲ್ಲಿ ಸಹಜ ಸಾವೆಂದು ಭಾವಿಸಲಾಗಿದ್ದ ಪ್ರಕರಣವು ಮರಣೋತ್ತರ ಪರೀಕ್ಷೆಯ ವರದಿ ಮತ್ತು ವಿಧಿವಿಜ್ಞಾನ ಸಾಕ್ಷ್ಯಗಳಿಂದ ಕೊಲೆ ಪ್ರಕರಣವಾಗಿ ತಿರುವು ಪಡೆದುಕೊಂಡಿತ್ತು.*

*ವಿವಾಹೇತರ ಸಂಬಂಧದ ಹಿನ್ನೆಲೆಯಲ್ಲಿ ನಡೆದ ಈ ಕೊಲೆ ಪ್ರಕರಣದಲ್ಲಿ ಸಾಕ್ಷ್ಯಾಧಾರಗಳ ಮಹತ್ವವನ್ನು ನ್ಯಾಯಾಲಯ ಒತ್ತಿಹೇಳಿದೆ. ಅಪರಾಧವನ್ನು ಮರೆಮಾಚಲು ರೂಪಿಸಿದ ಸಂಚು ತನಿಖೆಯ ವೇಳೆ ಬಯಲಾಗಿದ್ದು, ಇಬ್ಬರು ಆರೋಪಿಗಳಿಗೆ ಕಠಿಣ ಶಿಕ್ಷೆ ಪ್ರಕಟಿಸಲಾಗಿದೆ. ಇನ್ನು, ಪೋಷಕರನ್ನು ಕಳೆದುಕೊಂಡಿರುವ ಮೂವರು ಮಕ್ಕಳ ಭವಿಷ್ಯ ಮತ್ತು ಆರೈಕೆಯ ಹೊಣೆ ಜಿಲ್ಲಾಡಳಿತದ ಮೇಲಿದೆ.*

# ದೇಶದ ಭವಿಷ್ಯ ನಿರ್ಧರಿಸುವ ಶಕ್ತಿ ಕೇಂದ್ರ ಸಂಸತ್ತು: ದಿನೇಶ್ ಗೂಳಿಗೌಡ

● ವಿಕ್ರಮ ವಾಹಿನಿ । ಮಂಡ್ಯ

ಶಿವಾರ ಗುಡ್ಡ : ಸಂಸತ್ತು ಕೇವಲ ವಾದ–ವಿವಾದ ಮಾಡುವ, ಕಾನೂನು ರೂಪಿಸುವ ಸ್ಥಳವಲ್ಲ, ಅದು ದೇಶದ ಭವಿಷ್ಯವನ್ನು ನಿರ್ಧರಿಸುವ ಪ್ರಜಾಪ್ರಭುತ್ವದ ಶಕ್ತಿ ಕೇಂದ್ರ ಎಂದು ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರು ಹಾಗೂ ಶಾಸಕರಾದ ದಿನೇಶ್ ಗೂಳಿಗೌಡ ಅಭಿಪ್ರಾಯ ವ್ಯಕ್ತಪಡಿಸಿದರು.

ನಗರದ ಶ್ರೀ ಜವಾಹರ್ ನವೋದಯ ವಿದ್ಯಾಲಯದ ಆವರಣದಲ್ಲಿ ಹಮ್ಮಿಕೊಂಡಿದ್ದ 28ನೇ ಪ್ರಾದೇಶಿಕ ಮಟ್ಟದ 'ಯುವ ಸಂಸತ್' ಸ್ಪರ್ಧೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ದೇಶದ ಆರ್ಥಿಕ ಪರಿಸ್ಥಿತಿ ಸುಧಾರಣೆ, ಕೃಷಿ ನೀತಿಗಳು, ಕೈಗಾರಿಕೆಗಳ ಸ್ಥಾಪನೆ, ಉದ್ಯೋಗ ಸೃಷ್ಟಿ, ಆಧುನಿಕ ಎಐ ಕಾಲಘಟ್ಟದಲ್ಲಿ ತೊಡಗಿಕೊಳ್ಳುವ ಕುರಿತಂತೆ ಜನಪರ ಯೋಜನೆಗಳನ್ನು ಜಾರಿಗೆ ತರುವ ವೇದಿಕೆಯಾಗಿ ಸಂಸತ್ತು ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

ಯುವಕರಲ್ಲಿ ನಾಯಕತ್ವ ಗುಣಗಳ ಬೆಳವಣಿಗೆಗೆ ಹಾಗೂ ಸಂಸತ್ತಿನ ಕಾರ್ಯವಿಧಾನಗಳ ಬಗ್ಗೆ ತಿಳಿದುಕೊಳ್ಳಲು "ಯುವ ಸಂಸತ್" ಸ್ಪರ್ಧಾ ಕಾರ್ಯಕ್ರಮ ಉತ್ತಮ ವೇದಿಕೆ ಒದಗಿಸಲಿದೆ. ಈ ಸ್ಪರ್ಧೆ ಕಾರ್ಯಕ್ರಮದ ಮುಖಾಂತರ ಸಂಸತ್ತು ಹೇಗೆ ಕಾರ್ಯನಿರ್ವಹಿಸುತ್ತದೆ, ದೇಶದ ಸಮಸ್ಯೆಗಳನ್ನು ಹೇಗೆ ಚರ್ಚಿಸಲಾಗುತ್ತದೆ ಹಾಗೂ ಕಾನೂನುಗಳು ಹೇಗೆ ರೂಪುಗೊಳ್ಳುತ್ತವೆ ಎಂಬುದನ್ನು ಶಾಲಾ ಹಂತದಲ್ಲೇ ವಿದ್ಯಾರ್ಥಿಗಳು ತಿಳಿದುಕೊಳ್ಳಬೇಕು ಎಂದರು.




ಮುಂದಿನ ತಲೆಮಾರಿನ ನಾಯಕರಾಗುವ ವಿದ್ಯಾರ್ಥಿಗಳು, ದೇಶದ ಅಭಿವೃದ್ಧಿಗೆ ಏನು ಕೊಡುಗೆಗಳನ್ನು ನೀಡಬಹುದು ಎಂದು ಚರ್ಚಿಸಬೇಕು. ತಲಾದಾಯ ಹೆಚ್ಚಳ, ಸ್ವಉದ್ಯೋಗ ಸ್ಥಾಪನೆ, ಉದ್ಯೋಗಗಳ ಸೃಷ್ಟಿ, ಜಗತ್ತಿನ ಇತರೆ ರಾಷ್ಟ್ರಗಳೊಂದಿಗೆ ಭಾರತ ಯಾವ ರೀತಿ ಸ್ಪರ್ಧಿಸುತ್ತಿದೆ ಎಂಬುದರ ಕುರಿತು ಈಗಿನಿಂದಲೇ ಅಧ್ಯಯನ ನಡೆಸಬೇಕು. ಸಮಾಜದ ಕಟ್ಟಕಡೆಯ ಸಾಮಾನ್ಯ ನಾಗರಿಕನ ಸಂಕಷ್ಟಗಳನ್ನು ಗ್ರಹಿಸಿ, ಅದನ್ನು ಸಂಸದೀಯ ಚೌಕಟ್ಟಿನಲ್ಲಿ ಬಗೆಹರಿಸುವ ಕಲೆಯನ್ನು ಕರಗತ ಮಾಡಿಕೊಳ್ಳಬೇಕು ಎಂದು ಕರೆಕೊಟ್ಟರು.

ನಾಯಕತ್ವ ಎಂದರೆ ಕೇವಲ ಅಧಿಕಾರ ಚಲಾಯಿಸುವುದಲ್ಲ, ಬದಲಿಗೆ ಅದೊಂದು ಮಹತ್ತರವಾದ ಸಾಮಾಜಿಕ ಹೊಣೆಗಾರಿಕೆ. ಈ ನಿಟ್ಟಿನಲ್ಲಿ ಯಾವುದೇ ಪ್ರಮುಖ ವಿಷಯದ ಬಗ್ಗೆ ಆಳವಾದ ಅಧ್ಯಯನ ನಡೆಸಿ, ತನ್ನದೇ ಆದ ಸ್ಪಷ್ಟ ನಿಲುವು ರೂಪಿಸಿಕೊಂಡು ನಿರ್ಧಾರಗಳನ್ನು ತೆಗೆದುಕೊಳ್ಳುವ ನಾಯಕತ್ವದ ಗುಣಗಳು ಬೆಳೆಯಲು ಇಂತಹ ಕಾರ್ಯಕ್ರಮಗಳು ನೆರವಾಗಲಿದೆ ಎಂದು ಹೇಳಿದರು.

2011–12ರಲ್ಲಿಮೈಸೂರು ಎಓಗಿ ಶಾಲೆ ರಾಷ್ಟ್ರ ಮಟ್ಟದ ಯುವ ಸಂಸತ್ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯಕ್ಕೆ ಕೀರ್ತಿ ತಂದಿತ್ತು. ಅದೇ ಪರಂಪರೆಯನ್ನು ಮುಂದುವರಿಸಿ, ಇಂದು ಮಂಡ್ಯದಲ್ಲಿ ನಡೆಯುತ್ತಿರುವ ಈ ಪ್ರಾದೇಶಿಕ ಸ್ಪರ್ಧೆಯಲ್ಲಿ ಭಾಗವಹಿಸಿರುವ ನಿಮ್ಮಲ್ಲೊಬ್ಬರು ಮುಂದಿನ ರಾಷ್ಟ್ರಮಟ್ಟದ ಸ್ಪರ್ಧೆಯಲ್ಲೂ ವಿಜೇತರಾಗಿ ಹೊರಹೊಮ್ಮಬೇಕು ಎಂದು ಸ್ಫೂರ್ತಿ ತುಂಬಿದರು.

ಕೇವಲ ಪಠ್ಯಪುಸ್ತಕಗಳಿಗಷ್ಟೇ ಸೀಮಿತವಾಗದೆ ಇಂತಹ ಪಠ್ಯೇತರ ಚಟುವಟಿಕೆಗಳು ಹಾಗೂ ವೇದಿಕೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳುವುದರಿಂದ ನಿಮ್ಮ ಆತ್ಮವಿಶ್ವಾಸ ಇಮ್ಮಡಿಗೊಳ್ಳುತ್ತದೆ. ನಾಳೆ ನೀವುಗಳೆ ಸಂಸತ್ ಸದಸ್ಯರು, ಶಾಸಕರು, ಐಎಎಸ್ ಅಧಿಕಾರಿಗಳು ಹಾಗೂ ಮಹಾನ್ ನಾಯಕರಾಗಿ ಹೊರಹೊಮ್ಮಲಿದ್ದಾರೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಹೈದರಾಬಾದ್ ನವೋದಯ ವಿದ್ಯಾಲಯದ ಸಹಾಯಕ ಆಯುಕ್ತರಾದ ಹೇಮಲತಾ, ತುಮಕೂರು ನವೋದಯ ವಿದ್ಯಾಲಯದ ಪ್ರಾಂಶುಪಾಲರಾದ ಸುಂದರ್ ಕುಮಾರ್, ಮಂಡ್ಯ ನವೋದಯ ವಿದ್ಯಾಲಯದ ಪ್ರಾಂಶುಪಾಲರಾದ ಪ್ರಸಾದ್ ಹಾಗೂ ಕೇರಳದ ವೈನಾಡು, ಹೈದರಾಬಾದ್, ದಕ್ಷಿಣ ಕನ್ನಡ ಜಿಲ್ಲೆ ಸೇರಿದಂತೆ ಪ್ರಾದೇಶಿಕ ನವೋದಯ ವಿದ್ಯಾಲಯದ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಗೋವಾ ಪ್ರತಿಭಟನೆಯಲ್ಲಿ 'ಹಿಂದೂವಾದ ಮುರ್ದಾಬಾದ್' ಘೋಷಣೆ: ಕಠಿಣ ಕ್ರಮಕ್ಕೆ ಹಿಂದೂ ಜನಜಾಗೃತಿ ಸಮಿತಿ ಆಗ್ರಹ

● ವಿಕ್ರಮ ವಾಹಿನಿ । ಬೆಂಗಳೂರು

ಗೋವಾದ ಪಣಜಿಯಲ್ಲಿ 'ಕಾಕ್ರೋಚ್ ಜನತಾ ಪಾರ್ಟಿ' (ಸಿಜೆಪಿ) ಆಯೋಜಿಸಿದ್ದ ಪ್ರತಿಭಟನೆಯಲ್ಲಿ 'ಹಿಂದೂವಾದ ಮುರ್ದಾಬಾದ್' ಎಂಬ ಘೋಷಣೆಗಳನ್ನು ಕೂಗಲಾಗಿದೆ ಎಂದು ಆರೋಪಿಸಿರುವ ಹಿಂದೂ ಜನಜಾಗೃತಿ ಸಮಿತಿ, ಪ್ರತಿಭಟನೆಯ ಆಯೋಜಕರೂ ಸೇರಿದಂತೆ ಸಂಬಂಧಪಟ್ಟವರ ವಿರುದ್ಧ ಪ್ರಕರಣ ದಾಖಲಿಸಿ ಕಠಿಣ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದೆ.

ಎಸ್ಐಆರ್ ವಿರೋಧ ಹಾಗೂ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ರಾಜೀನಾಮೆಗೆ ಆಗ್ರಹಿಸಿ ನಡೆದ ಪ್ರತಿಭಟನೆಯಲ್ಲಿ ಹಿಂದೂವಿರೋಧಿ ನಿಲುವುಗಳು ವ್ಯಕ್ತವಾಗಿವೆ ಎಂದು ಸಮಿತಿಯ ಗೋವಾ ರಾಜ್ಯ ಸಂಯೋಜಕ ಸತ್ಯವಿಜಯ ನಾಯ್ಕ್ ಆರೋಪಿಸಿದ್ದಾರೆ.

ಪ್ರತಿಭಟನೆಯಲ್ಲಿ ಪಾಕಿಸ್ತಾನಿ ಕವಿ ಫೈಜ್ ಅಹ್ಮದ್ ಫೈಜ್ ಅವರ ಕವಿತೆಯನ್ನಾಧರಿಸಿದ ಹಾಡನ್ನು ಪ್ರಸ್ತುತಪಡಿಸಲಾಗಿದೆ. ಈ ಹಿಂದೆ ನೀಟ್ ಪರೀಕ್ಷೆ ವಿರೋಧಿಸಿ ನಡೆದ ಪ್ರತಿಭಟನೆಯಲ್ಲಿ 'ಫ್ರೀ ಉಮರ್ ಖಾಲಿದ್' ಎಂಬ ಪೋಸ್ಟರ್‌ಗಳನ್ನು ಪ್ರದರ್ಶಿಸಲಾಗಿತ್ತು ಎಂದು ಅವರು ದೂರಿದ್ದಾರೆ.

ಸಾಮಾಜಿಕ ಸಮಸ್ಯೆಗಳ ನೆಪದಲ್ಲಿ ಯುವಕರನ್ನು ಬಳಸಿಕೊಂಡು ಅಶಾಂತಿ ಸೃಷ್ಟಿಸುವ ಪ್ರಯತ್ನ ನಡೆಯುತ್ತಿದೆ ಎಂದು ಆರೋಪಿಸಿದ ನಾಯ್ಕ್, ಪ್ರತಿಭಟನೆಯ ಸೂತ್ರಧಾರಿ ಅಮರೀನ್ ಶೇಖ್ ಸೇರಿದಂತೆ ಸಂಬಂಧಪಟ್ಟವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

ಸೂಚನೆ: ಮೇಲಿನ ಆರೋಪಗಳು ಹಿಂದೂ ಜನಜಾಗೃತಿ ಸಮಿತಿಯ ಪತ್ರಿಕಾ ಪ್ರಕಟಣೆಯಲ್ಲಿ ಮಾಡಲಾದ ಆರೋಪಗಳಾಗಿದ್ದು, ಅವುಗಳ ಸ್ವತಂತ್ರ ದೃಢೀಕರಣ ಇಲ್ಲಿ ಲಭ್ಯವಿಲ್ಲ.

## ಯಾಜ್ಞವಲ್ಕ್ಯ ಜಯಂತಿಯಿಂದ ಪ್ರತಿಭಾ ಪುರಸ್ಕಾರ: ಅರ್ಜಿ ಆಹ್ವಾನ

● ವಿಕ್ರಮ ವಾಹಿನಿ । ಬೆಂಗಳೂರು

ಇಲ್ಲಿನ ಚಾಮರಾಜಪೇಟೆಯಲ್ಲಿರುವ ಶ್ರೀ ಶುಕ್ಲಯಜುಃಶಾಖಾ ಟ್ರಸ್ಟ್ (ರಿ), ಶ್ರೀ ಯಾಜ್ಞವಲ್ಕ್ಯಾಶ್ರಮದಿಂದ ನವೆಂಬರ್ 16 ರಿಂದ 19ರವರೆಗೆ ಶ್ರೀ ಯೋಗೀಶ್ವರ ಯಾಜ್ಞವಲ್ಕ್ಯ ಜಯಂತಿ ಹಮ್ಮಿಕೊಳ್ಳಲಾಗಿದೆ.

ತನ್ನಿಮಿತ್ತ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಆಯೋಜಿಸಿದ್ದು, ಶ್ರೀ ಯೋಗೀಶ್ವರ ಯಾಜ್ಞವಲ್ಯ ಜಯಂತಿಯ ಅಂಗವಾಗಿ ಶುಕ್ಲಯಜುಶಾಖೀಯ ಪ್ರತಿಭಾವಂತ ಬ್ರಾಹ್ಮಣ ಶುಕ್ಲಯಜುರ್ವೇದೀಯ ವಿದ್ಯಾರ್ಥಿಗಳು ಇದರ ಪ್ರಯೋಜನ ಪಡೆದುಕೊಳ್ಳಬಹುದು. ಶೇ. 85% ಅಂಕಗಳು ಮೇಲ್ಪಟ್ಟ ಎಸ್.ಎಸ್.ಎಲ್.ಸಿ., ದ್ವಿತೀಯ ಪಿ.ಯು.ಸಿ., ಪದವಿ ಹಾಗೂ ಸ್ನಾತಕೋತ್ತರ ವಿದ್ಯಾರ್ಥಿಗಳು ಪ್ರತಿಭಾ ಪುರಸ್ಕಾರಕ್ಕಾಗಿ ಟ್ರಸ್ಟಿನ ಕಛೇರಿಯಲ್ಲಿ ಅರ್ಜಿಯನ್ನು ಪಡೆದು ನವೆಂಬರ್ 10ರಂದು ಮಂಗಳವಾರ ಸಂಜೆ 4.30 ರ ಒಳಗಾಗಿ ಚಾಮರಾಜಪೇಟೆಯಲ್ಲಿರುವ ಶ್ರೀ ಯೋಗೀಶ್ವರ ಯಾಜ್ಞವಲ್ಯ ಆಶ್ರಮ ಟ್ರಸ್ಟ್ (ರಿ), ಬೆಂಗಳೂರು ಕಛೇರಿಗೆ ನೀಡಬೇಕೆಂದು ತಿಳಿಸಲಾಗಿದೆ.

ಪ್ರತಿಭಾ ಪುರಸ್ಕಾರ ಪಡೆಯುವ ವಿದ್ಯಾರ್ಥಿಗಳು ಖುದ್ದಾಗಿ ಬಂದು ಪುರಸ್ಕಾರವನ್ನು ಪಡೆಯಬೇಕಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ: ಮೊಬೈಲ್ ಸಂಖ್ಯೆ: 9663063189 ಅಥವಾ 080–26677055 ಈ ಸಂಖ್ಯೆಗೆ ಸಂಪರ್ಕಿಸಬಹುದು. ಅರ್ಜಿಯನ್ನು ಪಡೆಯಲು ನವೆಂಬರ್ 1 ಕಡೆಯ ದಿನಾಂಕವಾಗಿದೆ ಎಂದು ಶ್ರೀ ಶುಕ್ಲಯಜುಃ ಶಾಖಾ ಟ್ರಸ್ಟ್, ಯಾಜ್ಞವಲ್ಕ್ಯಾಶ್ರಮದ ಅಧ್ಯಕ್ಷರು ಮತ್ತು ಕಾರ್ಯದರ್ಶಿಗಳು ತಿಳಿಸಿದ್ದಾರೆ.

ಜಯಂತಿ ಕಾರ್ಯಕ್ರಮದ ಅಂಗವಾಗಿ ಶ್ರೀ ಯೋಗೀಶ್ವರ ಯಾಜ್ಞವಲ್ಕ್ಯರ ಜೀವನ, ವೇದಾಧ್ಯಯನ ಹಾಗೂ ಧಾರ್ಮಿಕ ಕೊಡುಗೆಗಳನ್ನು ಸ್ಮರಿಸುವ ವಿವಿಧ ಧಾರ್ಮಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯುವ ನಿರೀಕ್ಷೆಯಿದೆ. ವೇದ ಪರಂಪರೆ ಹಾಗೂ ಸಂಸ್ಕೃತಿಯ ಮಹತ್ವವನ್ನು ಯುವ ಪೀಳಿಗೆಗೆ ಪರಿಚಯಿಸುವುದರ ಜೊತೆಗೆ, ವಿದ್ಯಾರ್ಥಿಗಳಲ್ಲಿ ಶೈಕ್ಷಣಿಕ ಸಾಧನೆಗೆ ಪ್ರೋತ್ಸಾಹ ನೀಡುವುದು ಕಾರ್ಯಕ್ರಮದ ಉದ್ದೇಶವಾಗಿದೆ.

ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಅಗತ್ಯ ಶೈಕ್ಷಣಿಕ ದಾಖಲೆಗಳೊಂದಿಗೆ ನಿಗದಿತ ಅವಧಿಯೊಳಗೆ ಅರ್ಜಿ ಸಲ್ಲಿಸಬೇಕು. ಅರ್ಹ ವಿದ್ಯಾರ್ಥಿಗಳು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳುವಂತೆ ಟ್ರಸ್ಟ್‌ನ ಅಧ್ಯಕ್ಷರು ಮತ್ತು ಕಾರ್ಯದರ್ಶಿಗಳು ಮನವಿ ಮಾಡಿದ್ದಾರೆ.

# ಕಾಂಗ್ರೆಸ್ ವಿರುದ್ಧ ಜನಾಕ್ರೋಶ; ನಾಲ್ಕೂ ವಿಧಾನ ಪರಿಷತ್ ಕ್ಷೇತ್ರಗಳಲ್ಲಿ ಎನ್‌ಡಿಎ ಗೆಲುವು ಖಚಿತ: ಪ್ರಲ್ಹಾದ ಜೋಶಿ

● ವಿಕ್ರಮ ವಾಹಿನಿ । ಗದಗ

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರದ ಆಡಳಿತದ ವಿರುದ್ಧ ಜನಾಕ್ರೋಶ ಹೆಚ್ಚಾಗಿದ್ದು, ಪಶ್ಚಿಮ ಪದವೀಧರ ಕ್ಷೇತ್ರ ಸೇರಿದಂತೆ ನಾಲ್ಕೂ ವಿಧಾನ ಪರಿಷತ್ ಕ್ಷೇತ್ರಗಳಲ್ಲಿ ಎನ್‌ಡಿಎ ಅಭ್ಯರ್ಥಿಗಳು ಗೆಲುವು ಸಾಧಿಸಲಿದ್ದಾರೆ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ವಿಶ್ವಾಸ ವ್ಯಕ್ತಪಡಿಸಿದರು.

ಹುಬ್ಬಳ್ಳಿ–ಧಾರವಾಡದಲ್ಲಿ ಬಿಜೆಪಿ ಅಭ್ಯರ್ಥಿ ಸಂಕನೂರು ಪರ ಪ್ರಚಾರ ನಡೆಸಿದ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರದ ಆಡಳಿತ ವೈಖರಿ, ವಿದ್ಯುತ್ ಸಮಸ್ಯೆ, ಬರ ನಿರ್ವಹಣೆ, ಬೆಲೆ ಏರಿಕೆ ಹಾಗೂ ಸ್ಟಿಂಗ್ ಆಪರೇಷನ್ ವಿವಾದದ ಕುರಿತು ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದರು.

**ವಿದ್ಯುತ್, ಬರ ನಿರ್ವಹಣೆಯಲ್ಲಿ ಸರ್ಕಾರ ವಿಫಲ**

ಒಂದು ಕಾಲದಲ್ಲಿ ವಿದ್ಯುತ್ ಉತ್ಪಾದನೆಯಲ್ಲಿ ಮುಂಚೂಣಿಯಲ್ಲಿದ್ದ ಕರ್ನಾಟಕದಲ್ಲಿ ಈಗ ರೈತರು ಮತ್ತು ಗ್ರಾಮೀಣ ಭಾಗದ ಜನರು ವಿದ್ಯುತ್ ಕಡಿತದ ಸಮಸ್ಯೆ ಎದುರಿಸುತ್ತಿದ್ದಾರೆ. ಸಮರ್ಪಕವಾಗಿ ವಿದ್ಯುತ್ ಖರೀದಿಸಿ ಪೂರೈಸುವಲ್ಲಿ ರಾಜ್ಯ ಸರ್ಕಾರ ವಿಫಲವಾಗಿದೆ ಎಂದು ಜೋಶಿ ಆರೋಪಿಸಿದರು.

ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಅತಿವೃಷ್ಟಿಯಿಂದ ಹಾನಿಗೊಳಗಾದ ರೈತರಿಗೆ ಹೆಚ್ಚಿನ ಪರಿಹಾರ ನೀಡಲಾಗಿತ್ತು. ಆದರೆ, ಈಗಿನ ಸರ್ಕಾರ ಬರಪೀಡಿತ ರೈತರಿಗೆ ಸಮರ್ಪಕ ಪರಿಹಾರ ಒದಗಿಸದೆ ನಿರ್ಲಕ್ಷ್ಯ ವಹಿಸಿದೆ ಎಂದು ಟೀಕಿಸಿದರು.



"ಕಾಂಗ್ರೆಸ್ ಸರ್ಕಾರದ ಆಡಳಿತದ ವಿರುದ್ಧ ಜನಾಕ್ರೋಶ ಹೆಚ್ಚಾಗಿದೆ. ಪಶ್ಚಿಮ ಪದವೀಧರ ಕ್ಷೇತ್ರ ಸೇರಿದಂತೆ ನಾಲ್ಕೂ ವಿಧಾನ ಪರಿಷತ್ ಕ್ಷೇತ್ರಗಳಲ್ಲಿ ಎನ್‌ಡಿಎ ಅಭ್ಯರ್ಥಿಗಳು ಗೆಲುವು ಸಾಧಿಸಲಿದ್ದಾರೆ. ಸ್ಟಿಂಗ್ ಆಪರೇಷನ್ ಪ್ರಕರಣದಲ್ಲಿ ಸತ್ಯಾಸತ್ಯತೆ ಹೊರಬರಲು ಎಸ್‌ಐಟಿ ಅಥವಾ ನ್ಯಾಯಾಲಯದ ಮೇಲ್ವಿಚಾರಣೆಯಲ್ಲಿ ಸಮಗ್ರ ತನಿಖೆಯಾಗಬೇಕು. ತಪ್ಪಿತಸ್ಥರು ಯಾರೇ ಆಗಿದ್ದರೂ ಕ್ರಮ ಕೈಗೊಳ್ಳಬೇಕು."

**ಸ್ಟಿಂಗ್ ಪ್ರಕರಣಕ್ಕೆ ನ್ಯಾಯಸಮ್ಮತ ತನಿಖೆಯಾಗಲಿ**

ರಾಜ್ಯದಲ್ಲಿ ಚರ್ಚೆಗೆ ಗ್ರಾಸವಾಗಿರುವ ಸ್ಟಿಂಗ್ ಆಪರೇಷನ್ ಪ್ರಕರಣದ ಕುರಿತು ಸಮಗ್ರ ತನಿಖೆ ನಡೆಸಬೇಕು. ರಾಜ್ಯ ಸರ್ಕಾರ ಎಸ್‌ಐಟಿ ರಚಿಸಲಿ ಅಥವಾ ನ್ಯಾಯಾಲಯದ ಮೇಲ್ವಿಚಾರಣೆಯಲ್ಲಿ ತನಿಖೆ ನಡೆಸಲಿ; ತಪ್ಪಿತಸ್ಥರು ಯಾರೇ ಆಗಿದ್ದರೂ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಪ್ರಕರಣದಲ್ಲಿ ಸತ್ಯಾಸತ್ಯತೆ ಹೊರಬರುವುದಕ್ಕಿಂತ ಚಿತ್ರೀಕರಣ ಮಾಡಿದವರು ಯಾರು ಎಂಬ ಚರ್ಚೆಗೆ ಹೆಚ್ಚು ಆದ್ಯತೆ ನೀಡಲಾಗುತ್ತಿದೆ ಎಂದು ಆಕ್ಷೇಪಿಸಿದ ಅವರು, ರಾಜಕೀಯ ಭಿನ್ನಾಭಿಪ್ರಾಯಗಳಿದ್ದರೂ ನ್ಯಾಯಸಮ್ಮತ ತನಿಖೆ ನಡೆಯಬೇಕು ಎಂದರು.

ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರ ಆರೋಗ್ಯದ ಕುರಿತು ಗೃಹ ಸಚಿವರು ನೀಡಿದ ಹೇಳಿಕೆಗೆ ಪ್ರತಿಕ್ರಿಯಿಸಿದ ಜೋಶಿ, ಆರೋಗ್ಯದ ವಿಚಾರದಲ್ಲಿ ರಾಜಕೀಯ ವಿರೋಧವನ್ನು ಬದಿಗಿಟ್ಟು ಕನಿಷ್ಠ ಸೌಜನ್ಯ ತೋರಬೇಕು ಎಂದು ಹೇಳಿದರು.

**ಬೆಲೆ ಏರಿಕೆಯಿಂದ ಜನರಿಗೆ ಹೊರೆ:** ಕಾಂಗ್ರೆಸ್ ಆಡಳಿತದಲ್ಲಿ ಹಾಲು, ಡೀಸೆಲ್, ಸಾರಿಗೆ ಹಾಗೂ ವಿವಿಧ ಪ್ರಮಾಣಪತ್ರಗಳ ಶುಲ್ಕ ಹೆಚ್ಚಳದಿಂದ ಜನಸಾಮಾನ್ಯರಿಗೆ ಆರ್ಥಿಕ ಹೊರೆ ಹೆಚ್ಚಾಗಿದೆ. ಸರ್ಕಾರ ನೀಡುವ ಆರ್ಥಿಕ ನೆರವಿನ ಲಾಭವನ್ನು ಬೆಲೆ ಏರಿಕೆಯ ಮೂಲಕ ಜನರಿಂದಲೇ ವಸೂಲಿ ಮಾಡಲಾಗುತ್ತಿದೆ ಎಂದು ಆರೋಪಿಸಿದರು. ಸಾರಿಗೆ ಸಂಸ್ಥೆಗಳ ಬಸ್‌ಗಳ ನಿರ್ವಹಣೆ ಹಾಗೂ ಬಿಡಿಭಾಗಗಳ ಕೊರತೆಯ ಬಗ್ಗೆಯೂ ಸರ್ಕಾರ ಗಮನಹರಿಸಬೇಕು ಎಂದು ಒತ್ತಾಯಿಸಿದರು.

**ಕಬ್ಬು ಬೆಳೆಗಾರರ ಸಮಸ್ಯೆ ಪರಿಹಾರಕ್ಕೆ ಆಗ್ರಹ:** ಕಬ್ಬಿನ ಬೆಲೆ, ತೂಕದಲ್ಲಿನ ವ್ಯತ್ಯಾಸ ಹಾಗೂ ಸಕ್ಕರೆ ಇಳುವರಿ ಪ್ರಮಾಣಕ್ಕೆ ಸಂಬಂಧಿಸಿದ ಸಮಸ್ಯೆಗಳ ಅಧ್ಯಯನಕ್ಕಾಗಿ ಪ್ರೊ. ರಮೇಶ್ ಚಂದ್ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಲಾಗಿದೆ. ರೈತರು ಸಮಿತಿಯ ಅಧ್ಯಯನಕ್ಕೆ ಸಹಕರಿಸಬೇಕು ಎಂದು ಜೋಶಿ ಮನವಿ ಮಾಡಿದರು.

ಕೇಂದ್ರದ ಎಥೆನಾಲ್ ಮಿಶ್ರಣ ನೀತಿಯಿಂದ ಕಬ್ಬು ಬೆಳೆಗಾರರು ಮತ್ತು ಸಕ್ಕರೆ ಉದ್ಯಮಕ್ಕೆ ಅನುಕೂಲವಾಗಿದೆ ಎಂದು ಪ್ರತಿಪಾದಿಸಿದ ಅವರು, ಕರ್ನಾಟಕದಲ್ಲಿಯೂ ಕಬ್ಬಿಗೆ ರಾಜ್ಯ ಸಲಹಾ ಬೆಲೆ (ಎಸ್‌ಎಪಿ) ನಿಗದಿಪಡಿಸುವುದು ಸೇರಿದಂತೆ ರೈತರ ಬೇಡಿಕೆಗಳನ್ನು ಈಡೇರಿಸಲು ರಾಜ್ಯ ಸರ್ಕಾರ ಮುಂದಾಗಬೇಕು ಎಂದು ಒತ್ತಾಯಿಸಿದರು.

**ಸಂಕನೂರು ಗೆಲುವಿನ ವಿಶ್ವಾಸ:** ಪಶ್ಚಿಮ ಪದವೀಧರ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಸಂಕನೂರು ಗೆಲುವು ಸಾಧಿಸಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದ ಜೋಶಿ, ಪದವೀಧರರು ಸೇರಿದಂತೆ ಮತದಾರರಿಂದ ಬಿಜೆಪಿಗೆ ಉತ್ತಮ ಬೆಂಬಲ ವ್ಯಕ್ತವಾಗುತ್ತಿದೆ ಎಂದರು. ವಿಧಾನ ಪರಿಷತ್ ಚುನಾವಣೆ ಮುಂದಿನ ಚುನಾವಣೆಗಳಿಗೆ ದಿಕ್ಸೂಚಿಯಾಗಲಿದೆ ಎಂದು ಹೇಳಿದರು.

ದೇಶದ ಹಲವು ರಾಜ್ಯಗಳಲ್ಲಿ ಕಾಂಗ್ರೆಸ್ ತನ್ನ ನೆಲೆ ಕಳೆದುಕೊಳ್ಳಲು ಪ್ರಾದೇಶಿಕ ಪಕ್ಷಗಳೊಂದಿಗಿನ ರಾಜಕೀಯ ಸ್ಪರ್ಧೆಯೂ ಕಾರಣವಾಗಿದೆ ಎಂದು ಟೀಕಿಸಿದ ಅವರು, ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ಬಿಜೆಪಿ ಸಂಘಟನೆ ಬಲಗೊಂಡಿದೆ ಎಂದು ಪ್ರತಿಪಾದಿಸಿದರು.



ಶುಕ್ರವಾರ ಶ್ರೀಕ್ಷೇತ್ರ ಧರ್ಮಸ್ಥಳದಲ್ಲಿ ಧರ್ಮಾಧಿಕಾರಿಗಳಾದ ಶ್ರೀ ವೀರೇಂದ್ರ ಹೆಗ್ಗಡೆ ಅವರನ್ನು ಭೇಟಿ ಮಾಡಿದ್ದ ಬೆಂಗಳೂರಿನ ಮಹಾಲಕ್ಷ್ಮಿ ಲೇಔಟ್‌ನ ಶ್ರೀ ಗಾಯಿತ್ರಿ ಸೇವಾ ಟ್ರಸ್ಟ್ ರಾಘವೇಂದ್ರ ಭಟ್ ಮತ್ತು ಕುಟುಂಬದವರು ಧರ್ಮಾಧಿಕಾರಿಗಳ ಆರೋಗ್ಯ ವಿಚಾರಿಸಿ ಅವರಿಂದ ಆಶೀರ್ವಾದ ಪಡೆದುಕೊಂಡರು.

## ಅಮೆರಿಕದಲ್ಲಿ ದೇವಾಲಯದ ಮೇಲೆ ದಾಳಿ ಸಂಚು: ಭಾರತೀಯರ ಸುರಕ್ಷತೆಗೆ ಆಗ್ರಹ

● ವಿಕ್ರಮ ವಾಹಿನಿ । ನವದೆಹಲಿ

ಅಮೆರಿಕದ ಇಲಿನಾಯ್ಸ್‌ನಲ್ಲಿರುವ ಹಿಂದೂ ದೇವಾಲಯವೊಂದರ ಮೇಲೆ ಭಾರಿ ಪ್ರಮಾಣದ ಗುಂಡಿನ ದಾಳಿ ನಡೆಸಲು ರೂಪಿಸಲಾಗಿದ್ದ ಸಂಚನ್ನು ಅಲ್ಲಿನ ಪೊಲೀಸರು ಭಗ್ನಗೊಳಿಸಿದ ಹಿನ್ನೆಲೆಯಲ್ಲಿ, ಅಮೆರಿಕದಲ್ಲಿರುವ ಭಾರತೀಯರ ಸುರಕ್ಷತೆ ಖಚಿತಪಡಿಸುವಂತೆ ಭಾರತ ಸರ್ಕಾರ ಆಗ್ರಹಿಸಿದೆ.

ಈ ಘಟನೆ ತೀವ್ರ ಕಳವಳ ಮೂಡಿಸಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ತಿಳಿಸಿದ್ದಾರೆ. ಅಮೆರಿಕದಲ್ಲಿರುವ ಭಾರತೀಯ ಸಮುದಾಯದ ಸುರಕ್ಷತೆ ಮತ್ತು ಭದ್ರತೆಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಅಲ್ಲಿನ ಅಧಿಕಾರಿಗಳನ್ನು ಒತ್ತಾಯಿಸಿದ್ದಾರೆ.

ಇಲಿನಾಯ್ಸ್‌ನ ಹಿಂದೂ ದೇವಾಲಯವನ್ನು ಗುರಿಯಾಗಿಸಿಕೊಂಡು ಗುಂಡಿನ ದಾಳಿ ನಡೆಸಲು ಸಂಚು ರೂಪಿಸಲಾಗಿತ್ತು ಎಂಬ ವರದಿಗಳನ್ನು ಭಾರತ ಗಮನಿಸಿದೆ. ಅಮೆರಿಕದಲ್ಲಿರುವ ಭಾರತೀಯ ಪ್ರಜೆಗಳ ಭದ್ರತೆಗೆ ಸೂಕ್ತ ಕ್ರಮಗಳನ್ನು ಕೈಗೊಳ್ಳುವುದು ಅಗತ್ಯ ಎಂದು ಜೈಸ್ವಾಲ್ ಹೇಳಿದ್ದಾರೆ. ಈ ಘಟನೆಯ ಹಿನ್ನೆಲೆಯಲ್ಲಿ ಭಾರತೀಯ ಸಮುದಾಯದ ಸುರಕ್ಷತೆಯ ಕುರಿತು ಭಾರತ ಕಳವಳ ವ್ಯಕ್ತಪಡಿಸಿದೆ.

# ಡ್ರೈಡೇ ಆದೇಶಕ್ಕೆ ಬಾರ್, ಹೋಟೆಲ್ ಉದ್ಯಮಿಗಳ ಆಕ್ಷೇಪ

● ವಿಕ್ರಮ ವಾಹಿನಿ । ಬೆಂಗಳೂರು

ಬೆಂಗಳೂರು ಶಿಕ್ಷಕರ ಕ್ಷೇತ್ರ ಹಾಗೂ ಆಗ್ನೇಯ ಪದವೀಧರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆ ಹಿನ್ನೆಲೆಯಲ್ಲಿ ಅಕ್ಟೋಬರ್ 21ರಿಂದ 23ರವರೆಗೆ ಹಾಗೂ ಮತ ಎಣಿಕೆ ದಿನವಾದ ಅಕ್ಟೋಬರ್ 27ರಂದು ಮದ್ಯ ಮಾರಾಟ ನಿಷೇಧಿಸಿ ಜಿಲ್ಲಾಧಿಕಾರಿ ಆದೇಶ ಹೊರಡಿಸಿದ್ದಾರೆ.

ಈ ನಿರ್ಧಾರಕ್ಕೆ ಬಾರ್, ಹೋಟೆಲ್ ಮತ್ತು ರೆಸ್ಟೋರೆಂಟ್ ಉದ್ಯಮಿಗಳು ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದು, ಆದೇಶವನ್ನು ಮರುಪರಿಶೀಲಿಸುವಂತೆ ಒತ್ತಾಯಿಸಿದ್ದಾರೆ.

**ಅ. 21ರಿಂದ 23ರವರೆಗೆ ಮದ್ಯ ಮಾರಾಟ ಬಂದ್**

ಜಿಲ್ಲಾಧಿಕಾರಿಗಳ ಆದೇಶದ ಪ್ರಕಾರ, ಅಕ್ಟೋಬರ್ 21ರ ಸಂಜೆ 4 ಗಂಟೆಯಿಂದ ಅಕ್ಟೋಬರ್ 23ರ ಸಂಜೆ 4 ಗಂಟೆಯವರೆಗೆ ಹಾಗೂ ಅಕ್ಟೋಬರ್ 27ರಂದು ಬೆಳಗ್ಗೆ 6 ಗಂಟೆಯಿಂದ ಮಧ್ಯರಾತ್ರಿ 12 ಗಂಟೆಯವರೆಗೆ ಮದ್ಯ ಮಾರಾಟ ನಿಷೇಧಿಸಲಾಗಿದೆ.



ಈ ಆದೇಶ ಬೆಂಗಳೂರು ನಗರ ಜಿಲ್ಲೆಯ ವ್ಯಾಪ್ತಿಗೆ ಅನ್ವಯಿಸಲಿದ್ದು, ಪೊಲೀಸ್ ಕಮಿಷನರೇಟ್ ವ್ಯಾಪ್ತಿಯನ್ನು ಹೊರಗಿಡಲಾಗಿದೆ.

**ರೂ 500 ಕೋಟಿ ನಷ್ಟದ ಆತಂಕ:** ನಿರಂತರವಾಗಿ ಹಲವು ದಿನಗಳ ಕಾಲ ಮದ್ಯ ಮಾರಾಟ ನಿಷೇಧಿಸುವುದರಿಂದ ಬಾರ್, ಹೋಟೆಲ್ ಮತ್ತು ರೆಸ್ಟೋರೆಂಟ್ ಉದ್ಯಮದ ವಹಿವಾಟಿಗೆ ಹೊಡೆತ ಬೀಳಲಿದೆ. ಇದರಿಂದ ಉದ್ಯಮ ಹಾಗೂ ಅಬಕಾರಿ ಇಲಾಖೆಗೆ ಒಟ್ಟಾರೆ ಸುಮಾರು ರೂ 500 ಕೋಟಿ ನಷ್ಟವಾಗುವ ಸಾಧ್ಯತೆಯಿದೆ ಎಂದು ಉದ್ಯಮದ ಪ್ರತಿನಿಧಿಗಳು ಆತಂಕ ವ್ಯಕ್ತಪಡಿಸಿದ್ದಾರೆ.

**ಆದೇಶ ಸಡಿಲಿಸಲು ಆಗ್ರಹ:** ಸೀಮಿತ ಮತದಾರರನ್ನು ಹೊಂದಿರುವ ಶಿಕ್ಷಕರ ಹಾಗೂ ಪದವೀಧರರ ಕ್ಷೇತ್ರಗಳ ಚುನಾವಣೆಗೆ ಇಷ್ಟು ವ್ಯಾಪಕ ಅವಧಿಯ ಮದ್ಯ ಮಾರಾಟ ನಿಷೇಧ ಅಗತ್ಯವಿಲ್ಲ ಎಂಬುದು ಉದ್ಯಮಿಗಳ ವಾದ. ಆದ್ದರಿಂದ ಆದೇಶವನ್ನು ಹಿಂಪಡೆಯಬೇಕು ಅಥವಾ ಅದರ ವ್ಯಾಪ್ತಿಯನ್ನು ಸಡಿಲಗೊಳಿಸಬೇಕು ಎಂದು ಅವರು ಆಗ್ರಹಿಸಿದ್ದಾರೆ.

ಈ ಸಂಬಂಧ ಅಬಕಾರಿ ಸಚಿವರು, ಡಿಜಿ ಮತ್ತು ಐಜಿಪಿ ಹಾಗೂ ಬೆಂಗಳೂರು ನಗರ ಪೊಲೀಸ್ ಆಯುಕ್ತರಿಗೆ ಪತ್ರದ ಮೂಲಕ ಮನವಿ ಸಲ್ಲಿಸಲಾಗಿದೆ. ಜಿಲ್ಲಾಧಿಕಾರಿಗಳ ಆದೇಶವನ್ನು ಮರುಪರಿಶೀಲಿಸಿ ಉದ್ಯಮಕ್ಕೆ ಆಗುವ ನಷ್ಟವನ್ನು ತಗ್ಗಿಸಲು ಕ್ರಮ ಕೈಗೊಳ್ಳಬೇಕು ಎಂದು ಬಾರ್, ಹೋಟೆಲ್ ಮತ್ತು ರೆಸ್ಟೋರೆಂಟ್ ವಲಯ ಒತ್ತಾಯಿಸಿದೆ.

## ಮತಾಧಿಕಾರ ರಕ್ಷಣೆಗೆ ಇಂಡಿಯಾ ಮೈತ್ರಿಕೂಟದ ಹೋರಾಟ

● ವಿಕ್ರಮ ವಾಹಿನಿ । ಬೆಂಗಳೂರು

ಮತದಾರರ ಹಕ್ಕು ಮತ್ತು ಪ್ರಜಾಪ್ರಭುತ್ವದ ರಕ್ಷಣೆಗಾಗಿ 'ಮತ ಉಳಿಸಿ–ದೇಶ ಉಳಿಸಿ' ಘೋಷಣೆಯಡಿ ರಾಜ್ಯಾದ್ಯಂತ ಸಂಘಟಿತ ಹೋರಾಟ ನಡೆಸಲು ಇಂಡಿಯಾ ಮೈತ್ರಿಕೂಟದ ಮಿತ್ರಪಕ್ಷಗಳು ನಿರ್ಧರಿಸಿವೆ.

ನಗರದ ಶಾಸಕರ ಭವನದಲ್ಲಿ ಶುಕ್ರವಾರ ನಡೆದ ಸಭೆಯಲ್ಲಿ ಮಾತನಾಡಿದ ಬಿ.ಕೆ. ಹರಿಪ್ರಸಾದ್, ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯನ್ನು ರದ್ದುಗೊಳಿಸಬೇಕು ಹಾಗೂ ಪಟ್ಟಿಯಿಂದ ಕೈಬಿಡಲಾದ ಅರ್ಹ ಮತದಾರರ ಹೆಸರುಗಳನ್ನು ಮರುಸೇರ್ಪಡೆ ಮಾಡಬೇಕು ಎಂದು ಆಗ್ರಹಿಸಿದರು. ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ರಾಜೀನಾಮೆ ನೀಡಬೇಕೆಂಬುದು ಮೈತ್ರಿಕೂಟದ ನಿಲುವು ಎಂದು ತಿಳಿಸಿದರು.



ಹೋರಾಟವನ್ನು ಸಂಘಟಿಸಲು ಕಾಂಗ್ರೆಸ್, ಸಿಪಿಐ, ಸಿಪಿಐ(ಎಂ), ಸಿಪಿಐ(ಎಂಎಲ್) ಲಿಬರೇಶನ್, ಸಮಾಜವಾದಿ ಪಕ್ಷ ಹಾಗೂ ಫಾರ್ವರ್ಡ್ ಬ್ಲಾಕ್ ಪ್ರತಿನಿಧಿಗಳನ್ನೊಳಗೊಂಡ ಸಮನ್ವಯ ಸಮಿತಿ ರಚಿಸಲು ಸಭೆ ತೀರ್ಮಾನಿಸಿತು. ನವೆಂಬರ್ 1ರಂದು ದೆಹಲಿಯ ರಾಮಲೀಲಾ ಮೈದಾನದಲ್ಲಿ ನಡೆಯುವ ಪ್ರತಿಭಟನೆಯಲ್ಲಿ ಮಿತ್ರಪಕ್ಷಗಳ ಪ್ರತಿನಿಧಿಗಳು ಭಾಗವಹಿಸಲಿದ್ದು, ನವೆಂಬರ್ 5ರಂದು ಬೆಂಗಳೂರಿನಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಗುವುದು. ಬಳಿಕ ಜಿಲ್ಲಾ ಮತ್ತು ತಾಲೂಕು ಮಟ್ಟದಲ್ಲಿಯೂ ಹೋರಾಟ ವಿಸ್ತರಿಸಲು ನಿರ್ಧರಿಸಲಾಗಿದೆ. ಸಭೆಯಲ್ಲಿ ವಿವಿಧ ಮಿತ್ರಪಕ್ಷಗಳ ಮುಖಂಡರು ಭಾಗವಹಿಸಿ, ಮತದಾರರ ಹಕ್ಕುಗಳ ರಕ್ಷಣೆಗಾಗಿ ಜನಾಂದೋಲನ ರೂಪಿಸುವ ಕುರಿತು ಚರ್ಚಿಸಿದರು.

ಮತದಾರರ ಪಟ್ಟಿಯಲ್ಲಿನ ಲೋಪದೋಷಗಳು ಹಾಗೂ ಅರ್ಹ ಮತದಾರರ ಹೆಸರು ಕೈಬಿಡುವಿಕೆ ಕುರಿತು ಜನರಲ್ಲಿ ಜಾಗೃತಿ ಮೂಡಿಸಲು ಸಭೆಯಲ್ಲಿ ಒತ್ತು ನೀಡಲಾಯಿತು. ರೈತರು, ಕಾರ್ಮಿಕರು, ಮಹಿಳೆಯರು, ವಿದ್ಯಾರ್ಥಿಗಳು ಮತ್ತು ಯುವಜನರು ಸೇರಿದಂತೆ ವಿವಿಧ ವರ್ಗದ ಜನರನ್ನು ಹೋರಾಟದಲ್ಲಿ ತೊಡಗಿಸಿಕೊಳ್ಳುವ ಮೂಲಕ ಇದನ್ನು ಜನಾಂದೋಲನವನ್ನಾಗಿ ರೂಪಿಸಲು ಮುಖಂಡರು ಅಭಿಪ್ರಾಯಪಟ್ಟರು.

ಪ್ರತಿಭಟನೆ ನಡೆಸುವುದು ಪ್ರಜಾಸತ್ತಾತ್ಮಕ ಹಕ್ಕಾಗಿದ್ದು, ಮತದಾನದ ಹಕ್ಕಿನ ರಕ್ಷಣೆಗಾಗಿ ರಾಜಕೀಯ ಭಿನ್ನಾಭಿಪ್ರಾಯಗಳನ್ನು ಬದಿಗಿಟ್ಟು ಎಲ್ಲ ಪ್ರಜಾಸತ್ತಾತ್ಮಕ ಶಕ್ತಿಗಳು ಒಗ್ಗೂಡಬೇಕು ಎಂದು ಹರಿಪ್ರಸಾದ್ ಕರೆ ನೀಡಿದರು. ಮುಂದಿನ ಹೋರಾಟದ ರೂಪುರೇಷೆಗಳನ್ನು ಸಮನ್ವಯ ಸಮಿತಿ ಸಿದ್ಧಪಡಿಸಲಿದೆ ಎಂದು ತಿಳಿಸಿದರು.

# ಬೆಂಗಳೂರಿನ ರಸ್ತೆಗಳಿಗೆ ಎಐ ಕಣ್ಗಾವಲು

● ವಿಕ್ರಮ ವಾಹಿನಿ । ಬೆಂಗಳೂರು

ಸಿಲಿಕಾನ್ ಸಿಟಿಯ ರಸ್ತೆಗಳಲ್ಲಿ ಕಸ, ರಸ್ತೆಗುಂಡಿ, ಫುಟ್‌ಪಾತ್ ಒತ್ತುವರಿ ಸೇರಿದಂತೆ ನಾಗರಿಕ ಸಮಸ್ಯೆಗಳನ್ನು ಪತ್ತೆಹಚ್ಚಲು ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ಕೃತಕ ಬುದ್ಧಿಮತ್ತೆ (ಎಐ) ತಂತ್ರಜ್ಞಾನದ ಮೊರೆ ಹೋಗಿದೆ. ಎಐ ಕ್ಯಾಮೆರಾ ಅಳವಡಿಸಿದ ವಾಹನಗಳ ಮೂಲಕ ನಗರದ ರಸ್ತೆಗಳನ್ನು ಸಮೀಕ್ಷೆ ನಡೆಸಲಾಗುತ್ತಿದ್ದು, ಗುರುತಿಸಲಾದ ಸಮಸ್ಯೆಗಳನ್ನು ತ್ವರಿತವಾಗಿ ಪರಿಹರಿಸಲು ಜಿಬಿಎ ಆಯುಕ್ತ ಎಂ. ಮಹೇಶ್ವರ ರಾವ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

**150 ಕಿ.ಮೀ. ರಸ್ತೆ ಸಮೀಕ್ಷೆ:** ಜಿಬಿಎ ವ್ಯಾಪ್ತಿಯ 311 ಕಿ.ಮೀ. ಆರ್ಟೀರಿಯಲ್ ಮತ್ತು ಸಬ್‌ಆರ್ಟೀರಿಯಲ್ ರಸ್ತೆಗಳಲ್ಲಿ ಪ್ರಾಯೋಗಿಕವಾಗಿ 150 ಕಿ.ಮೀ. ರಸ್ತೆಗಳ ಸಮೀಕ್ಷೆ ನಡೆಸಲಾಗಿದೆ. ಚಿತ್ರಗುಪ್ತ ಅರ್ಬನ್ ಟೆಕ್ನಾಲಜೀಸ್ ಸಹಯೋಗದಲ್ಲಿ ನಡೆದ ಈ ಕಾರ್ಯಾಚರಣೆಯಲ್ಲಿ ಎಐ ಕ್ಯಾಮೆರಾ ವಾಹನಗಳು ರಸ್ತೆಗುಂಡಿ, ಕಸದ ಕಪ್ಪು ತಾಣಗಳು, ಫುಟ್‌ಪಾತ್ ಒತ್ತುವರಿ, ಕಟ್ಟಡ ತ್ಯಾಜ್ಯ, ಅನಧಿಕೃತ ಆಪ್ಟಿಕಲ್ ಫೈಬರ್ ಕೇಬಲ್ ಹಾಗೂ ಬೀದಿದೀಪಗಳ ಸಮಸ್ಯೆಗಳನ್ನು ಗುರುತಿಸಿವೆ.

**2,000 ಟಿಕೆಟ್ ಸೃಷ್ಟಿ:** ಸಮೀಕ್ಷೆಯಲ್ಲಿ ಒಟ್ಟು 2,000 ಸಮಸ್ಯೆಗಳಿಗೆ ಸಂಬಂಧಿಸಿದ ಟಿಕೆಟ್‌ಗಳನ್ನು ಸೃಷ್ಟಿಸಲಾಗಿದೆ. ಈ ಪೈಕಿ ಸುಮಾರು 1,000 ಟಿಕೆಟ್‌ಗಳು ಕಸ ಮತ್ತು ಕಸದ ಕಪ್ಪು ತಾಣಗಳಿಗೆ ಸಂಬಂಧಿಸಿವೆ.

ಇವುಗಳನ್ನು 10 ದಿನಗಳೊಳಗೆ ಪರಿಹರಿಸಿ, ಟಿಕೆಟ್‌ಗಳನ್ನು ಮುಕ್ತಾಯಗೊಳಿಸುವಂತೆ ಮಾರ್ಷಲ್‌ಗಳಿಗೆ ಆಯುಕ್ತರು ಗಡುವು ನೀಡಿದ್ದಾರೆ.

**'ಅನ್ವೇಷಕ' ಆ್ಯಪ್ ಮೂಲಕ ನಿಗಾ:** ಸಮಸ್ಯೆಗಳ ಪರಿಹಾರ ಕಾರ್ಯದ ಮೇಲ್ವಿಚಾರಣೆಗೆ ಜಿಬಿಎ 'ಅನ್ವೇಷಕ' ಹೆಸರಿನ ಮೊಬೈಲ್ ಆ್ಯಪ್ ಅಭಿವೃದ್ಧಿಪಡಿಸಿದೆ. ಮಾರ್ಷಲ್‌ಗಳು ಹಾಗೂ ಕಿರಿಯ ಆರೋಗ್ಯ ಪರಿವೀಕ್ಷಕರು ತಮ್ಮ ವ್ಯಾಪ್ತಿಯ ಸಮಸ್ಯೆಗಳ ವಿವರವನ್ನು ಆ್ಯಪ್‌ನ ಡ್ಯಾಶ್‌ಬೋರ್ಡ್‌ನಲ್ಲಿ ಪಡೆಯಬಹುದು. ಸ್ಥಳಕ್ಕೆ ತೆರಳಿ ಸಮಸ್ಯೆ ಬಗೆಹರಿಸಿದ ಬಳಿಕ, 50 ಮೀಟರ್ ವ್ಯಾಪ್ತಿಯೊಳಗೆ ತೆಗೆದ ಜಿಯೋ–ಟ್ಯಾಗ್ ಫೋಟೊವನ್ನು ಅಪ್‌ಲೋಡ್ ಮಾಡಬೇಕು. ಇದಾದ ಬಳಿಕವೇ ಸಂಬಂಧಿತ ಟಿಕೆಟ್ ಮುಕ್ತಾಯಗೊಳ್ಳಲಿದೆ.

ಈ ಸಂಬಂಧ ಗುರುವಾರ ಮಾರ್ಷಲ್‌ಗಳಿಗೆ ವಿಶೇಷ ಕಾರ್ಯಾಗಾರವನ್ನೂ ನಡೆಸಲಾಗಿದೆ. ಸಾರ್ವಜನಿಕರಿಂದ ದೂರು ಬರುವುದಕ್ಕೂ ಮುನ್ನವೇ ಸಮಸ್ಯೆಗಳನ್ನು ಗುರುತಿಸಿ ಪರಿಹರಿಸುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ. ಎಐ ತಂತ್ರಜ್ಞಾನದಿಂದ ಸ್ವಚ್ಛತಾ ಕಾರ್ಯಗಳಿಗೆ ಡಿಜಿಟಲ್ ದಾಖಲೆ ಲಭ್ಯವಾಗಲಿದ್ದು, ಕಾರ್ಯನಿರ್ವಹಣೆಯಲ್ಲಿ ಪಾರದರ್ಶಕತೆ ಹೆಚ್ಚಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ನಗರದ ಸ್ವಚ್ಛತೆ ಮತ್ತು ರಸ್ತೆ ನಿರ್ವಹಣೆಗೆ ತಂತ್ರಜ್ಞಾನವನ್ನು ಬಳಸಿಕೊಳ್ಳುತ್ತಿರುವ ಜಿಬಿಎ, ನಿಗದಿತ ಅವಧಿಯಲ್ಲಿ ಸಮಸ್ಯೆಗಳನ್ನು ಪರಿಹರಿಸುವ ಮೂಲಕ ಸಾರ್ವಜನಿಕರಿಗೆ ಉತ್ತಮ ನಾಗರಿಕ ಸೌಲಭ್ಯ ಒದಗಿಸುವ ಗುರಿ ಹೊಂದಿದೆ.

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481

ವಿಕ್ರಮ ವಾಹಿನಿ





ಸಿಎಂ ಡಿ ಕೆ ಶಿವಕುಮಾರ್ ಪತ್ನಿ ಉಷಾ ಸಮೇತರಾಗಿ ಕೆ.ಆರ್. ಎಸ್ ಆಣೆಕಟ್ಟಿನ ಬೃಂದಾವನ ಉದ್ಯಾನದಲ್ಲಿ ಕಾವೇರಿ ಮಾತೆಗೆ ಪೂಜೆ ಸಲ್ಲಿಸುವ ಮೂಲಕ ಕಾವೇರಿ ಆರತಿ ಕಾರ್ಯಕ್ರಮಕ್ಕೆ ಶುಕ್ರವಾರ ಸಂಜೆ ಚಾಲನೆ ನೀಡಿದರು. ಮೈಸೂರಿನ ಸುತ್ತೂರು ಮಠದ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಡಾ. ನಿಶ್ಚಲಾನಂದನಾಥ ಸ್ವಾಮೀಜಿ, ಶ್ರೀ ಕಾಗಿನೆಲೆ ಮಹಾಸಂಸ್ಥಾನ ಮೈಸೂರು ವಿಭಾಗದ ಕನಕ ಗುರುಪೀಠದ ಶ್ರೀ ಶಿವಾನಂದಪುರಿ ಸ್ವಾಮೀಜಿ, ಕಲಬುರ್ಗಿಯ ಉರಿಲಿಂಗ ಪೆದ್ದೀಶ್ವರ ಮಠದ ಶ್ರೀ ಜ್ಞಾನಪ್ರಕಾಶ ಸ್ವಾಮೀಜಿ ದಿವ್ಯ ಸಾನ್ನಿಧ್ಯ ವಹಿಸಿದ್ದರು. ಸಚಿವರಾದ ಚಲುವರಾಯಸ್ವಾಮಿ, ಶಿವಲಿಂಗೇಗೌಡ, ನರೇಂದ್ರಸ್ವಾಮಿ, ಸಂಸದ ಹಾಗೂ ಸಿಎಂ ಮುಖ್ಯ ಸಲಹೆಗಾರ ಜಿ ಸಿ ಚಂದ್ರಶೇಖರ್, ಶಾಸಕರಾದ ಚೆಸ್ಕಾಂ ಅಧ್ಯಕ್ಷ ರಮೇಶ್ ಬಂಡಿಸಿದ್ದೇಗೌಡ, ಕದಲೂರು ಉದಯ್, ದರ್ಶನ್ ಪುಟ್ಟಣ್ಣಯ್ಯ, ಎಂಎಲ್ ಸಿ ದಿನೇಶ್ ಗೂಳಿಗೌಡ, ಮಳವಳ್ಳಿ ಶಿವಣ್ಣ ಮತ್ತಿತರರು ಉಪಸ್ಥಿತರಿದ್ದರು.

# ರಸ್ತೆ ಬದಿ ಕಸ ಹೆಕ್ಕುತ್ತಾ ಸ್ವಚ್ಛತಾ ಜಾಗೃತಿ ಮೂಡಿಸುತ್ತಿರುವ ನಾಗರಾಜ್ ಬಜಾಲ್

● ವಿಕ್ರಮ ವಾಹಿನಿ | ಮಂಗಳೂರು

'ನಮ್ಮ ಕಸ, ನಮ್ಮ ಜವಾಬ್ದಾರಿ' ಎಂಬ ಸಂದೇಶ ಸಾರಲು ಪರಿಸರ ಪ್ರೇಮಿ ನಾಗರಾಜ್ ಬಜಾಲ್ ಅವರು ಕೈಗೊಂಡಿರುವ ಸ್ವಚ್ಛ ದಂಡಯಾತ್ರೆಗೆ ಸಾರ್ವಜನಿಕರು, ವಿದ್ಯಾರ್ಥಿಗಳು ಹಾಗೂ ವಿವಿಧ ಸೇವಾ ಸಂಸ್ಥೆಗಳಿಂದ ಬೆಂಬಲ ವ್ಯಕ್ತವಾಗಿದೆ.

ಹಸಿರು ದಳ ಸಂಸ್ಥೆಯ ಯೋಜನಾ ವ್ಯವಸ್ಥಾಪಕರಾಗಿರುವ ನಾಗರಾಜ್ ಅವರು ಅಕ್ಟೋಬರ್ 9ರಂದು ಕೊಡಗು ಗಡಿ ಭಾಗದ ಸಂಪಾಜೆಯಿಂದ ಆರಂಭಿಸಿದ ಪಾದಯಾತ್ರೆ ಇದೀಗ ಬಂಟ್ವಾಳ ತಾಲೂಕಿನ ಬಿ.ಸಿ.ರೋಡ್ ತಲುಪಿದೆ.

ಚಿಅರಂತೋಡು, ಸುಳ್ಯ, ಪುತ್ತೂರು, ಮಾಣಿ ಹಾಗೂ ಕಲ್ಲಡ್ಕ ಮಾರ್ಗವಾಗಿ ಸಾಗುವಾಗ ಸುಮಾರು 15ರಿಂದ 20 ಟನ್ ತ್ಯಾಜ್ಯ ಸಂಗ್ರಹಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಹೆದ್ದಾರಿ ಬದಿಗಳಲ್ಲಿ ತಿಂಡಿ ಪೊಟ್ಟಣ, ಬಾಟಲಿಗಳು, ಮನೆಗಳ ಹಸಿ–ಒಣ ಕಸ, ಬಳಸಿದ ಡೈಪರ್‌ಗಳು ಹಾಗೂ ಅಪಾಯಕಾರಿ ವೈದ್ಯಕೀಯ ತ್ಯಾಜ್ಯವನ್ನು ಎಸೆಯುತ್ತಿರುವುದು ಆತಂಕಕಾರಿ ಸಂಗತಿಯಾಗಿದೆ. ಇಂತಹ ತ್ಯಾಜ್ಯದಿಂದ ಪೌರಕಾರ್ಮಿಕರ ಆರೋಗ್ಯಕ್ಕೂ ಅಪಾಯ ಎದುರಾಗುತ್ತಿದೆ.

ಕಸವನ್ನು ವಿಂಗಡಿಸಿ ಸೂಕ್ತವಾಗಿ ವಿಲೇವಾರಿ ಮಾಡುವ ಕುರಿತು ಜನರಲ್ಲಿ ಅರಿವು ಮೂಡಿಸುವುದು ಯಾತ್ರೆಯ ಉದ್ದೇಶವಾಗಿದೆ.

ಕಳೆದ ವರ್ಷ ಕಾರವಾರದಿಂದ ಮಂಗಳೂರಿನವರೆಗೆ ಸುಮಾರು 300 ಕಿ.ಮೀ. ಪಾದಯಾತ್ರೆ ನಡೆಸಿದ್ದ ನಾಗರಾಜ್, ಈ ಬಾರಿಯೂ ಸ್ವಚ್ಛತಾ ಅಭಿಯಾನ ಮುಂದುವರಿಸಿದ್ದಾರೆ. ಬಿ.ಸಿ.ರೋಡ್‌ನಲ್ಲಿ ಸಹ್ಯಾದ್ರಿ ಕಾಲೇಜಿನ 150ಕ್ಕೂ ಹೆಚ್ಚು ವಿದ್ಯಾರ್ಥಿಗಳು ಸೇರಿದಂತೆ ಸಾರ್ವಜನಿಕರು ಸ್ವಚ್ಛತಾ ಕಾರ್ಯದಲ್ಲಿ ಕೈಜೋಡಿಸಿದ್ದು, ಪರಿಸರಸ್ನೇಹಿ ಬಟ್ಟೆ ಚೀಲಗಳನ್ನು ವಿತರಿಸಿ ಜಾಗೃತಿ ಮೂಡಿಸಲಾಯಿತು.

# ಜಾರ್ಜ್ ಜತೆ ಶಾರದೆಯ ದರ್ಶನ ಪಡೆದ ರಾಜ್ಯಪಾಲರಾದ ಡಾ. ಸುಧಾ ಯಾದವ್

● ವಿಕ್ರಮ ವಾಹಿನಿ | ಬೆಂಗಳೂರು

ನೂತನ ರಾಜ್ಯಪಾಲರಾಗಿ ಅಧಿಕಾರ ಸ್ವೀಕರಿಸಿದ ಬಳಿಕ ಡಾ. ಸುಧಾ ಯಾದವ್ ಅವರು ಇಂಧನ ಮತ್ತು ಪ್ರವಾಸೋದ್ಯಮ ಸಚಿವ ಕೆ.ಜೆ. ಜಾರ್ಜ್ ಅವರೊಂದಿಗೆ ನಗರದ ಎಚ್‌ಆರ್‌ಬಿಆರ್ ಬಡಾವಣೆಯಲ್ಲಿರುವ ಶ್ರೀ ಸುರಭಾರತಿ ಸಂಸ್ಕೃತ ಮತ್ತು ಸಾಂಸ್ಕೃತಿಕ ಪ್ರತಿಷ್ಠಾನದ ಶ್ರೀ ಶಾರದಾ ದೇವಾಲಯಕ್ಕೆ ಭೇಟಿ ನೀಡಿ ದೇವಿಯ ದರ್ಶನ ಪಡೆದರು.

ಸರ್ವಜ್ಞನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಶ್ರೀ ಸುರಭಾರತಿ ಕ್ಷೇತ್ರಕ್ಕೆ ಆಗಮಿಸಿದ ರಾಜ್ಯಪಾಲರನ್ನು ಸಚಿವ ಕೆ.ಜೆ. ಜಾರ್ಜ್ ಆತ್ಮೀಯವಾಗಿ ಬರಮಾಡಿಕೊಂಡರು. ಬಳಿಕ ದೇವಾಲಯದಲ್ಲಿ ನಡೆದ ಪೂಜಾ ವಿಧಿವಿಧಾನಗಳು ಪೂರ್ಣಗೊಳ್ಳುವವರೆಗೂ ಸಚಿವರು ರಾಜ್ಯಪಾಲರೊಂದಿಗೆ ಉಪಸ್ಥಿತರಿದ್ದರು.

ಶರನ್ನವರಾತ್ರಿ ಮಹೋತ್ಸವದ ಆರನೇ ದಿನದ ಅಂಗವಾಗಿ ಶ್ರೀ ಶಾರದಾಂಬೆಯನ್ನು ವಿಶೇಷವಾಗಿ



ಅಲಂಕರಿಸಲಾಗಿತ್ತು. ವೀಣಾಪಾಣಿಯಾದ ಶಾರದಾದೇವಿಯ ಸನ್ನಿಧಿಯಲ್ಲಿ ವೇದಮಂತ್ರಗಳ ಘೋಷದೊಂದಿಗೆ ಲಕ್ಷ ಕುಂಕುಮಾರ್ಚನೆ ನೆರವೇರಿಸಲಾಯಿತು. ರಾಜ್ಯಪಾಲೆ ಸುಧಾ ಯಾದವ್ ಮತ್ತು ಸಚಿವ ಕೆ.ಜೆ. ಜಾರ್ಜ್ ಧಾರ್ಮಿಕ ಕಾರ್ಯಕ್ರಮದಲ್ಲಿ ಪಾಲ್ಗೊಂಡು ದೇವಿಯ ದರ್ಶನ ಪಡೆದರು.

ರಾಜ್ಯಪಾಲರಾಗಿ ಪ್ರಮಾಣವಚನ ಸ್ವೀಕರಿಸಿ ಲೋಕಭವನದಲ್ಲಿ ಅಧಿಕಾರ ವಹಿಸಿಕೊಂಡ ಬಳಿಕ ವಿವಿಧ ಗಣ್ಯರಿಂದ ಶುಭಾಶಯಗಳನ್ನು ಸ್ವೀಕರಿಸಿದ ಡಾ. ಸುಧಾ ಯಾದವ್, ಶಾರದಾಂಬೆಯ ದರ್ಶನ ಪಡೆದು ಆಶೀರ್ವಾದ ಪಡೆದರು. ದೇವಾಲಯದ ಭೇಟಿಯ ಬಳಿಕ ಪ್ರತಿಷ್ಠಾನದಲ್ಲಿ ಏರ್ಪಡಿಸಲಾಗಿದ್ದ ವಿಶೇಷ ಗೊಂಬೆಗಳ ಪ್ರದರ್ಶನವನ್ನು ವೀಕ್ಷಿಸಿದರು.

ಈ ಸಂದರ್ಭದಲ್ಲಿ ರಾಜ್ಯಪಾಲರ ಕುಟುಂಬದ ಸದಸ್ಯರು, ಶ್ರೀ ಸುರಭಾರತಿ ಸಂಸ್ಕೃತ ಮತ್ತು ಸಾಂಸ್ಕೃತಿಕ ಪ್ರತಿಷ್ಠಾನದ ಟ್ರಸ್ಟಿ ನಾಗರಾಜ್, ನಿವೃತ್ತ ಐಪಿಎಸ್ ಅಧಿಕಾರಿ ರಾಮಮೂರ್ತಿ ಸೇರಿದಂತೆ ಇತರ ಗಣ್ಯರು ಉಪಸ್ಥಿತರಿದ್ದರು.

# 2027ರಲ್ಲಿ ಜಪಾನ್ ಹಿಂದಿಕ್ಕಿ ಭಾರತ 4ನೇ ಅತಿದೊಡ್ಡ ಆರ್ಥಿಕತೆ!

● ವಿಕ್ರಮ ವಾಹಿನಿ | ನವದೆಹಲಿ

ಭಾರತದ ಆರ್ಥಿಕತೆ 2027ರಲ್ಲಿ ಜಪಾನ್ ಅನ್ನು ಹಿಂದಿಕ್ಕಿ ವಿಶ್ವದ ನಾಲ್ಕನೇ ಅತಿದೊಡ್ಡ ಆರ್ಥಿಕತೆಯಾಗಿ ಹೊರಹೊಮ್ಮುವ ನಿರೀಕ್ಷೆಯಿದೆ ಎಂದು ಅಂತಾರಾಷ್ಟ್ರೀಯ ಹಣಕಾಸು ನಿಧಿ (ಐಎಂಎಫ್) ಅಂದಾಜಿಸಿದೆ. ಐಎಂಎಫ್‌ನ ವಿಶ್ವ ಆರ್ಥಿಕ ಮುನ್ನೋಟ ವರದಿಯ ಪ್ರಕಾರ, ಭಾರತದ ಜಿಡಿಪಿ 2027ರಲ್ಲಿ 4.52 ಟ್ರಿಲಿಯನ್ ಡಾಲರ್‌ಗೆ ತಲುಪಬಹುದು.

ಅಮೆರಿಕ, ಚೀನಾ ಮತ್ತು ಜರ್ಮನಿ ಬಳಿಕ ಭಾರತ ನಾಲ್ಕನೇ ಸ್ಥಾನಕ್ಕೇರಿದರೆ, ಜಪಾನ್ ಆರನೇ ಸ್ಥಾನಕ್ಕೆ ಕುಸಿಯುವ ಸಾಧ್ಯತೆಯಿದೆ. 2026ರಲ್ಲಿ ಭಾರತದ ಆರ್ಥಿಕತೆ ಶೇ. 7ರಷ್ಟು ಬೆಳವಣಿಗೆ ದಾಖಲಿಸಬಹುದು ಎಂದು ಐಎಂಎಫ್ ಅಂದಾಜಿಸಿದ್ದು, ಇದೇ ಅವಧಿಯಲ್ಲಿ ಜಪಾನ್‌ನ ಬೆಳವಣಿಗೆ ಶೇ. 0.7ರಷ್ಟಿರಬಹುದು ಎಂದು ತಿಳಿಸಿದೆ.

ಭಾರತದ ಆರ್ಥಿಕ ಬೆಳವಣಿಗೆಯ ವೇಗ ಮುಂದುವರಿದರೆ ಭವಿಷ್ಯದಲ್ಲಿ ಜರ್ಮನಿಯನ್ನು ಹಿಂದಿಕ್ಕಿ ಮೂರನೇ ಸ್ಥಾನಕ್ಕೇರುವ ಸಾಧ್ಯತೆಯೂ ಇದೆ. ಆದರೆ, ಈ ಶ್ರೇಯಾಂಕಗಳು ಆರ್ಥಿಕ ಬೆಳವಣಿಗೆ ಮತ್ತು ಜಾಗತಿಕ ಪರಿಸ್ಥಿತಿಗಳನ್ನು ಆಧರಿಸಿದ ಮುನ್ಸೂಚನೆಗಳಾಗಿವೆ.

ಭಾರತದ ಆರ್ಥಿಕತೆಯ ಬೆಳವಣಿಗೆಗೆ ದೇಶೀಯ ಬಳಕೆ, ಸೇವಾ ವಲಯದ ವಿಸ್ತರಣೆ, ಮೂಲಸೌಕರ್ಯ ಹೂಡಿಕೆ ಮತ್ತು ಉತ್ಪಾದನಾ ಚಟುವಟಿಕೆಗಳ ಹೆಚ್ಚಳ ಪ್ರಮುಖ ಕಾರಣಗಳಾಗಿವೆ. ಬಲವಾದ ಆಂತರಿಕ ಬೇಡಿಕೆ ಹಾಗೂ ಹೂಡಿಕೆಗಳು ಮುಂದುವರಿದರೆ ಆರ್ಥಿಕ ಬೆಳವಣಿಗೆಗೆ ಮತ್ತಷ್ಟು ಉತ್ತೇಜನ ಸಿಗಬಹುದು. ಆದಾಗ್ಯೂ, ಜಾಗತಿಕ ಆರ್ಥಿಕ ಅನಿಶ್ಚಿತತೆ, ಇಂಧನ ಬೆಲೆಗಳ ಏರಿಳಿತ ಮತ್ತು ವ್ಯಾಪಾರ ಸಂಬಂಧಿತ ಸವಾಲುಗಳು ಬೆಳವಣಿಗೆಯ ಮೇಲೆ ಪರಿಣಾಮ ಬೀರಬಹುದು.

ಜಿಡಿಪಿ ಆಧಾರಿತ ಆರ್ಥಿಕ ಶ್ರೇಯಾಂಕವು ದೇಶದ ಒಟ್ಟು ಆರ್ಥಿಕ ಉತ್ಪಾದನೆಯ ಗಾತ್ರವನ್ನು ಸೂಚಿಸುತ್ತದೆ. ಆದರೆ, ಇದೊಂದೇ ಜನರ ಜೀವನಮಟ್ಟವನ್ನು ನಿರ್ಧರಿಸುವುದಿಲ್ಲ. ತಲಾ ಆದಾಯ, ಉದ್ಯೋಗ ಸೃಷ್ಟಿ, ಬೆಲೆ ಏರಿಕೆ ನಿಯಂತ್ರಣ ಮತ್ತು ಆದಾಯದ ಸಮಾನ ಹಂಚಿಕೆಯೂ ಮುಖ್ಯವಾಗಿವೆ. ಹೀಗಾಗಿ, ಜಾಗತಿಕ ಆರ್ಥಿಕ ಶ್ರೇಯಾಂಕದಲ್ಲಿ ಭಾರತದ ಸ್ಥಾನ ಏರಿಕೆಯ ಜೊತೆಗೆ, ಆರ್ಥಿಕ ಬೆಳವಣಿಗೆಯ ಲಾಭ ಸಾಮಾನ್ಯ ಜನರಿಗೂ ತಲುಪುವುದು ಮಹತ್ವದ್ದಾಗಿದೆ.

# ಉದ್ಯಾನ ಜಾಗ ಹಸ್ತಾಂತರಕ್ಕೆ ಹೈಕೋರ್ಟ್ ನೋಟಿಸ್

● ವಿಕ್ರಮ ವಾಹಿನಿ | ಬೆಂಗಳೂರು

ಮೈಸೂರಿನ ಸಾತಗಳ್ಳಿಯಲ್ಲಿ ಉದ್ಯಾನವನಕ್ಕಾಗಿ ಮೀಸಲಿಟ್ಟ ಜಾಗವನ್ನು ಕ್ರೀಡಾ ಇಲಾಖೆಗೆ ಹಸ್ತಾಂತರಿಸುವ ಸಚಿವ ಸಂಪುಟದ ನಿರ್ಧಾರ ಪ್ರಶ್ನಿಸಿ ಸಲ್ಲಿಸಲಾದ ಅರ್ಜಿಗೆ ಸಂಬಂಧಿಸಿದಂತೆ ಹೈಕೋರ್ಟ್ ರಾಜ್ಯ ಸರ್ಕಾರ, ಮುಡಾ, ಮೈಸೂರು ಮಹಾನಗರ ಪಾಲಿಕೆ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ನೋಟಿಸ್ ಜಾರಿ ಮಾಡಿದೆ.

ಸಾಮಾಜಿಕ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ಸಲ್ಲಿಸಿದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಅನು ಶಿವರಾಮನ್ ಮತ್ತು ನ್ಯಾಯಮೂರ್ತಿ ಭರತ್ ಕುಮಾರ್ ಅವರಿದ್ದ ವಿಭಾಗೀಯ ನ್ಯಾಯಪೀಠ, ಪ್ರತಿವಾದಿಗಳಿಗೆ ಆಕ್ಷೇಪಣೆ ಸಲ್ಲಿಸುವಂತೆ ಸೂಚಿಸಿ ವಿಚಾರಣೆಯನ್ನು ಮುಂದೂಡಿದೆ.

ಸಾತಗಳ್ಳಿ ಗ್ರಾಮದ ಸರ್ವೆ ನಂ. 85, 88, 106 ಮತ್ತು 107ರಲ್ಲಿನ ಜಾಗವನ್ನು ಕ್ರೀಡಾ ಸಂಕೀರ್ಣ ಹಾಗೂ ಸೈಕ್ಲಿಂಗ್ ವೆಲೋಡ್ರೋಮ್ ನಿರ್ಮಾಣಕ್ಕಾಗಿ ಕ್ರೀಡಾ ಇಲಾಖೆಗೆ ಉಚಿತವಾಗಿ ಹಸ್ತಾಂತರಿಸಲು ಮೇ 21ರಂದು ಸಚಿವ ಸಂಪುಟ ಅನುಮೋದನೆ ನೀಡಿದ್ದು, ಮೇ 27ರಂದು ಸರ್ಕಾರಿ ಆದೇಶ ಹೊರಡಿಸಲಾಗಿತ್ತು.

ಉದ್ಯಾನವನಕ್ಕೆ ಮೀಸಲಾದ ಜಾಗವನ್ನು ಮತ್ತೊಂದು ಇಲಾಖೆಗೆ ಹಸ್ತಾಂತರಿಸುವುದು ಕಾನೂನುಬಾಹಿರವಾಗಿದ್ದು, ಕಾನೂನು ಮತ್ತು ಹಣಕಾಸು ಇಲಾಖೆಗಳ ಆಕ್ಷೇಪಗಳನ್ನೂ ಕಡೆಗಣಿಸಲಾಗಿದೆ ಎಂದು ಅರ್ಜಿದಾರರು ಆರೋಪಿಸಿದ್ದಾರೆ. ಇದೇ ಜಾಗದಲ್ಲಿ ಕಂಬಳ ಆಯೋಜನೆಗೆ ಸಿದ್ಧತೆ ನಡೆಯುತ್ತಿದೆ ಎಂದು ವಕೀಲರು ನ್ಯಾಯಾಲಯಕ್ಕೆ ತಿಳಿಸಿದರು. ಆದರೆ, ಕಂಬಳ ಆಯೋಜನೆಯನ್ನು ಅರ್ಜಿಯಲ್ಲಿ ಪ್ರತ್ಯೇಕವಾಗಿ ಪ್ರಶ್ನಿಸಿಲ್ಲ ಎಂದು ನ್ಯಾಯಪೀಠ ಸ್ಪಷ್ಟಪಡಿಸಿತು.

ಸಚಿವ ಸಂಪುಟದ ನಿರ್ಧಾರ ಮತ್ತು ಸರ್ಕಾರಿ ಆದೇಶ ರದ್ದುಗೊಳಿಸಿ, ಪ್ರಕರಣದ ಅಂತಿಮ ವಿಚಾರಣೆವರೆಗೆ ವಿವಾದಿತ ಜಾಗದಲ್ಲಿ ಯಥಾಸ್ಥಿತಿ ಕಾಯ್ದುಕೊಳ್ಳಲು ನಿರ್ದೇಶನ ನೀಡುವಂತೆ ಅರ್ಜಿಯಲ್ಲಿ ಮನವಿ ಮಾಡಲಾಗಿದೆ.

# ಎಲ್ ನಿನೋ ಪ್ರಭಾವ: ಭಾರತಕ್ಕೆ ಬರದ ಆತಂಕ

● ವಿಕ್ರಮ ವಾಹಿನಿ | ಬೆಂಗಳೂರು

2026ರ ನೈಋತ್ಯ ಮುಂಗಾರು ಅವಧಿಯಲ್ಲಿ ದೇಶದಲ್ಲಿ ಶೇ.13ರಷ್ಟು ಮಳೆ ಕೊರತೆ ದಾಖಲಾಗಿದ್ದು, ಕೃಷಿ, ಜಲಸಂಪನ್ಮೂಲ ಮತ್ತು ಗ್ರಾಮೀಣ ಜೀವನೋಪಾಯದ ಮೇಲೆ ಒತ್ತಡ ಹೆಚ್ಚುವ ಆತಂಕ ಎದುರಾಗಿದೆ. ಇದೇ ವೇಳೆ, ಪೆಸಿಫಿಕ್ ಮಹಾಸಾಗರದಲ್ಲಿ ಎಲ್ ನಿನೋ ಪರಿಸ್ಥಿತಿ ಬಲಗೊಳ್ಳುತ್ತಿರುವ ಸೂಚನೆಗಳು ಕಂಡುಬಂದಿರುವುದರಿಂದ 2027ರ ಆರಂಭದವರೆಗಿನ ಹವಾಮಾನ ಸ್ಥಿತಿಯ ಬಗ್ಗೆ ಕಳವಳ ಹೆಚ್ಚಿದೆ. ಆದಾಗ್ಯೂ, ಎಲ್ ನಿನೋದಿಂದ ಬರ ಅಥವಾ ತೀವ್ರ ಬಿಸಿಗಾಳಿ ಖಚಿತ ಎಂದು ಹೇಳಲಾಗದು. ಮುಂದಿನ ಪರಿಸ್ಥಿತಿ ಈಶಾನ್ಯ ಮುಂಗಾರು ಮಳೆ, ಸ್ಥಳೀಯ ನೀರಿನ ಲಭ್ಯತೆ ಮತ್ತು ಪ್ರಾದೇಶಿಕ ಹವಾಮಾನ ಬದಲಾವಣೆಗಳನ್ನು ಅವಲಂಬಿಸಿರುತ್ತದೆ.

**ಮುಂಗಾರಿನಲ್ಲಿ ಶೇ.13ರಷ್ಟು ಮಳೆ ಕೊರತೆ:** ಭಾರತೀಯ ಹವಾಮಾನ ಇಲಾಖೆಯ ಅಂಕಿ–ಅಂಶಗಳ ಪ್ರಕಾರ, 2026ರ ಜೂನ್‌ನಿಂದ ಸೆಪ್ಟೆಂಬರ್‌ವರೆಗೆ ದೇಶದಲ್ಲಿ 759.4 ಮಿ.ಮೀ. ಮಳೆಯಾಗಿದೆ. ದೀರ್ಘಾವಧಿಯ ಸರಾಸರಿ 868.6 ಮಿ.ಮೀ.ಗೆ ಹೋಲಿಸಿದರೆ 109.2 ಮಿ.ಮೀ. ಕೊರತೆ ದಾಖಲಾಗಿದೆ. ದಕ್ಷಿಣ ಪರ್ಯಾಯ ದ್ವೀಪ ಭಾರತದಲ್ಲಿ ಸರಾಸರಿಯ ಶೇ.76ರಷ್ಟು, ಪೂರ್ವ ಮತ್ತು ಈಶಾನ್ಯ ಭಾರತದಲ್ಲಿ ಶೇ.74ರಷ್ಟು ಮಳೆಯಾಗಿದೆ. ವಾಯವ್ಯ ಭಾರತದಲ್ಲಿ ಶೇ.94 ಹಾಗೂ ಮಧ್ಯ ಭಾರತದಲ್ಲಿ ಶೇ.97ರಷ್ಟು ಮಳೆ ದಾಖಲಾಗಿದೆ.

ಆದರೆ, ದೇಶದ ಒಟ್ಟಾರೆ ಮಳೆ ಪ್ರಮಾಣವು ಪ್ರತಿ ರಾಜ್ಯ ಅಥವಾ ಜಿಲ್ಲೆಯ ಪರಿಸ್ಥಿತಿಯನ್ನು ಪ್ರತಿಬಿಂಬಿಸುವುದಿಲ್ಲ. ಕೆಲವು ಪ್ರದೇಶಗಳಲ್ಲಿ ತೀವ್ರ ಕೊರತೆ ಕಂಡುಬಂದರೆ, ಇನ್ನು ಕೆಲವು ಕಡೆ ಸಾಮಾನ್ಯ ಅಥವಾ ಅಧಿಕ ಮಳೆಯೂ ದಾಖಲಾಗಿರಬಹುದು.

**ಬಲಗೊಳ್ಳುತ್ತಿರುವ ಎಲ್ ನಿನೋ:** ಅಮೆರಿಕದ ರಾಷ್ಟ್ರೀಯ ಸಾಗರ ಮತ್ತು ವಾತಾವರಣ ಆಡಳಿತದ (ಓಔಂಂ) ಹವಾಮಾನ ಮುನ್ಸೂಚನಾ ಕೇಂದ್ರದ ವರದಿಯ ಪ್ರಕಾರ, ಸಮಭಾಜಕ ಪೆಸಿಫಿಕ್ ಮಹಾಸಾಗರದ ಪೂರ್ವ ಮತ್ತು ಮಧ್ಯ ಭಾಗಗಳಲ್ಲಿ ಸಮುದ್ರ ಮೇಲ್ಮೈ ತಾಪಮಾನವು ಸರಾಸರಿಗಿಂತ ಹೆಚ್ಚಾಗಿದೆ. ವಾತಾವರಣದ ಪರಿಚಲನೆಯಲ್ಲಿ ಕಂಡುಬಂದಿರುವ ಬದಲಾವಣೆಗಳೂ ಎಲ್ ನಿನೋ ಪರಿಸ್ಥಿತಿಗೆ ಹೊಂದಿಕೆಯಾಗಿವೆ.

ಲಭ್ಯವಿರುವ ಮುನ್ಸೂಚನೆಯ ಪ್ರಕಾರ, ಎಲ್ ನಿನೋ 2027ರ ಜನವರಿ□ಮಾರ್ಚ್ ಅವಧಿಯಲ್ಲಿ ಪ್ರಬಲ ಅಥವಾ ಅತ್ಯಂತ ಪ್ರಬಲ ಸ್ಥಿತಿಯನ್ನು ತಲುಪುವ ಸಾಧ್ಯತೆ ಇದೆ. ಆದರೆ ಎಲ್ ನಿನೋ ಒಂದೇ ಭಾರತದ ಮಳೆಯ ಪ್ರಮಾಣವನ್ನು ನಿರ್ಧರಿಸುವುದಿಲ್ಲ. ಹಿಂದೂ ಮಹಾಸಾಗರದ ಪರಿಸ್ಥಿತಿ, ವಾತಾವರಣದ ಚಲನೆ ಮತ್ತು ಪ್ರಾದೇಶಿಕ ಹವಾಮಾನ ಅಂಶಗಳೂ ಮಳೆಯ ಮೇಲೆ ಪ್ರಭಾವ ಬೀರುತ್ತವೆ.

**ಕೃಷಿ ಬರದ ಆತಂಕ:** ಭಾರತೀಯ ಕೃಷಿ ಸಂಶೋಧನಾ ಸಂಸ್ಥೆಯ ಕೃಷಿ ಬರ ಮೇಲ್ವಿಚಾರಣಾ ಮಾಹಿತಿಯ ಪ್ರಕಾರ, 2026ರ ಆಗಸ್ಟ್ ಅಂತ್ಯದಿಂದ ಸೆಪ್ಟೆಂಬರ್ ಮಧ್ಯದವರೆಗಿನ ಮೌಲ್ಯಮಾಪನದಲ್ಲಿ ಸುಮಾರು ಶೇ.19.34ರಷ್ಟು ಪ್ರದೇಶ ಮಧ್ಯಮದಿಂದ ತೀವ್ರ ಕೃಷಿ ಬರದ ಒತ್ತಡಕ್ಕೆ ಒಳಗಾಗಿತ್ತು. ಮತ್ತಷ್ಟು ಶೇ.55.6ರಷ್ಟು ಪ್ರದೇಶದಲ್ಲಿ ಅಲ್ಪ



ಪ್ರಮಾಣದ ಒತ್ತಡ ವರದಿಯಾಗಿತ್ತು. ಈ ಅಂಕಿ–ಅಂಶಗಳು ನಿರ್ದಿಷ್ಟ ಅವಧಿಯ ಪರಿಸ್ಥಿತಿಯನ್ನು ಸೂಚಿಸುತ್ತವೆಯೇ ಹೊರತು ಅಂತಿಮ ಬೆಳೆ ನಷ್ಟದ ಅಂದಾಜಲ್ಲ.

ತಮಿಳುನಾಡು ಮತ್ತು ಕರ್ನಾಟಕದ ಕೆಲವು ಪ್ರದೇಶಗಳಲ್ಲಿಯೂ ಕೃಷಿ ಬರದ ಲಕ್ಷಣಗಳು ಕಂಡುಬಂದಿವೆ. ಮಣ್ಣಿನ ತೇವಾಂಶ, ಬೆಳೆಗಳ ಬೆಳವಣಿಗೆಯ ಹಂತ, ನೀರಾವರಿ ಸೌಲಭ್ಯ ಹಾಗೂ ಮುಂದಿನ ಮಳೆಯ ಪ್ರಮಾಣವು ಬೆಳೆಗಳ ಸ್ಥಿತಿಯನ್ನು ನಿರ್ಧರಿಸಲಿವೆ.

**ಬೆಳೆ ಉತ್ಪಾದನೆ ಮೇಲೆ ಪರಿಣಾಮ;** ಕೃಷಿ ಸಚಿವಾಲಯದ ಸೆಪ್ಟೆಂಬರ್ ಆರಂಭದ ವರದಿಯ ಪ್ರಕಾರ, ಖಾರಿಫ್ ಬೆಳೆಗಳ ಬಿತ್ತನೆ ಪ್ರದೇಶ 1,086.31 ಲಕ್ಷ ಹೆಕ್ಟೇರ್‌ಗಳಾಗಿದ್ದು, ಹಿಂದಿನ ವರ್ಷದ ಇದೇ ಅವಧಿಗೆ ಹೋಲಿಸಿದರೆ 17.69 ಲಕ್ಷ ಹೆಕ್ಟೇರ್ ಕಡಿಮೆಯಾಗಿದೆ. ಭತ್ತದ ಬಿತ್ತನೆ ಪ್ರದೇಶದಲ್ಲಿ ಇಳಿಕೆ ಕಂಡುಬಂದಿದ್ದರೆ, ದ್ವಿದಳ ಧಾನ್ಯಗಳ ಬಿತ್ತನೆ ಪ್ರದೇಶ ಹೆಚ್ಚಾಗಿದೆ.

ಬಿತ್ತನೆ ಪ್ರದೇಶದ ಅಂಕಿ–ಅಂಶಗಳ ಆಧಾರದಲ್ಲಿ ಅಂತಿಮ ಬೆಳೆ ಉತ್ಪಾದನೆ ಅಥವಾ ನಷ್ಟವನ್ನು ನಿರ್ಧರಿಸಲು ಸಾಧ್ಯವಿಲ್ಲ. ಬೆಳೆಗಳ ಪ್ರಸ್ತುತ ಸ್ಥಿತಿ, ಮಣ್ಣಿನ ತೇವಾಂಶ ಮತ್ತು ಕೊಯ್ಲಿನ ಫಲಿತಾಂಶಗಳನ್ನು ಪರಿಶೀಲಿಸಬೇಕಿದೆ. ಮಳೆ ಅವಲಂಬಿತ ಪ್ರದೇಶಗಳಲ್ಲಿ ಅಗತ್ಯ ಹಂತದಲ್ಲಿ ನೀರಾವರಿ ಒದಗಿಸುವುದು ಮತ್ತು ಸ್ಥಳೀಯ ಪರಿಸ್ಥಿತಿಗೆ ತಕ್ಕಂತೆ ರಬಿ ಬಿತ್ತನೆಗೆ ಸಲಹೆ ನೀಡುವುದು ಮುಖ್ಯವಾಗಿದೆ.

**ಜಲಾಶಯಗಳ ಸಂಗ್ರಹದ ಮೇಲೆ ನಿಗಾ:** ಮುಂಗಾರು ಕೊರತೆಯ ಪರಿಣಾಮ ಜಲಾಶಯಗಳು ಮತ್ತು ಅಂತರ್ಜಲದ ಮೇಲೆ ಎಷ್ಟಿರಲಿದೆ ಎಂಬುದು ಆಯಾ ಜಲಾನಯನ ಪ್ರದೇಶದ ಮಳೆ, ನೀರಿನ ಒಳಹರಿವು, ಬಳಕೆ ಮತ್ತು ಸ್ಥಳೀಯ ಬೇಡಿಕೆಯನ್ನು ಅವಲಂಬಿಸಿದೆ. ಕೃಷಿ ಬರ ಕಾಣಿಸಿಕೊಂಡ ತಕ್ಷಣವೇ ಜಲಾಶಯಗಳಲ್ಲೂ ನೀರಿನ ಕೊರತೆ ಉಂಟಾಗುತ್ತದೆ ಎಂದರ್ಥವಲ್ಲ. ಅದೇ ರೀತಿ, ಕೆಲವೆಡೆ ಉತ್ತಮ ಮಳೆಯಾದರೂ ನೀರಿನ ಸಂಗ್ರಹ ಪೂರ್ಣವಾಗಿ ಚೇತರಿಸಿಕೊಳ್ಳುತ್ತದೆ ಎಂದು ಹೇಳಲಾಗದು.

ಜಲಾಶಯಗಳ ಸಂಗ್ರಹ, ಕೆರೆಗಳ ಸ್ಥಿತಿ, ಕಾಲುವೆಗಳಲ್ಲಿನ ನೀರಿನ ಹರಿವು ಮತ್ತು ಅಂತರ್ಜಲ ಮಟ್ಟವನ್ನು ನಿರಂತರವಾಗಿ ಪರಿಶೀಲಿಸುವ ಅಗತ್ಯವಿದೆ. ನೀರಾವರಿಗಾಗಿ ಅಂತರ್ಜಲದ ಅತಿಯಾದ ಬಳಕೆಯು ದೀರ್ಘಾವಧಿಯಲ್ಲಿ ನೀರಿನ ಲಭ್ಯತೆ ಹಾಗೂ ವಿದ್ಯುತ್ ಬೇಡಿಕೆಯ ಮೇಲೆ ಒತ್ತಡ ಹೆಚ್ಚಿಸಬಹುದು. ಕುಡಿಯುವ ನೀರು ಮತ್ತು ಜಾನುವಾರುಗಳ ಅಗತ್ಯಗಳಿಗೂ ಆದ್ಯತೆ ನೀಡಬೇಕಿದೆ.

**ಈಶಾನ್ಯ ಮುಂಗಾರು ನಿರ್ಣಾಯಕ:** 2026ರ ಅಕ್ಟೋಬರ್–ಡಿಸೆಂಬರ್ ಅವಧಿಯ ಮಳೆಯು ಮಣ್ಣಿನ ತೇವಾಂಶ ಮರುಪೂರಣ, ಜಲಮೂಲಗಳ ಪುನರ್ಭರ್ತಿ ಮತ್ತು ರಬಿ ಬೆಳೆಗಳ ಬೆಳವಣಿಗೆಗೆ ನಿರ್ಣಾಯಕವಾಗಿದೆ. ಭಾರತೀಯ ಹವಾಮಾನ ಇಲಾಖೆಯ ಋತುಮಾನದ ಮುನ್ಸೂಚನೆಯನ್ನು ಆಧರಿಸಿ, ಪ್ರಾದೇಶಿಕ ಮಳೆ ಪರಿಸ್ಥಿತಿಯನ್ನು ನಿರಂತರವಾಗಿ ಗಮನಿಸಬೇಕಿದೆ.

ಎಲ್ ನಿನೋ ಪರಿಸ್ಥಿತಿಯ ನಡುವೆಯೂ ದಕ್ಷಿಣ ಪರ್ಯಾಯ ದ್ವೀಪ ಭಾರತದ ಕೆಲವು ಭಾಗಗಳಲ್ಲಿ ಈಶಾನ್ಯ ಮುಂಗಾರು ಮಳೆ ಅನುಕೂಲಕರವಾಗುವ ಸಾಧ್ಯತೆ ಇದೆ. ಆದರೆ ಮಳೆಯ ಹಂಚಿಕೆ ಸಮಾನವಾಗಿರುತ್ತದೆ ಎಂಬ ಖಾತರಿ ಇಲ್ಲ. ಬಂಗಾಳಕೊಲ್ಲಿಯಲ್ಲಿ ಉಂಟಾಗುವ ವಾಯುಭಾರ ಕುಸಿತ ಅಥವಾ ಚಂಡಮಾರುತಗಳಿಂದ ಭಾರಿ ಮಳೆ, ಪ್ರವಾಹ ಮತ್ತು ಬೆಳೆ ಹಾನಿಯೂ ಸಂಭವಿಸಬಹುದು. ಹೀಗಾಗಿ ಮಳೆ ಕೊರತೆಯ ಜೊತೆಗೆ ಅತಿವೃಷ್ಟಿಯ ಅಪಾಯಕ್ಕೂ ಸಿದ್ಧತೆ ಅಗತ್ಯ.

### 2027ರ ಬೇಸಿಗೆಗೂ ಮುನ್ನ ಸಿದ್ಧತೆ

**2027ರ ಮಾರ್ಚ್–ಮೇ ಅವಧಿಯಲ್ಲಿ ಸಾಮಾನ್ಯಕ್ಕಿಂತ ಹೆಚ್ಚಿನ ತಾಪಮಾನ ಕಂಡುಬರುವ ಸಾಧ್ಯತೆಯ ಕುರಿತು ಕೆಲವು ಕಾಲೋಚಿತ ಮುನ್ಸೂಚನೆಗಳು ಸೂಚನೆ ನೀಡಿವೆ. ಆದರೆ ಇವು ಆರಂಭಿಕ ಮಾದರಿ ಆಧಾರಿತ ಅಂದಾಜುಗಳಾಗಿದ್ದು, ಶಾಖದ ಅಲೆಗಳ ಸಂಖ್ಯೆ ಅಥವಾ ತೀವ್ರತೆಯನ್ನು ಖಚಿತಪಡಿಸುವುದಿಲ್ಲ. ಮುಂದಿನ ಹವಾಮಾನ ಮುನ್ಸೂಚನೆಗಳ ಆಧಾರದಲ್ಲಿ ಯೋಜನೆಗಳನ್ನು ಪರಿಷ್ಕರಿಸಬೇಕಿದೆ. ಜಿಲ್ಲೆ ಮತ್ತು ತಾಲೂಕು ಮಟ್ಟದಲ್ಲಿ ಮಳೆ, ಮಣ್ಣಿನ ತೇವಾಂಶ, ಬೆಳೆಗಳ ಸ್ಥಿತಿ ಹಾಗೂ ಜಲಾಶಯಗಳ ಸಂಗ್ರಹವನ್ನು ನಿಯಮಿತವಾಗಿ ಪರಿಶೀಲಿಸುವುದು ಅಗತ್ಯ. ರೈತರಿಗೆ ಸ್ಥಳೀಯ ಪರಿಸ್ಥಿತಿಗೆ ತಕ್ಕ ಬೆಳೆ ಮತ್ತು ನೀರಾವರಿ ಸಲಹೆ ನೀಡಬೇಕು. ಕುಡಿಯುವ ನೀರಿನ ಪೂರೈಕೆ, ಜಾನುವಾರುಗಳ ರಕ್ಷಣೆ ಮತ್ತು ಬೇಸಿಗೆಯ ಶಾಖ ಎದುರಿಸಲು ಮುನ್ನೆಚ್ಚರಿಕೆ ಕ್ರಮಗಳನ್ನೂ ಕೈಗೊಳ್ಳಬೇಕು.**

**ಒಟ್ಟಾರೆ, 2026ರ ಮುಂಗಾರು ಮಳೆ ಕೊರತೆ ಮತ್ತು ಎಲ್ ನಿನೋ ಬಲಗೊಳ್ಳುತ್ತಿರುವ ಸೂಚನೆಗಳು ಮುನ್ನೆಚ್ಚರಿಕೆಯ ಅಗತ್ಯವನ್ನು ಎತ್ತಿಹಿಡಿದಿವೆ. ಆದರೆ ಮುಂದಿನ ದಿನಗಳಲ್ಲಿ ಬರ ಅಥವಾ ತೀವ್ರ ಶಾಖ ಖಚಿತ ಎನ್ನುವುದಕ್ಕಿಂತ, ನವೀಕೃತ ಹವಾಮಾನ ಮುನ್ಸೂಚನೆಗಳು ಹಾಗೂ ಸ್ಥಳೀಯ ಮಳೆ–ನೀರಿನ ಮಾಹಿತಿಯನ್ನು ಆಧರಿಸಿ ಕೃಷಿ ಮತ್ತು ಜಲಸಂಪನ್ಮೂಲ ನಿರ್ವಹಣೆಗೆ ಸಿದ್ಧತೆ ಮಾಡಿಕೊಳ್ಳುವುದು ಮುಖ್ಯವಾಗಿದೆ.**

# ಟಿ20 ಪಂದ್ಯ: ತಡರಾತ್ರಿವರೆಗೆ ಮೆಟ್ರೋ ಸಂಚಾರ

● ವಿಕ್ರಮ ವಾಹಿನಿ | ಬೆಂಗಳೂರು

ಭಾರತ ಮತ್ತು ವೆಸ್ಟ್ ಇಂಡೀಸ್ ನಡುವಿನ ಐದನೇ ಟಿ20 ಪಂದ್ಯ ಬೆಂಗಳೂರಿನಲ್ಲಿ ನಡೆಯಲಿರುವ ಹಿನ್ನೆಲೆಯಲ್ಲಿ ಕ್ರಿಕೆಟ್ ಅಭಿಮಾನಿಗಳ ಅನುಕೂಲಕ್ಕಾಗಿ ನಮ್ಮ ಮೆಟ್ರೋ ರೈಲು ಸೇವೆಗಳ ಅವಧಿಯನ್ನು ವಿಸ್ತರಿಸಲಾಗಿದೆ ಎಂದು ಬೆಂಗಳೂರು ಮೆಟ್ರೋ ರೈಲು ನಿಗಮ (ಬಿಎಂಆರ್‌ಸಿಎಲ್) ತಿಳಿಸಿದೆ.

ಪಂದ್ಯದ ದಿನ ಸಾಮಾನ್ಯವಾಗಿ ರಾತ್ರಿ 11 ಗಂಟೆಗೆ ಮುಕ್ತಾಯಗೊಳ್ಳುವ ಮೆಟ್ರೋ ಸೇವೆಗಳನ್ನು ವಿಸ್ತೃತ ವೇಳಾಪಟ್ಟಿಯಂತೆ ತಡರಾತ್ರಿವರೆಗೆ ಮುಂದುವರಿಸಲಾಗುತ್ತದೆ. ವೈಟ್‌ಫೀಲ್ಡ್ (ಕಾಡುಗೋಡಿ) ನಿಲ್ದಾಣದಿಂದ ರಾತ್ರಿ 12ಕ್ಕೆ, ಚಲ್ಲಘಟ್ಟದಿಂದ ರಾತ್ರಿ 12.15ಕ್ಕೆ ಕೊನೆಯ ರೈಲು ಹೊರಡಲಿದೆ. ಸಿಲ್ಕ್ ಇನ್‌ಸ್ಟಿಟ್ಯೂಟ್ ಮತ್ತು ಮಾದವಾರ ನಿಲ್ದಾಣಗಳಿಂದ ರಾತ್ರಿ 12.15ಕ್ಕೆ ಹಾಗೂ ಬೊಮ್ಮಸಂದ್ರದಿಂದ ರಾತ್ರಿ 12ಕ್ಕೆ ಕೊನೆಯ ರೈಲು ಸಂಚರಿಸಲಿದೆ.

ಆರ್.ವಿ. ರಸ್ತೆಯಿಂದ ಮರುದಿನ ಮುಂಜಾನೆ 1.30ಕ್ಕೆ ಕೊನೆಯ ರೈಲು ಹೊರಡಲಿದೆ. ಮೆಜೆಸ್ಟಿಕ್‌ನಿಂದ ನಾಲ್ಕೂ ಮಾರ್ಗಗಳಿಗೆ ರಾತ್ರಿ 1 ಗಂಟೆಗೆ ಕೊನೆಯ ರೈಲು ನಿರ್ಗಮಿಸಲಿದೆ.

ಪ್ರಯಾಣಿಕರು ಟಿಕೆಟ್ ಕೌಂಟರ್‌ಗಳಲ್ಲಿ ಸರತಿ ಸಾಲಿನಲ್ಲಿ ನಿಲ್ಲುವುದನ್ನು ತಪ್ಪಿಸಲು ಪಂದ್ಯದ ಡಿಜಿಟಲ್ ಟಿಕೆಟ್‌ಗಳಲ್ಲೇ ದ್ವಿಮುಖ ಮೆಟ್ರೋ ಪ್ರಯಾಣಕ್ಕೆ ಅನುಕೂಲವಾಗುವ ಕ್ಯೂಆರ್ ಕೋಡ್ ವ್ಯವಸ್ಥೆ ಕಲ್ಪಿಸಲಾಗಿದೆ. ಕ್ರೀಡಾಂಗಣದ ಕಬ್ಬನ್ ರಸ್ತೆ ಪ್ರವೇಶ ದ್ವಾರಗಳ ಮೂಲಕ ತೆರಳುವವರು ಕಬ್ಬನ್ ಪಾರ್ಕ್ ಮೆಟ್ರೋ ನಿಲ್ದಾಣವನ್ನು, ಲಿಂಕ್ ರಸ್ತೆ ಪ್ರವೇಶ ದ್ವಾರ ಬಳಸುವವರು ಮಹಾತ್ಮ ಗಾಂಧಿ ರಸ್ತೆ ಮೆಟ್ರೋ ನಿಲ್ದಾಣವನ್ನು ಬಳಸುವಂತೆ ಬಿಎಂಆರ್‌ಸಿಎಲ್ ಸೂಚಿಸಿದೆ.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481 vikramavahini@gmail.com
93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 191,